ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 45 ಸಂಚಿಕೆ- 45 | PAGE-8 ಪುಟ-8 | ಭಾನುವಾರ 23.03.2025 | RS.2/- ಬೆಲೆ 2/-

# ಜನಸಂಖ್ಯೆ ಆಧಾರದ ಕ್ಷೇತ್ರ ಪುನರ್ವಿಂಗಡಣೆ

# ದಕ್ಷಿಣ ರಾಜ್ಯಗಳಿಗೆ ಮಾರಕ

ಮಲ್ಲಮ್ಮ ನುಡಿ ವಾರ್ತೆ

ಚೆನ್ನೈ:ಮಾ.22: ಜನಸಂಖ್ಯೆ ಆಧಾರದ ಮೇಲೆ ಕ್ಷೇತ್ರಗಳ ಪುನರ್ವಿಂಗಡಣೆ ಆಗಬಾರದು. ನಾವೆಲ್ಲರೂ ಇದನ್ನು ವಿರೋಧಿಸುವಲ್ಲಿ ದೃಢವಾಗಿರಬೇಕು. ಸಂಸತ್ತಿನಲ್ಲಿ ಜನಪ್ರತಿನಿಧಿಗಳ ಸಂಖ್ಯೆ ಕಡಿಮೆಯಾದರೆ ಸಂಸತ್ ನಲ್ಲಿ ಅಭಿಪ್ರಾಯಗಳನ್ನು ವ್ಯಕ್ತಪಡಿಸುವ ನಮ್ಮ ಶಕ್ತಿ ಕಡಿಮೆಯಾಗುತ್ತದೆ ಎಂದು ತಮಿಳುನಾಡು ಸಿಎಂ ಎಂ.ಕೆ ಸ್ಟಾಲಿನ್ ಹೇಳಿದ್ದಾರೆ.

ಜನಸಂಖ್ಯೆಗೆ ಆಧಾರದ ಮೇಲೆ ಕ್ಷೇತ್ರಗಳ ಪುನರ್ವಿಂಗಡಣೆ ಮಾಡಲು ಹೊರಟಿರುವ ಕೇಂದ್ರ ಸರ್ಕಾರ ನಿರ್ಧಾರವನ್ನು ಖಂಡಿಸಿ ತಮಿಳುನಾಡು ಸರ್ಕಾರದ ನೇತೃತ್ವದಲ್ಲಿ ಸಭೆ ನಡೆಸಲಾಯಿತು. ಸಭೆಯಲ್ಲಿ ಡಿಸಿಎಂ ಡಿ.ಕೆ ಶಿವಕುಮಾರ್, ಕೇರಳ ಸಿಎಂ ಪಿಣರಾಯಿ ವಿಜಯನ್, ತೆಲಂಗಾಣ ಸಿಎಂ ರೇವಂತ್ ರೆಡ್ಡಿ ಸೇರಿ ಹಲವು ನಾಯಕರು ಭಾಗಿಯಾಗಿದ್ದರು.

ಸಭೆಯಲ್ಲಿ ಆರಂಭಿಕವಾಗಿ ಮಾತನಾಡಿದ ಎಂ.ಕೆ ಸ್ಟಾಲಿನ್, ಜನಸಂಖ್ಯೆ ಆಧಾರದ ಮೇಲೆ ಕ್ಷೇತ್ರ ಪುನರ್ ವಿಂಗಡಣೆಗೆ ವಿರೋಧಿಸಬೇಕಿದೆ. ನಮ್ಮ ಪ್ರಾತಿನಿಧ್ಯ ಕಡಿಮೆಯಾದರೆ ಅದು ರಾಜ್ಯಗಳಿಗೆ ಹಣವನ್ನು ಪಡೆಯಲು ಹೋರಾಟಕ್ಕೆ ಕಾರಣವಾಗುತ್ತದೆ. ನಮ್ಮ ಇಚ್ಛೆ ಇಲ್ಲದಿದ್ದರೂ ಕಾನೂನುಗಳನ್ನು ಜಾರಿಗೆ ತರಲಾಗುತ್ತದೆ ನಮ್ಮ ಜನರ ಮೇಲೆ ಪರಿಣಾಮ ಬೀರುವ ನಿರ್ಧಾರಗಳನ್ನು ತೆಗೆದುಕೊಳ್ಳಲಾಗುತ್ತದೆ. ವಿದ್ಯಾರ್ಥಿಗಳು ಪ್ರಮುಖ ಅವಕಾಶಗಳನ್ನು ಕಳೆದುಕೊಳ್ಳುತ್ತಾರೆ. ರೈತರು ಬೆಂಬಲವಿಲ್ಲದೆ ಹಿನ್ನಡೆ ಎದುರಿಸಬೇಕಾಗುತ್ತದೆ. ನಮ್ಮ ಸಂಸ್ಕೃತಿ ಮತ್ತು ಬೆಳವಣಿಗೆ




ಅಪಾಯ ಎದುರಿಸಬೇಕಾಗುತ್ತದೆ. ಸಾಮಾಜಿಕ ನ್ಯಾಯದ ಮೇಲೆ ಪರಿಣಾಮ ಬೀರುತ್ತದೆ ಎಂದರು.

ಕ್ಷೇತ್ರಗಳ ಪುನರ್ವಿಂಗಡಣೆ ಸಂಭವಿಸಿದಲ್ಲಿ ಅಥವಾ ಪ್ರಾತಿನಿಧ್ಯ ಕಡಿಮೆಯಾದರೆ ನಾವು ನಮ್ಮದೇ ದೇಶದಲ್ಲಿ ರಾಜಕೀಯ ಅಧಿಕಾರವನ್ನು ಕಳೆದುಕೊಳ್ಳುವ ನಾಗರಿಕರಾಗುತ್ತೇವೆ. ಪ್ರಜಾಪ್ರಭುತ್ವ ಪ್ರಾತಿನಿಧ್ಯವನ್ನು ಬಲಪಡಿಸುವ ಯಾವುದನ್ನೂ ನಾವು ವಿರೋಧಿಸುವುದಿಲ್ಲ. ಆದರೆ ಆ ಕ್ರಮವು ನ್ಯಾಯಯುತವಾಗಿರಬೇಕು ಮತ್ತು ನ್ಯಾಯಯುತ ರಾಜಕೀಯ ಪ್ರಾತಿನಿಧ್ಯದ ಮೇಲೆ ಪರಿಣಾಮ ಬೀರಬಾರದು ಈ ಪ್ರತಿಭಟನೆಯು ಗಡಿ ನಿರ್ಣಯದ ವಿರುದ್ಧವಲ್ಲ. ಬದಲಾಗಿ ನ್ಯಾಯಯುತ ಗಡಿ ನಿರ್ಣಯಕ್ಕಾಗಿ ಒತ್ತಾಯಿಸುವುದಾಗಿದೆ ಎಂದು ಸ್ಪಷ್ಟಪಡಿಸಿದರು.

ಸಭೆಯಲ್ಲಿ ತಮಿಳುನಾಡು ಉಪಮುಖ್ಯಮಂತ್ರಿ ಉದಯನಿಧಿ ಸ್ಟಾಲಿನ್ ಮಾತನಾಡಿ, ದಶಕಗಳಿಂದ ದಕ್ಷಿಣದ ರಾಜ್ಯಗಳು ಜನಸಂಖ್ಯಾ ಬೆಳವಣಿಗೆಯನ್ನು ನಿಯಂತ್ರಿಸಲು ಮತ್ತು ನಿರ್ವಹಿಸಲು ಗಮನಾರ್ಹ ಪ್ರಯತ್ನಗಳನ್ನು ಮಾಡಿವೆ. ಸ್ಥಿರ ಜನಸಂಖ್ಯಾ ಬೆಳವಣಿಗೆ ನಾವು ನೀತಿಗಳನ್ನು ಪರಿಚಯಿಸಿದ್ದೇವೆ. ಜಾಗೃತಿ ಮೂಡಿಸಿದ್ದೇವೆ ಮತ್ತು ರಾಷ್ಟ್ರದ ಗುರಿಯನ್ನು ಸಾಧಿಸಿದ್ದೇವೆ. ಇತರ ಕೆಲವು ರಾಜ್ಯಗಳು ತ್ವರಿತ ಜನಸಂಖ್ಯಾ ಬೆಳವಣಿಗೆಯನ್ನು ಅನುಭವಿಸುತ್ತಲೇ ಇದ್ದರೂ ನಾವು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿದ್ದೇವೆ. ಪರಿಣಾಮವಾಗಿ ನಾವು ಇತರ ಹಲವು ರಾಜ್ಯಗಳಿಗಿಂತ ಬಹಳ ಮೊದಲೇ ಜನಸಂಖ್ಯಾ ನಿಯಂತ್ರಣ ದರವನ್ನು ತಲುಪಿದ್ದೇವೆ. ಆದರೆ ಈ ಸಾಧನೆಗೆ ಪ್ರತಿಫಲ ಪಡೆಯುವ ಬದಲು ನಾವು ಈಗ ನಮ್ಮ ರಾಜಕೀಯ ಪ್ರಾತಿನಿಧ್ಯವನ್ನು ಕಳೆದುಕೊಳ್ಳುವ ಅಪಾಯದಲ್ಲಿದ್ದೇವೆ ಎಂದರು.

ತೆಲಂಗಾಣ ಸಿಎಂ ರೇವಂತ್ ರೆಡ್ಡಿ ಮಾತನಾಡಿ, ಇಂದು ನಾವು ದೇಶವನ್ನು ಎದುರಿಸುತ್ತಿರುವ ದೊಡ್ಡ ಸವಾಲನ್ನು ಎದುರಿಸುತ್ತಿದ್ದೇವೆ. ಬಿಜೆಪಿ ಜನಸಂಖ್ಯಾ ದಂಡದ ನೀತಿಯನ್ನು ಜಾರಿಗೆ ತರುತ್ತಿದೆ. ನಾವು ಒಂದೇ ದೇಶ ಅದನ್ನು ಗೌರವಿಸುತ್ತೇವೆ. ಆದರೆ ಈ ಪ್ರಸ್ತಾವಿತ ಗಡಿ ನಿರ್ಣಯವನ್ನು ನಾವು ಸ್ವೀಕರಿಸಲು ಸಾಧ್ಯವಿಲ್ಲ. ಏಕೆಂದರೆ ಅದು ನಮ್ಮನ್ನು ರಾಜಕೀಯವಾಗಿ ಮಿತಿಗೊಳಿಸುತ್ತದೆ. ಇದು ನಮ್ಮನ್ನು ಕಾರ್ಯನಿರ್ವಹಿಸುವ ರಾಜ್ಯಗಳಾಗಿರುವುದಕ್ಕೆ ಶಿಕ್ಷಿಸುತ್ತದೆ. ಬಿಜೆಪಿ ಯಾವುದೇ ಅನ್ಯಾಯದ ಗಡಿ ನಿರ್ಣಯವನ್ನು ಜಾರಿಗೆ ತರುವುದನ್ನು ನಾವು ತಡೆಯಬೇಕು ಎಂದು ಹೇಳಿದರು.

ಕೇರಳ ಸಿಎಂ ಪಿಣರಾಯಿ ವಿಜಯನ್ ಮಾತನಾಡಿ, ಈ ಸಮಸ್ಯೆಯ ಗಂಭೀರತೆಯನ್ನು ಗುರುತಿಸಿ ನಾವು, ಕೇರಳ, ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಕರ್ನಾಟಕ, ಒಡಿಶಾ, ಪಶ್ಚಿಮ ಬಂಗಾಳ ಮತ್ತು ಪಂಜಾಬ್ ಈಗ ಪ್ರತಿಭಟನೆಯಲ್ಲಿ ಒಂದಾಗುತ್ತಿದ್ದೇವೆ. ತಮಿಳುನಾಡು ಸಿಎಂ ಎಂಕೆ ಸ್ಟಾಲಿನ್ ಅವರ ಆಹ್ವಾನದ ಮೇರೆಗೆ ಜಂಟಿ ಕ್ರಿಯಾ ಸಮಿತಿಯನ್ನು ರಚಿಸುವ ಮೂಲಕ ನಮ್ಮ ಸಂಘಟಿತ ಪ್ರತಿರೋಧದ ಆರಂಭವನ್ನು ಗುರುತಿಸಲು ನಾವು ಇಲ್ಲಿ ಒಟ್ಟುಗೂಡಿದ್ದೇವೆ. ಹಣಕಾಸು ನೀತಿಗಳಿಂದ ಭಾಷಾ ನೀತಿಗಳಿಂದ ಸಾಂಸ್ಕೃತಿಕ ನೀತಿಗಳವರೆಗೆ ಮತ್ತು ಪ್ರಾತಿನಿಧ್ಯದ ಸ್ಥಿರೀಕರಣದವರೆಗೆ ಕೇಂದ್ರ ಸರ್ಕಾರದ ಕ್ರಮಗಳು ಭಾರತದ ಒಕ್ಕೂಟ ವ್ಯವಸ್ಥೆ ಮತ್ತು ಪ್ರಜಾಪ್ರಭುತ್ವ ಚೌಕಟ್ಟನ್ನು ಅಸ್ಥಿರಗೊಳಿಸುತ್ತಿವೆ. ಇದನ್ನು ಅಂಗೀಕರಿಸಲು ಬಿಡಲಾಗುವುದಿಲ್ಲ ಎಂದರು. ಸಭೆ ಬಳಿಕ ಮುಂದಿನ ಸಭೆಯನ್ನು ಹೈದ್ರಬಾದ್ ನಲ್ಲಿ

(2ನೇ ಪುಟ ನೋಡಿ)

## ಕರ್ನಾಟಕ ಬಂದ್‌ಗೆ ಬೀದರ್‌ನಲ್ಲಿ ನೀರಸ ಪ್ರತಿಕ್ರಿಯೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 22 : ಸಾರಿಗೆ ಸಿಬ್ಬಂದಿಗಳ ಮೇಲೆ ಎಂಇಎಸ್ ಪುಡಾಂಡಿಕೆ ಖಂಡಿಸಿ ಕನ್ನಡ ಪರ ಸಂಘಟನೆಗಳ ಒಕ್ಕೂಟ ಶನಿವಾರ (ಮಾ.22) ಕರೆ ನೀಡಿದ್ದ ಕರ್ನಾಟಕ ಬಂದ್ ಗೆ ಬೀದರ್ ಜಿಲ್ಲೆಯಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಕೇವಲ ಪ್ರತಿಭಟನೆಗಷ್ಟೇ ಸೀಮಿತವಾಯಿತು. ಅಂಗಡಿ ಮುಗ್ಗಟ್ಟು, ಶಾಲಾ-ಕಾಲೇಜುಗಳು ಎಂದಿನಂತೆ ತೆರೆದಿದ್ದರೆ, ಸಾರಿಗೆ ಸಂಸ್ಥೆಯ ಬಸ್ ಗಳು, ಆಟೋ ಮತ್ತು ಇತರೆ ವಾಹನಗಳು ಎಂದಿನಂತೆ ರಸ್ತೆಗಿಳಿದಿದ್ದವು.

ಜನಜೀವನ ಸಹಜವಾಗಿದೆ.

(2ನೇ ಪುಟ ನೋಡಿ)

## ಅಪರಿಚಿತ ವಾಹನ ಡಿಕ್ಕಿ ಇಬ್ಬರು ಬೈಕ್ ಸವಾರರ ಸಾವು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 22 : ಅಪರಿಚಿತ ವಾಹನವೊಂದು ಢಿಕ್ಕಿ ಹೊಡೆದ ಪರಿಣಾಮ ಇಬ್ಬರು ಬೈಕ್ ಸವಾರರು ಮೃತಪಟ್ಟ ಘಟನೆ ಹುಮನಾಬಾದ್ ತಾಲ್ಲೂಕಿನ ಸಿಂಧನಕೇರಾ ಕ್ರಾಸ್ ಬಳಿ ನಡೆದಿದೆ. ಸಿಂಧನಕೇರಾ ಗ್ರಾಮದ ನಿವಾಸಿಗಳಾದ ಸುಧಾಕರ್ ಹಾದಿಮನಿ (32) ಮತ್ತು ಸಂಜುಕುಮಾರ್ ಮೇತ್ರೆ (30) ಮೃತ ಬೈಕ್ ಸವಾರರು ಎಂದು ಗುರುತಿಸಲಾಗಿದೆ. ಶುಕ್ರವಾರ ಬೈಕ್ ಮೇಲೆ ತೆರಳುತ್ತಿದ್ದಾಗ ಕಾರೊಂದು ಢಿಕ್ಕಿ ಹೊಡೆದು ಪರಾರಿಯಾಗಿದ್ದು, ಅಪಘಾತದಲ್ಲಿ ಸಂಜುಕುಮಾರ್ ಎನ್ನುವವರು ಸ್ಥಳದಲ್ಲಿಯೇ ಮೃತಪಟ್ಟರೆ, ಸುಧಾಕರ್ ಅವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ ಎನ್ನಲಾಗಿದೆ. ಈ ಘಟನೆಗೆ ಸಂಬಂಧಿಸಿದಂತೆ ಹುಮನಾಬಾದ್ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಒಂದು ತಿಂಗಳಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಲೋಕಾರ್ಪಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.22 ಮುಂದಿನ ಒಂದು ತಿಂಗಳಿನಲ್ಲಿ ನಗರದ ಜಿಮ್ಸ್ ಆಸ್ಪತ್ರೆಯ ಕಟ್ಟಡದ 8 ರಿಂದ 10ನೇ ಮಹಡಿಯಲ್ಲಿ ನಿರ್ಮಾಣವಾಗಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಲೋಕಾರ್ಪಣೆಗೊಳಿಸಲಾಗುವುದು ಎಂದು ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶಿಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಹೇಳಿದರು.



ಶನಿವಾರ ಆಸ್ಪತ್ರೆಗೆ ಭೇಟಿ ನೀಡಿದ ಅವರು ಅಂತಿಮ

(2ನೇ ಪುಟ ನೋಡಿ)

## ಶಾಸಕ ಚವಾಣ್ ವಿರುದ್ಧದ ಸರ್ಕಾರಿ ಜಮೀನು ಕಬಳಿಕೆ ಪ್ರಕರಣ: ಡಿಸಿಗೆ ವಾರಂಟ್ ಆದೇಶ

ಬೀದರ.ಮಾ. 22:ಔರಾದ್ ಶಾಸಕ ಪ್ರಭು ಚವಾಣ್ ವಿರುದ್ಧದ ಸರ್ಕಾರಿ ಜಮೀನು ಕಬಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ವರದಿ ನೀಡದ ಕಾರಣಕ್ಕೆ ಬೆಂಗಳೂರಿನ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯವು ಬೀದರ ಜಿಲ್ಲಾಧಿಕಾರಿಗೆ ವಾರಂಟ್ ಜಾರಿಗೆ ಆದೇಶಿಸಿದೆ.



ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೂಲಕ ಒಂದು ಲಕ್ಷ ರೂ.ಭದ್ರತೆಯ ಜಾಮೀನು ಸಹಿತ ವಾರಂಟ್ ಜಾರಿಗೊಳಿಸಲು ಆದೇಶ ಹೊರಡಿಸಿದೆ.

ಪ್ರಕರಣದ ವಿವರ: ಶಾಸಕ ಪ್ರಭು ಚವಾಣ್ ಅವರು ನಕಲಿ ದಾಖಲೆ ಸೃಷ್ಟಿಸಿ ಬೀದರ ತಾಲ್ಲೂಕಿನ ಕೊಳಾರ (ಬಿ) ಗ್ರಾಮದ ಸರ್ವೆ ಸಂಖ್ಯೆ 102 ರಲ್ಲಿರುವ 3 ಎಕರೆ 19 ಗುಂಟೆ ಸರ್ಕಾರಿ ಜಮೀನು ಒತ್ತುವರಿ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿ ಔರಾದ್ ಚಾಂದೋರಿ ಗ್ರಾ.ಪಂ ಮಾಜಿ ಅಧ್ಯಕ್ಷ ದೀಪಕ್ ಪಾಟೀಲ ಚಾಂದೋರಿ ಅವರು ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ದಾವೆ ಹೂಡಿದ್ದರು.

ಚವಾಣ್ ಜತೆಗೆ ಬೀದರ ಜಿಲ್ಲಾಧಿಕಾರಿ, ಉಪ ವಿಭಾಗಾಧಿಕಾರಿ, ತಹಶೀಲ್ದಾರ್, ಭೂ ದಾಖಲೆಗಳ ಹೆಚ್ಚುವರಿ ನಿರ್ದೇಶಕ ಹಾಗೂ ಬೀದರ ಸಬ್ ರಿಜಿಸ್ಟ್ರಾರ್ ಅವರ ಮೇಲೂ ಖಟ್ಲೆ ಹೂಡಿದ್ದರು. ಜಿಲ್ಲಾಧಿಕಾರಿ ಹಾಗೂ ತಹಶೀಲ್ದಾರ್ ಒತ್ತುವರಿಗೆ ಸಹಕಾರ ನೀಡಿದ್ದಾರೆ ಎಂದು ಆರೋಪಿಸಿದ್ದರು. ಜಮೀನು ಕಬಳಿಕೆ ಮಾಡಿಕೊಂಡವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಂಡು, ಜಮೀನು ಮರಳಿ ಸರ್ಕಾರದ ಸುಪರ್ದಿಗೆ ಪಡೆಯಬೇಕು ಎಂದು ಮನವಿ ಮಾಡಿದ್ದರು.

ಪ್ರಕರಣದ ವಿಚಾರಣೆ ಕೈಗೆತ್ತಿಕೊಂಡ ನ್ಯಾಯಾಲಯ 2024 ರ ಅ. 5 ರಂದು ದೀಪಕ್ ಪಾಟೀಲ ಚಾಂದೋರಿ ಅವರ ಹೇಳಿಕೆ ಪಡೆದಿತ್ತು. 2024 ರ ಡಿ. 12 ರ ಒಳಗೆ ಪ್ರಕರಣಕ್ಕೆ ಸಂಬಂಧಿಸಿದಂತೆ ವರದಿ ಸಲ್ಲಿಸಲು ಜಿಲ್ಲಾಧಿಕಾರಿಗೆ ಆದೇಶಿಸಿತ್ತು. ಬಳಿಕ ವರದಿ ಸಲ್ಲಿಕೆಗೆ 2025 ರ ಫೆ. 21 ರ ವರೆಗೆ ಕಾಲಾವಕಾಶ ನೀಡಿತ್ತು. ಅನಂತರ ಮಾರ್ಚ್

(2ನೇ ಪುಟ ನೋಡಿ)

## 99 ಗಂಟೆ 34 ನಿಮಿಷಗಳ ಕಾಲ ನಡೆದ ಅಧಿವೇಶನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ. 22:ಹದಿನಾರನೇ ವಿಧಾನಸಭೆಯ ಆರನೇ ಅಧಿವೇಶನವು 03ನೇ ಮಾರ್ಚ್ ರಿಂದ 21ನೇ ಮಾರ್ಚ್, 2025 ರವರೆಗೆ ಒಟ್ಟು 15 ದಿನಗಳ ಕಾಲ ಸುಮಾರು 99 ಗಂಟೆ 34 ನಿಮಿಷಗಳ ಕಾಲ ಕಾರ್ಯಕಲಾಪ ನಡೆದು ಮುಕ್ತಾಯಗೊಂಡಿದೆ ಎಂದು ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ.ಖಾದರ್ ಫರೀದ್ ತಿಳಿಸಿದರು.

ಇಂದು ವಿಧಾನಸೌಧದಲ್ಲಿ ಹಮ್ಮಿಕೊಳ್ಳಲಾದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾರ್ಚ್ 3 ರಂದು ಗೌರವಾನ್ವಿತ ರಾಜ್ಯಪಾಲರು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ಭಾಷಣ ಮಾಡಿದರು. ಮಾನ್ಯ ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದಲ್ಲಿ 14 ಸದಸ್ಯರುಗಳು ಒಟ್ಟು 08 ಗಂಟೆ 02 ನಿಮಿಷಗಳ ಕಾಲ ಭಾಗವಹಿಸಿದ್ದು, ವಂದನಾ ನಿರ್ಣಯದ ಪ್ರಸ್ತಾವವನ್ನು ಮಾರ್ಚ್ 17 ರಂದು ಅಂಗೀಕರಿಸಲಾಗಿದೆ.



2025-26 ಆಯವ್ಯಯ ಅಂದಾಜುಗಳನ್ನು ಮುಖ್ಯಮಂತ್ರಿಯವರು ಮಾರ್ಚ್ 7 ರಂದು ಮಂಡಿಸಿದ್ದಾರೆ. ಆಯವ್ಯಯದ ಸಾಮಾನ್ಯ ಚರ್ಚೆಯಲ್ಲಿ 80 ಮಾನ್ಯ ಸದಸ್ಯರುಗಳು ಒಟ್ಟು 28 ಗಂಟೆ 56 ನಿಮಿಷಗಳ ಕಾಲ ಭಾಗವಹಿಸಿದ್ದು, ಮಾರ್ಚ್ 21 ರಂದು ಮಾನ್ಯ ಮುಖ್ಯಮಂತ್ರಿಯವರು ಉತ್ತರ ನೀಡಿದ ನಂತರ ಮತಕ್ಕೆ ಹಾಕಿ ಅಂಗೀಕರಿಸಲಾಯಿತು. 2024-25ನೇ ಸಾಲಿನ ಪೂರಕ ಅಂದಾಜುಗಳ (ಮೂರನೇ ಹಾಗೂ ಅಂತಿಮ ಕಂತು) ಬೇಡಿಕೆಗಳನ್ನು ಮಾರ್ಚ್ 19 ರಂದು ಮಂಡಿಸಿದ್ದು, ಮಾರ್ಚ್ 21 ರಂದು ಮತಕ್ಕೆ ಹಾಕಿ ಅಂಗೀಕರಿಸಲಾಗಿದೆ.

ಇತ್ತೀಚೆಗೆ ನಿಧನ ಹೊಂದಿದ ಗಣ್ಯರುಗಳಿಗೆ ಸಂತಾಪ ಸೂಚನಾ ನಿರ್ಣಯವನ್ನು ಮಂಡಿಸಿ, ಅಂಗೀಕರಿಸಲಾಗಿದೆ. ಮಾನ್ಯ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಬಗ್ಗೆ ಕಾರ್ಯದರ್ಶಿಯವರ ವರದಿಯನ್ನು ಮಂಡಿಸಲಾಗಿದೆ.

ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಮಾರ್ಚ್ 2023ಕ್ಕೆ ಕೊನೆಗೊಂಡ ವರ್ಷದ ರಾಜ್ಯ ಸಾರ್ವಜನಿಕ ವಲಯ ಉದ್ದಿಮೆಗಳ ಮೇಲಿನ ವರದಿಯನ್ನು ಸದನದಲ್ಲಿ ಮಂಡಿಸಲಾಗಿದೆ ಎಂದು ತಿಳಿಸಿದರು.

2024ನೇ ಸಾಲಿನ ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕವನ್ನು ಪರಿಶೀಲಿಸಿ, ವರದಿ ನೀಡಲು ರಚಿಸಲಾಗಿದ್ದ ಕರ್ನಾಟಕ ವಿಧಾನಮಂಡಲದ ಜಂಟಿ ಪರಿಶೀಲನಾ ಸಮಿತಿಯ ವರದಿ, ಕರ್ನಾಟಕ ವಿಧಾನ ಸಭೆಯ ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ 2024-25ನೇ ಸಾಲಿನ ಐದನೇ ವರದಿ, ಕರ್ನಾಟಕ ವಿಧಾನಸಭೆಯ ಸರ್ಕಾರಿ ಭರವಸೆಗಳ ಸಮಿತಿಯ 2023-24ನೇ ಸಾಲಿನ ನಾಲ್ಕನೇ ವರದಿ ಹಾಗೂ ಕರ್ನಾಟಕ ವಿಧಾನಸಭೆಯ ಅಂದಾಜುಗಳ ಸಮಿತಿಯ 2024-25ನೇ ಸಾಲಿನ ಎರಡನೇ ವರದಿಯನ್ನು ಸದನದಲ್ಲಿ ಮಂಡಿಸಲಾಗಿದೆ.

(2ನೇ ಪುಟ ನೋಡಿ)

ಒಂದನೇ ಪುಟದಿಂದ

## ಬೀದರ್‌ನಲ್ಲಿ ನೀರಸ ಪ್ರತಿಕ್ರಿಯೆ

ಕನ್ನಡ ಸೇನೆ ಕರ್ನಾಟಕ ಮತ್ತು ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಘಟಕದಿಂದ ನಗರದ ಬಸವೇಶ್ವರ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ರ್ಯಾಲಿ ನಡೆಸಿ, ಬಳಿಕ ಸಿಎಂಗೆ ಬರೆದ ಮನವಿ ಪತ್ರವನ್ನು ಸಲ್ಲಿಸಲಾಯಿತು.

ಮಹಾರಾಷ್ಟ್ರ ಪುಂಡರ ವಿರುದ್ಧ ಆಕ್ರೋಶ ಹಿನ್ನೆಲೆ ಗಡಿ ಜಿಲ್ಲೆ ಬೀದರ್ ನಲ್ಲಿ ಮಹಾರಾಷ್ಟ್ರ ಸಾರಿಗೆ ಸಂಸ್ಥೆಯ ಬಸ್ ಗಳು ಜಿಲ್ಲೆಗೆ ಪ್ರವೇಶ ಮಾಡದಂತೆ ಅಲ್ಲಿನ ಸಾರಿಗೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿತ್ತು. ಹಾಗಾಗಿ ಬಸ್ ಗಳು ಗಡಿ ರೇಖೆವರೆಗೆ ಮಾತ್ರ ಸಂಚರಿಸಿ ವಾಪಸ್ಸಾದವು. ಇದರ ಹೊರತಾಗಿಯೂ ಬೆಳಿಗ್ಗೆ ಲಾತೂರ್ – ಹೈದರಾಬಾದ್ ಬಸ್ ಬೀದರಗೆ ಪ್ರವೇಶಿಸಿತ್ತು. ಮುನ್ನೆಚ್ಚರಿಕೆ ಕ್ರಮವಾಗಿ ಗಡಿವರೆಗೆ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು.

### ಕಬಳಿಕೆ ಪ್ರಕರಣ: ಡಿಸಿಗೆ ವಾರಂಟ್ ಆದೇಶ

13 ರ ವರೆಗೆ ಕಾಲಾವಕಾಶ ಕೊಟ್ಟಿತ್ತು. ಆದರೂ, ಜಿಲ್ಲಾಡಳಿತ ವರದಿ ಸಲ್ಲಿಸಿರಲಿಲ್ಲ. ಹೀಗಾಗಿ ಜಿಲ್ಲಾಧಿಕಾರಿಗೆ ಜಾಮೀನು ಸಹಿತ ವಾರಂಟ್ ಜಾರಿಗೊಳಿಸಲು ಆದೇಶಿಸಿದೆ.

ರಾಜಕೀಯ ಪ್ರಭಾವಕ್ಕೆ ಮಣಿದು ವರದಿ ಸಲ್ಲಿಸಿಲ್ಲ ಶಾಸಕ ಪ್ರಭು ಚವಾಣ್ ಅವರ ವಿರುದ್ಧದ ಸರ್ಕಾರಿ ಜಮೀನು ಒತ್ತುವರಿ ಪ್ರಕರಣದಲ್ಲಿ ಜಿಲ್ಲಾಡಳಿತ ರಾಜಕೀಯ ಪ್ರಭಾವಕ್ಕೆ ಮಣಿದು ವರದಿ ಸಲ್ಲಿಸಿಲ್ಲ ಎಂದು ಪ್ರಕರಣದ ದೂರುದಾರ ದೀಪಕ್ ಪಾಟೀಲ ಚಾಂದೋರಿ ಆರೋಪಿಸಿದ್ದಾರೆ. ನಾನು ಪ್ರಕರಣ ದಾಖಲಿಸಿದ್ದು ಸರ್ಕಾರದ ಆಸ್ತಿ ಉಳಿಸುವುದಕ್ಕಾಗಿಯೇ ಹೊರತು ವೈಯಕ್ತಿಕ ಲಾಭಕ್ಕಾಗಿ ಅಲ್ಲ. ಹಿಂದೆ ಜಿಲ್ಲಾಧಿಕಾರಿಯಾಗಿದ್ದ ಎಚ್.ಆರ್. ಮಹಾದೇವ ಅವರು ಜಮೀನು ಸರ್ಕಾರ–ಕ್ಕೆ ಸೇರಿದ್ದು ಎಂದು ಆದೇಶ ಹೊರಡಿಸಿದ್ದರು. ಆದರೆ, ಅನಂತರ ಜಿಲ್ಲಾಡಳಿತ ಯಾವುದೇ ಕ್ರಮ ಕೈಗೊಂಡಿಲ್ಲ. ಹೀಗಾಗಿ ಅನಿವಾರ್ಯವಾಗಿ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದ ಮೊರೆ ಹೋಗಬೇಕಾಯಿತು ಎಂದು ಹೇಳಿದ್ದಾರೆ. ವಿಶೇಷ ನ್ಯಾಯಾಲಯದ ಆದೇಶವು ಕಾನೂನಿಗಿಂತ ಯಾರೂ ದೊಡ್ಡವರಲ್ಲ ಎಂಬ ಸಂದೇಶ ನೀಡಿದೆ ಎಂದು ತಿಳಿಸಿದ್ದಾರೆ. ಪ್ರಕರಣದಲ್ಲಿ ನ್ಯಾಯಾಲಯದ ಸೂಚನೆ ನಂತರವೂ ವರದಿ ಸಲ್ಲಿಸದಿರುವುದು ಜಿಲ್ಲಾಡಳಿತ ಸಂಪೂರ್ಣ ರಾಜಕೀಯ ಪ್ರಭಾವಕ್ಕೆ ಒಳಗಾಗಿರುವುದರ ನಿದರ್ಶನವಾಗಿದೆ. ಸರ್ಕಾರಿ ನೌಕರರು ಈಗಲಾದರೂ ಎಚ್ಚೆತ್ತುಕೊಳ್ಳಬೇಕು. ನಿಯಮಾನುಸಾರ ಕಾರ್ಯ ನಿರ್ವಹಿಸಬೇಕು. ಇಲ್ಲವಾದಲ್ಲಿ ಕಾನೂನು ಹೋರಾಟ ಮುಂದುವರಿಸಲಾಗುವುದು ಎಂದು ಎಚ್ಚರಿಸಿದ್ದಾರೆ.

## ದಕ್ಷಿಣ ರಾಜ್ಯಗಳಿಗೆ ಮಾರಕ

ನಡೆಸಲು ನಿರ್ಧರಿಸಲಾಯಿತು.

ಡಿಎಂಕೆ ನೇತೃತ್ವದ ಸಭೆಗೆ ತಮಿಳುನಾಡು ಬಿಜೆಪಿ ಅಧ್ಯಕ್ಷ ಕೆ ಅಣ್ಣಾಮಲೈ ವಿರೋಧ ವ್ಯಕ್ತಪಡಿಸಿ ಕಪ್ಪು ಬಟ್ಟೆ ಧರಿಸಿ ಪ್ರತಿಭಟನೆ ನಡೆಸಿದರು. ಸಭೆಯ ಬಗ್ಗೆ ಅಣ್ಣಾಮಲೈ ಪ್ರತಿಕ್ರಿಯಿಸಿ, ಡಿಎಂಕೆ ಅಧಿಕಾರಕ್ಕೆ ಬಂದ ನಂತರ ಕಳೆದ ನಾಲ್ಕು ವರ್ಷಗಳಲ್ಲಿ ರಾಜಕೀಯ ಲಾಭಕ್ಕೆ ತಮಿಳುನಾಡಿನ ಹಿತಾಸಕ್ತಿಗಳನ್ನು ನಿರಂತರವಾಗಿ ಬಲಿಕೊಟ್ಟಿದೆ. ತಮಿಳುನಾಡು ಸಿಎಂ ಎಂದಿಗೂ ಕೇರಳಕ್ಕೆ ಹೋಗಿ ಸಮಸ್ಯೆಗಳನ್ನು ಪರಿಹರಿಸಿಲ್ಲ. ಆದರೆ ಇಂದು ಕೇರಳ ಸಿಎಂ ಅವರನ್ನು ತಾವು ಸೃಷ್ಟಿಸಿರುವ ಕೃತಕ ಸಮಸ್ಯೆಯ ಬಗ್ಗೆ ಮಾತನಾಡಲು ಆಹ್ವಾನಿಸಿದ್ದಾರೆ ಎಂದು ಕಿಡಿಕಾರಿದರು.

ಕೇರಳ ಸಿಎಂ ಅವರನ್ನು ಆಹ್ವಾನಿಸಿ ತಮಿಳುನಾಡಿನ ಸಮಸ್ಯೆಗಳನ್ನು ಪರಿಹರಿಸದಿದ್ದಕ್ಕಾಗಿ ತಮಿಳುನಾಡು ಸಿಎಂ ವಿರುದ್ಧ ನಮ್ಮ ಖಂಡನೆಯಿದೆ. ಡಿಕೆ ಶಿವಕುಮಾರ್ ಸಿದ್ದರಾಮಯ್ಯ ವಿರುದ್ಧ ತಮ್ಮ ನಡೆಯನ್ನು ರೂಪಿಸುತ್ತಿದ್ದಾರೆ. ನಾನು ರಾಷ್ಟ್ರೀಯ ನಾಯಕ, ಸಿದ್ದರಾಮಯ್ಯ ಪ್ರಾದೇಶಿಕ ನಾಯಕ ಎಂದು ತೋರಿಸಲು ತಮಿಳುನಾಡಿಗೆ ಓಡಿ ಬಂದಿದ್ದಾರೆ. ಪ್ರಧಾನಿಯವರು ಜನಸಂಖ್ಯೆ ಮಾನದಂಡವಲ್ಲ ಎಂದು ಹೇಳಿದ್ದಾರೆ. ಕ್ಷೇತ್ರ ಪುನರ್ ವಿಂಗಡನೆ ಅನುಪಾತದ ಆಧಾರದ ಮೇಲೆ ನಡೆಯಲಿದೆ ಎಂದು ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಆದರೆ ಸ್ಟಾಲಿನ್ ಅವರು ಈ ಎಲ್ಲಾ ಅಸಂಬದ್ಧತೆಯನ್ನು ಕೃತಕವಾಗಿ ಸೃಷ್ಟಿಸುತ್ತಿದ್ದಾರೆ ಎಂದು ಆಕ್ರೋಶ ಹೊರ ಹಾಕಿದರು.

## ಗಡಿ ತಾಲೂಕು ಆಳಂದನಲ್ಲಿ ಡಿ.ಸಿ. ಸಂಚಾರ:

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.22ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಶನಿವಾರ ಜಿಲ್ಲೆ ಗಡಿ ತಾಲೂಕು ಆಳಂದ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಸಂಚರಿಸಿ ಬೇಸಿಗೆ ಕುಡಿಯುವ ನೀರು ಕುರಿತು ಖುದ್ದಾಗಿ ಗ್ರಾಮಸ್ಥರ ಸಮಸ್ಯೆ ಆಲಿಸಿದರು.

ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಎಸ್.ಪಿ. ಅಡ್ಡೂರು ಶ್ರೀನಿವಾಸಲು ಜೊತೆ ತಾಲೂಕಾ ಸಂಚಾರ ಮಾಡಿದ ಅವರು, ಸಾರ್ವಜನಿಕರ ಕುಡಿಯುವ ನೀರಿನ ಸಮಸ್ಯೆಗಳಿಗೆ ಅಧಿಕಾರಿಗಳು ಪ್ರಥಮಾದ್ಯತೆ ಮೇಲೆ ಕೂಡಲೆ ಸ್ಪಂದಿಸಬೇಕು.ಕುಡಿಯುವ ನೀರಿಗೆ ಹಾಹಾಕರ ಉಂಟಾಗದಂತೆ ಎಲ್ಲಾ ರೀತಿಯ ಮುನ್ನೆಚ್ಚರಿಕೆ ಕ್ರಮಗಳನ್ನು ಸ್ಥಳೀಯ ಆಡಳಿತ ಮಾಡಬೇಕು ಎಂದರು.

ಮೊದಲು ತಾಲೂಕಿನ ಸರಸಂಬಾ ಗ್ರಾಮಕ್ಕೆ ಭೇಟಿ ನೀಡಿದ ಅವರು, ಅಲ್ಲಿನ ಬಾಡಿಗೆ ಬಾವಿ ವೀಕ್ಷಿಸಿದರು. ನಂತರ ಸಾವಳೇಶ್ವರ, ಮಾದನಹಿಪ್ಪರಗಾ, ಅಂಬೇವಾಡ ಮತ್ತು ಝುಳಕಿ ಗ್ರಾಮಕ್ಕೂ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಖಾಸಗಿ ಬೋರವೆಲ್, ಬಾವಿ ಬಾಡಿಗೆ ಮೇಲೆ ಪಡೆದು ಸಾರ್ವಜನಿಕರಿಗೆ ಬೇಸಿಗೆಯಲ್ಲಿ ನೀರು ಪೂರೈಸಬೇಕೆಂದರು.

ಜಲ ದಿನಾಚರಣೆಯಲ್ಲಿ ಭಾಗಿ,ನೀರು ಮಿತ ಬಳಕೆಗೆ ಸಲಹೆ:ಸಾವಳೇಶ್ವರ ಗ್ರಾಮದಲ್ಲಿ ಗ್ರಾಮ ಪಂಚಾಯತಿಯು ಆಯೋಜಿಸಿದ ವಿಶ್ವ ಜಲ ದಿನಾಚರಣೆಯಲ್ಲಿ ಡಿ.ಸಿ ಮತ್ತು ಸಿ.ಇ.ಓ ಅವರು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಗ್ರಾಮಸ್ಥರನ್ನು ಉದ್ದೇಶಿಸಿ ಮಾತನಾಡಿದ ಡಿ.ಸಿ. ಮತ್ತು ಜಿಲ್ಲಾ ಪಂಚಾಯತ್ ಸಿ.ಇ.ಓ ಅವರು, ನೀರಿನ ಮಹತ್ವ ಸಾರಿದಲ್ಲದೆ, ಜಲ ಮೂಲಗಳ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿಯಾಗಿದೆ.

## ಕಾಲ ನಡೆದ ಅಧಿವೇಶನ

ಒಟ್ಟು 12 ಅಧಿಸೂಚನೆಗಳು, 2 ಆಧ್ಯಾದೇಶಗಳು ಮತ್ತು 122 ವಾರ್ಷಿಕ ವರದಿಗಳು, 111 ಲೆಕ್ಕ ಪರಿಶೋಧನಾ ವರದಿಗಳು. 01 ಅನುಪಾಲನಾ ವರದಿಗಳು ಹಾಗೂ 01 ಅನುಸರಣಾ ವರದಿಯನ್ನು ಸದನದಲ್ಲಿ ಮಂಡಿಸಲಾಗಿದೆ ಎಂದರು.

ಈ ಅಧಿವೇಶನದಲ್ಲಿ ಧನವಿನಿಯೋಗ ವಿಧೇಯಕಗಳೂ ಸೇರಿದಂತೆ ಒಟ್ಟು 27 ವಿಧೇಯಕಗಳನ್ನು ಮಂಡಿಸಿ, ಅಂಗೀಕರಿಸಲಾಗಿದೆ. ಕರ್ನಾಟಕ ವಿಧಾನಸಭೆಯಲ್ಲಿ ಮಂಡಿಸಿದಂತೆ, ಕರ್ನಾಟಕ ವಿಧಾನಮಂಡಲದ ಜಂಟಿ ಪರಿಶೀಲನಾ ಸಮಿತಿಯ ಶಿಫಾರಸ್ಸಿನಂತೆ,

ಕರ್ನಾಟಕ ವಿಧಾನಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕಾರವಾದ ರೂಪದಲ್ಲಿ ಮತ್ತು ಕರ್ನಾಟಕ ವಿಧಾನ ಪರಿಷತ್ತಿನಿಂದ ತಿದ್ದುಪಡಿಯೊಂದಿಗೆ ಅಂಗೀಕಾರವಾದ ರೂಪದಲ್ಲಿರುವ 2024ನೇ ಸಾಲಿನ ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕವನ್ನು ಪುನರ್ ಪರ್ಯಾಲೋಚಿಸಿ ಅಂಗೀಕರಿಸಲಾಗಿದೆ.

ನಿಯಮ 60 ರಡಿಯಲ್ಲಿ ನೀಡಿದ್ದ 03 ನಿಲುವಳಿ ಸೂಚನೆಗಳನ್ನು ನಿಯಮ 69ಕ್ಕೆ ಪರಿವರ್ತಿಸಿರುವುದನ್ನು ಸೇರಿದಂತೆ ಒಟ್ಟು 04 ಸೂಚನೆಗಳನ್ನು ನಿಯಮ 69ರಡಿಯಲ್ಲಿ ಚರ್ಚಿಸಲಾಗಿದೆ. ಈ ಅವಧಿಯಲ್ಲಿ ಒಟ್ಟು 50 ಅರ್ಜಿಗಳನ್ನು ಸದನಕ್ಕೆ ಒಪ್ಪಿಸಲಾಗಿದೆ ಎಂದು ತಿಳಿಸಿದರು.ಒಟ್ಟು 3096 ಪ್ರಶ್ನೆಗಳನ್ನು ಸ್ವೀಕರಿಸಲಾಗಿದ್ದು, ಸದನದಲ್ಲಿ ಉತ್ತರಿಸಬೇಕಾಗಿದ್ದ 195 ಪ್ರಶ್ನೆಗಳ ಪೈಕಿ 189 ಪ್ರಶ್ನೆಗಳಿಗೆ ಉತ್ತರಿಸಲಾಗಿದೆ. ಲಿಖಿತ ಮೂಲಕ ಉತ್ತರಿಸುವ 2583 ಪ್ರಶ್ನೆಗಳ ಪೈಕಿ 2190 ಪ್ರಶ್ನೆಗಳಿಗೆ ಉತ್ತರಗಳನ್ನು ಸ್ವೀಕರಿಸಲಾಗಿದೆ.

ನಿಯಮ 351 ರಡಿಯಲ್ಲಿ ಸ್ವೀಕೃತವಾದ 260 ಸೂಚನೆಗಳ ಪೈಕಿ 133 ಸೂಚನೆಗಳಿಗೆ ಉತ್ತರಗಳನ್ನು ಸ್ವೀಕರಿಸಲಾಗಿದೆ. ಗಮನ ಸೆಳೆಯುವ 388 ಸೂಚನೆಗಳ ಪೈಕಿ 175 ಸೂಚನಾ ಪತ್ರಗಳ ಉತ್ತರಗಳನ್ನು ಸ್ವೀಕರಿಸಲಾಗಿದೆ. ಮಾನ್ಯ ಸದಸ್ಯರಾದ ಹೆಚ್.ಕೆ. ಸುರೇಶ್ ಹಾಗೂ ಶ್ರೀ ದರ್ಶನ್ ಪುಟ್ಟಣ್ಣಯ್ಯ ರವರುಗಳು ನೀಡಿರುವ 02 ಖಾಸಗಿ ವಿಧೇಯಕಗಳನ್ನು ಸದನದಲ್ಲಿ ಮಂಡಿಸಲಾಗಿದೆ. ಎರಡು ಹಕ್ಕುಚ್ಯುತಿ ಸೂಚನೆಗಳನ್ನು ತನಿಖೆ, ಪರಿಶೀಲನೆ ಮತ್ತು ವರದಿಗಾಗಿ ಹಕ್ಕುಬಾಧ್ಯತೆಗಳ ಸಮಿತಿಗೆ ವಹಿಸಲಾಗಿದೆ. ಶೂನ್ಯ ವೇಳೆ ಅಡಿಯಲ್ಲಿ 14 ಸೂಚನೆಗಳನ್ನು ಚರ್ಚಿಸಲಾಗಿದೆ ಎಂದರು.

ಮಾರ್ಚ್ 4 ರ ಮಂಗಳವಾರದಂದು ವಿಧಾನಸೌಧದ ವಿಧಾನಸಭೆಯ ಸಭಾಂಗಣ ಮೊಗಸಾಲೆ ಪ್ರವೇಶಿಸುವ ದ್ವಾರದ ಬಳಿ ಕರ್ನಾಟಕ ರಾಜ್ಯದ ವಿಧಾನಸಭೆಯ ಹಿಂದಿನ ಅಧಿವೇಶನಗಳು, ಮೈಸೂರಿನ ಸಾರ್ವಜನಿಕ ಕಚೇರಿ ಕಟ್ಟಡ, ಜಗನ್ಮೋಹನ್

ಅರಮನೆ, ಕ್ರಾಫರ್ಡ್ ಹಾಲ್ ಮತ್ತು ಬೆಂಗಳೂರಿನ ಸರ್ ಕೆ.ಪಿ. ಪುಟ್ಟಣ್ಣ ಚೆಟ್ಟಿ ಪುರಭವನ, ಓಲ್ಡ್ ಪಬ್ಲಿಕ್ ಆಫೀಸ್ ಕಟ್ಟಡ, ಆಥಾರ ಕಛೇರಿ ಕಟ್ಟಡಗಳಲ್ಲಿ ನಡೆದಿದ್ದು, ಸದರಿ ಕಟ್ಟಡಗಳ ವರ್ಣ ಚಿತ್ರಗಳನ್ನು ಅನಾವರಣಗೊಳಿಸಲಾಗಿತ್ತು. ಅಲ್ಲದೆ ಪಂಡಿತ್ ಜವಹರಲಾಲ್ ನೆಹರು ರವರು ವಿಧಾನ ಸೌಧಕ್ಕೆ ಶಂಕುಸ್ಥಾಪನೆ ನೆರವೇರಿಸಲ್ಪಟ್ಟ ಸಂದರ್ಭ, ಶ್ರೀ ಜಯಚಾಮರಾಜ ಒಡೆಯರ್ ಅವರು ಅಂದಿನ ಮುಖ್ಯಮಂತ್ರಿ ಶ್ರೀ ಕೆಂಗಲ್ ಹನುಮಂತಯ್ಯ ಹಾಗೂ ಇನ್ನಿತರರೊಂದಿಗೆ ವಿಧಾನ ಸೌಧ ಕಟ್ಟಡ ನಿರ್ಮಾಣ ಕಾಮಗಾರಿ ವೀಕ್ಷಿಸುತ್ತಿರುವ ಹಾಗೂ ಅಂದಿನ ರಾಜ್ಯಪಾಲರಾಗಿದ್ದ ಶ್ರೀ ಜಯಚಾಮರಾಜ ಒಡೆಯರ್ ಅವರು ಸದನಗಳ ಸದಸ್ಯರುಗಳನ್ನುದ್ದೇಶಿಸಿ ಭಾಷಣ ಮಾಡುತ್ತಿರುವ ಸಂದರ್ಭಗಳ ವರ್ಣ ಚಿತ್ರಗಳನ್ನು ಸಹ ಅನಾವರಣಗೊಳಿಸಲಾಗಿತ್ತು ಎಂದರು.

ಅಧಿಕೃತ ನಿರ್ಣಯಗಳನ್ನು ಮಾರ್ಚ್ 20 ರಂದು ಸದನದಲ್ಲಿ ಮಂಡಿಸಲಾಗಿದ್ದು, ಸದನವು ಸರ್ವಾನುಮತದಿಂದ ನಿರ್ಣಯಗಳನ್ನು ಅಂಗೀಕರಿಸಲಾಗಿದೆ.

ಸರ್ಕಾರಿ ಭದ್ರತಾ ಪತ್ರಗಳ ಅಧಿನಿಯಮ, 2006 (2006ರ ಕೇಂದ್ರ ಅಧಿನಿಯಮ 38) ಮತ್ತು ಸಾರ್ವಜನಿಕ ಋಣ ಅಧಿನಿಯಮ, 1944 (1944ರ ಕೇಂದ್ರ ಅಧಿನಿಯಮ 18) ರ ನಿರಸನದ ಪ್ರಸ್ತಾವನೆಗೆ ಸಂಸತ್ತು ಮಾಡಿರುವ ತಿದ್ದುಪಡಿಗೆ ಈ ಸದನದ ಯಾವುದೇ ಆಕ್ಷೇಪಣೆ ಇಲ್ಲದಿರುವ ಬಗ್ಗೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕಲ್ಯಾಣ ಮತ್ತು ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರದ ಮುಂಗಡ ಪತ್ರದ ಒಂದು ಭಾಗವನ್ನು ಕೇವಲ ಅದೇ ಉದ್ದೇಶಕ್ಕಾಗಿ

ಮೀಸಲಿಡುವ ಬಗ್ಗೆ.ಸಂವಿಧಾನದ ಮೂಲಭೂತ ತತ್ವಗಳನ್ನು ಉಲ್ಲಂಘಿಸುವ ನಿಬಂಧನೆಗಳನ್ನು ಒಳಗೊಂಡಿರುವ ಕೇಂದ್ರ ಸರ್ಕಾರದ ವಕ್ಸ್ (ತಿದ್ದುಪಡಿ) ಮಸೂದೆ, 2024ನ್ನು ಹಿಂಪಡೆಯುವ ಬಗ್ಗೆ.ಯುನಿವರ್ಸಿಟಿ ಗ್ರಾಂಟ್ಸ್ ಕಮೀಷನ್ (ಮಿನಿಮಮ್ ಕ್ವಾಲಿಫಿಕೇಷನ್ಸ್ ಫಾರ್ ಅಪಾಯಿಂಮೆಂಟ್ ಅಂಡ್ ಪ್ರಮೋಷನ್ ಆಫ್ ಟೀಚರ್ಸ್ ಅಂಡ್ ಅಕಾಡೆಮಿಕ್ ಸ್ಟಾಫ್ ಇನ್ ಯುನಿವರ್ಸಿಟೀಸ್ ಅಂಡ್ ಕಾಲೇಜಸ್ ಅಂಡ್ ಮೆಷರ್ಸ್ ಫಾರ್ ದ ಮೆಂಟೈನೆನ್ಸ್ ಆಫ್ ಸ್ಟಾಂಡರ್ಡ್ಸ್ ಇನ್ ಹೈಯರ್ ಎಜುಕೇಷನ್) ರೆಗುಲೇಷನ್ಸ್, 2025 ಅನ್ನು ಹಿಂಪಡೆಯ ಬಗ್ಗೆ.

ಸಚಿವರ ಹನಿಟ್ರ್ಯಾಪ್ ಸಂಬಂಧಿಸಿದಂತೆ ಸದನದಲ್ಲಿ ಉಂಟಾದ ಗದ್ದಲದಿಂದ ಶುಕ್ರವಾರ ಸದನದ ಪೀಠದ ಆದೇಶವನ್ನು ಲೆಕ್ಕಿಸದೆ ಕಾರ್ಯಕಲಾಪಗಳಿಗೆ ಅಡ್ಡಿಯುಂಟು ಮಾಡಿ ಅಶಿಸ್ತಿನಿಂದ ಹಾಗೂ ಅಗೌರವದಿಂದ ನಡೆದುಕೊಂಡ 18 ಜನ ವಿಧಾನಸಭಾ ಸದಸ್ಯರುಗಳನ್ನು 6 ತಿಂಗಳುಗಳ ಅವಧಿಯವರೆಗೆ ಸದನಕ್ಕೆ ಬಾರದಂತೆ ತಡೆಹಿಡಿದು ಅಮಾನತ್ತು ಮಾಡಲಾಗಿದೆ. ಸದಸ್ಯರು ಮುಂದೆ ಈ ರೀತಿಯ ವರ್ತಿಸದಿರಲು ಇದು ಎಚ್ಚರಿಕೆ ಗಂಟೆಯಾಗಿದೆ. ಮುಖ್ಯಮಂತ್ರಿಗಳು ಸದನದಲ್ಲಿ ಈ ಪ್ರಕರಣವನ್ನು ಉನ್ನತ ಮಟ್ಟದ ತನಿಖೆ ನಡೆಸಲು ಕ್ರಮವಹಿಸಲಾಗುವುದು ಎಂದು ತಿಳಿಸಿದ್ದಾರೆ ಎಂದರು.ಸದನ ನಡೆಸಲು ಸಹಕರಿಸಿದ ಸಭಾನಾಯಕರು, ಮುಖ್ಯಮಂತ್ರಿಗಳು, ಸಚಿವ ಸಂಪುಟದ ಸದಸ್ಯರು ಉಪ ಸಭಾಧ್ಯಕ್ಷರು ಸರ್ಕಾರಿ ಮುಖ್ಯ ಸಚೇತಕರು ವಿರೋಧ ಪಕ್ಷದ ನಾಯಕರು ವಿರೋಧ ಪಕ್ಷದ ಮುಖ್ಯ ಸಚೇತಕರು ಎಲ್ಲಾ ಮಾನ್ಯ ಸದಸ್ಯರುಗಳು ಮಾಧ್ಯಮ ಪ್ರತಿನಿಧಿಗಳು ಇಲಾಖಾ ಮುಖ್ಯಸ್ಥರು, ಅಧಿಕಾರಿ–ಸಿಬ್ಬಂದಿಗಳು ವಿಧಾನಸಭೆ ಸಚಿವಾಲಯದ ಅಧಿಕಾರಿ ಹಾಗೂ ಸಿಬ್ಬಂದಿಯವರಿಗೆ ವಿಧಾನಸಭೆಯ ಸಭಾಧ್ಯಕ್ಷರು ಕೃತಜ್ಞತೆ ಸಲ್ಲಿಸಿದರು.ಈ ಬಾರಿ ವಿಧಾನಸೌಧದಲ್ಲಿ ನಡೆದ ಪುಸ್ತಕ ಮೇಳ ಅಭೂತಪೂರ್ವ ಯಶಸ್ಸು ಕಂಡಿದೆ. ಇನ್ನು ಮುಂದೆ ಪ್ರತಿ ವರ್ಷ ಪುಸ್ತಕ ಮೇಳವನ್ನು ಆಯೋಜಿಸಲು ತೀರ್ಮಾನಿಸಲಾಗಿದೆ. ವಿಧಾನಸೌಧದಲ್ಲಿ ಶಾಶ್ವತ ವಿದ್ಯುತ್ ಅಲಂಕಾರವನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದ್ದು, ಏಪ್ರಿಲ್ ಮೊದಲ ವಾರದಲ್ಲಿ ಉದ್ಘಾಟನೆಗೊಳ್ಳಲಿದೆ. ಶನಿವಾರ, ಭಾನುವಾರ, ರಾಷ್ಟ್ರೀಯ ಹಬ್ಬಗಳು ಹಾಗೂ ಪ್ರಮುಖ ಸಮಾರಂಭಗಳಂದು ವಿದ್ಯುತ್ ದೀಪಗಳು ವಿಧಾನಸೌಧವನ್ನು ಅಲಂಕರಿಸಲಿದೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ವಿಧಾನಸಭೆಯ ಕಾರ್ಯದರ್ಶಿಗಳಾದ ಎಂ.ಕೆ.ವಿಶಾಲಾಕ್ಷಿ ಉಪಸ್ಥಿತರಿದ್ದರು.

## ಕಾಂಗ್ರೆಸ್ ಕಾರ್ಯಕರ್ತರ ಸಭೆ 25 ರಂದು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 22 : ನಗರದ ಲಾವಣ್ಯ ಫಂಕ್ಷನ್ ಹಾಲ್‌ನಲ್ಲಿ ಮಾರ್ಚ್ 25 ರಂದು ಬೆಳಿಗ್ಗೆ 10.30ಕ್ಕೆ ಸರ್ಕಾರದನಡೆಕಾರ್ಯಕರ್ತರ ಕಡೆ ಕಾರ್ಯಕ್ರಮ ಹಾಗೂ ಕಾಂಗ್ರೆಸ್ ಕಾರ್ಯಕರ್ತರ ಸಭೆ ಕರೆಯಲಾಗಿದೆ.

ಕಲ್ಯಾಣ ಕರ್ನಾಟಕದ ಉಸ್ತುವಾರಿಯೂ ಆದ ಎಐಸಿಸಿ ಕಾರ್ಯದರ್ಶಿ ಗೋಪಿನಾಥ ಪಾಲಯಪ್ಪನ್, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಪೌರಾಡಳಿತ ಸಚಿವ ರಹೀಂಖಾನ್ ನೇತೃತ್ವ, ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ ಅಧ್ಯಕ್ಷತೆ ವಹಿಸಲಿದ್ದಾರೆ.

ಸಂಸದ ಸಾಗರ್ ಖಂಡ್ರೆ, ಮಾಜಿ ಸಚಿವ ರಾಜಶೇಖರ ಪಾಟೀಲ, ಮಾಜಿ ಸಂಸದ ನರಸಿಂಗರಾವ್ ಸೂರ್ಯವಂಶಿ, ವಿಧಾನ ಪರಿಷತ್ ಸದಸ್ಯರಾದ ಡಾ. ಚಂದ್ರಶೇಖರ ಪಾಟೀಲ, ಭೀಮರಾವ್ ಪಾಟೀಲ, ಮಾಜಿ ಶಾಸಕರಾದ ಅಶೋಕ್ ಖೇಣಿ, ವಿಧಾನ ಪರಿಷತ್ ಮಾಜಿ ಸದಸ್ಯರಾದ ವಿಜಯಸಿಂಗ್, ಅರವಿಂದಕುಮಾರ ಅರಳಿ, ಮುಖಂಡ ಭೀಮಸೇನರಾವ್ ಸಿಂಧೆ, ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ಬಿ. ನಾರಾಯಣರಾವ್, ರಾಜ್ಯ ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ಸಂ–ಜಯ್ ಜಾಗೀರದಾರ್ ಪಾಲ್ಗೊಳ್ಳಲಿದ್ದಾರೆ.

ಕೆಪಿಸಿಸಿ, ಜಿಲ್ಲಾ ಘಟಕ, ಮುಂಚೂಣಿ ಘಟಕಗಳ ಅಧ್ಯಕ್ಷರು, ಪದಾಧಿಕಾರಿಗಳು, ನಗರಸಭೆ ಅಧ್ಯಕ್ಷರು, ಸದಸ್ಯರು, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಕಾಂಗ್ರೆಸ್ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿಗಳಾದ ಎಂ.ಎ. ಸಮಿ ಹಾಗೂ ದತ್ತಾತ್ರಿ ಮೂಲಗೆ ಮನವಿ ಮಾಡಿದ್ದಾರೆ.

## ಸ್ಪೆಷಾಲಿಟಿ ಆಸ್ಪತ್ರೆ ಲೋಕಾರ್ಪಣೆ

ಹಂತದ ಕೆಲಸ ಕಾರ್ಯಗಳನ್ನು ವೀಕ್ಷಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಉದ್ಘಾಟನೆಗೆ ಸಕಲ ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ರಾಜ್ಯಸಭೆ ವಿಪಕ್ಷ ನಾಯಕ

ಡಾ.ಮಲ್ಲಿಕಾರ್ಜುನ ಖರ್ಗೆ ಅವರಿಂದ ದಿನಾಂಕ ಪಡೆದುವ ಶೀಘ್ರವಾಗಿಯೇ ಇದನ್ನು ಸಾರ್ವಜನಿಕರಿಗೆ ಸಮರ್ಪಿಸಲಾಗುವುದು ಎಂದರು.ಕಲಬುರಗಿಯನ್ನು ಹೆಲ್ತ್ ಹಬ್ ಮಾಡಬೇಕೆನ್ನುವ ನಮ್ಮ ಆಶಯಕ್ಕೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಪೂರಕವಾಗಲಿದೆ. 175 ಕೋಟಿ ರೂ. ವೆಚ್ಚದಲ್ಲಿ ಆಸ್ಪತ್ರೆ ನಿರ್ಮಿಸಲಾಗಿದೆ. 40 ಕೋಟಿ ರೂ.ವೆಚ್ಚದಲ್ಲಿ ಅಗತ್ಯ ವೈದ್ಯಕೀಯ ಉಪಕರಣಗಳನ್ನು ತರಲಾಗಿದೆ. ಇನ್ನು ಕೆಲವೊಂದು ಉಪಕರಣಗಳು ಬರಬೇಕಿದೆ ಇದಕ್ಕಾಗಿ 7–8 ಕೋಟಿ ರೂ. ವ್ಯಯ ಮಾಡಲಾಗುತ್ತಿದೆ ಎಂದರು.ಜಿಮ್ಸ್ ಆಸ್ಪತ್ರೆಯ 8ನೇ ಮಹಡಿಯಲ್ಲಿ 14 ಡಯಾಲಿಸಿಸ್ ಕೇಂದ್ರ ಆರಂಭ ಮಾಡಲಾಗುತಿದ್ದು, ಇದರಲ್ಲಿ 10 ಹೊಸ ಯಂತ್ರಗಳು ಇರಲಿವೆ. ಇದಲ್ಲದೆ ಇನ್ನು 14 ಯಂತ್ರ ಸ್ಥಾಪನೆಗೆ ಸ್ಥಳಾವಕಾಶ ಇದ್ದು, ಹಂತ ಹಂತವಾಗಿ ಅದನ್ನು ಪೂರ್ಣ ಮಾಡಲಾಗುವುದು. ಇದೇ ಮಹಡಿಯಲ್ಲಿಯೇ ಸುಪರ್ ಸ್ಪೆಷಾಲಿಟಿ ಸೇವೆಯ ಎಲ್ಲ ಒಪಿಡಿ ಕಾರ್ಯನಿರ್ವಹಣೆ ಮಾಡಲಿವೆ. 5 ಬೆಡ್‌ಗಳ ಕ್ಯಾಜ್ಯುವಲ್ಟಿ ಸಹ ಕಾರ್ಯ ನಿರ್ವಹಿಸಲಿದೆ.

9ನೇ ಮಹಡಿಯಲ್ಲಿ ಒಳ ರೋಗಿಗಳ ಚಿಕಿತ್ಸೆಗೆ ಆರಂಭಿಕವಾಗಿ 77 ಬೆಡ್‌ಗಳಿಂದ ಆರಂಭ ಮಾಡಲಾಗುತ್ತಿದ್ದು, ಮುಂದೆ 200 ಬೆಡ್‌ಗಳ ವರೆಗೆ ಹೆಚ್ಚಳ ಮಾಡಿಕೊಳ್ಳುವ ಎಲ್ಲ ಸಿದ್ಧತೆಗಳಿವೆ. ಇನ್ನು 10ನೇ ಮಹಡಿಯಲ್ಲಿ 6 ಆಪರೇಷನ್ ಥಿಯೇಟರ್, 33 ಐಸಿಯು ಬೆಡ್‌ಗಳ್ ಇರಲಿವೆ. ರೋಗಿಗಳ ಅನುಸಾರ ಇದರ ಸಂಖ್ಯೆ 62ರ ವರೆಗೆ ಹೆಚ್ಚಳ ಮಾಡಲಾಗುವುದು ಎಂದು ಸಚಿವ ಡಾ.ಶರಣಪ್ರಕಾಶ ಪಾಟೀಲ ತಿಳಿಸಿದರು.

ಸುಪರ್ ಸ್ಪೆಷಾಲಿಟಿ ಆಸ್ಪತ್ರೆಗೆ 21 ತಜ್ಞ ವೈದರ ನೇಮಕಾತಿಗೆ ಅವಕಾಶ ಇದ್ದು, ಪ್ರಸ್ತುತ 11 ಜನರು ಕೆಲಸ ಆರಂಭಿಸಿದ್ದಾರೆ. ಇನ್ನಿಬ್ಬರು ಬೇರೆಡೆಯಿಂದ ಪ್ರಭಾರದ ಮೇಲೆ ಸೇವೆ ಸಲ್ಲಿಸುತ್ತಿದ್ದಾರೆ. ಪ್ರತ್ಯೇಕ ಸಸಿರ್ಂಗ್ ಸ್ಟಾಫ್ ನೇಮಕ ಮಾಡಲಾಗಿದ್ದು, ಉಳಿದ ಹುದ್ದೆಗಳ ನೇಮಕಾತಿಗೆ ಹೊರಗುತ್ತಿಗೆ ಮೂಲಕ ಪ್ರತ್ಯೇಕ ಟೆಂಡರ್ ಕರೆಯಲಾಗಿದೆ ಎಂದು ಸಚಿವರು ಹೇಳಿದರು.ಹಿರಿಯರ, ವಯೋವೃದ್ಧರ ಬಗ್ಗೆ ರಾಜ್ಯ ಸರಕಾರಕ್ಕೆ ತೀವ್ರ ಕಾಳಜಿ ಇದ್ದು, ಯಾವುದೇ ಹಂತದಲ್ಲು ಅವರಿಗೆ ಅನ್ಯಾಯ ಆಗಲು ಸರ್ಕಾರ ಬಿಡುವುದಿಲ್ಲ. ಬೆಳಗಾವಿ ವೈದ್ಯಕೀಯ ಆಸ್ಪತ್ರೆಯಲ್ಲಿ 150 ಜನ ವೃದ್ಧರನ್ನು ಅವರ ಮಕ್ಕಳು ಬಿಟ್ಟು ಹೋಗಿದ್ದಾರೆಂಬ ಮಾಹಿತಿ ಇದೆ. ಇನ್ನು ಬೇರೆ ಕಡೆಯಿಂದಲೂ ಕೂಡ ಮಾಹಿತಿ ಪಡೆದುಕೊಳ್ಳಲಾಗುತ್ತಿದೆ. ನಾಗರಿಕ ಸಮಾಜ ಒಪ್ಪದ ಇಂತಹ ಕೆಟ್ಟ ಸಂಸ್ಕೃತಿಯನ್ನು ನಿಯಂತ್ರಣಕ್ಕೆ ಬೇಕಾದ ಎಲ್ಲಾ ಬಿಗಿ ಕ್ರಮಗಳನ್ನು ಸರ್ಕಾರ ತೆಗೆದುಕೊಳ್ಳಲಿದೆ ಎಂದರು.

**9 ರೋಗಗಳಿಗೆ ಇಲ್ಲಿ ಚಿಕಿತ್ಸೆ:**

ನೂತನ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ನ್ಯೂರೋ ಸರ್ಜರಿ, ನ್ಯೂರಾಲಜಿ, ಮೆಡಿಕಲ್ ಗ್ಯಾಸ್ಟ್ರೋ ಎಂಟರೋಲಾಜಿ, ಸರ್ಜಿಕಲ್ ಗ್ಯಾಸ್ಟ್ರೋ ಎಂಟರೋಲಾಜಿ, ಪ್ಲ್ಯಾಸ್ಟಿಕ್ ಸರ್ಜರಿ, ಪಿಡಿಯಾಟ್ರಿಕ್ ಸರ್ಜರಿ, ಎಂಡೋಕ್ರಾನಾಲಜಿ, ನೆಫ್ರೋಲೋಜಿ, ಯೂರೋಲೊಜಿ ಚಿಕಿತ್ಸೆ ನೀಡಲಾಗುತ್ತದೆ ಎಂದ ಸಚಿವರು, ಇಂತಹ ಸೇವೆಗಳಿಗೆ ಖಾಸಗಿ ಆಸ್ಪತ್ರೆಗೆ ಬಡ ಜನ ಹೆಚ್ಚಿನ ಹಣ ವ್ಯಯಿಸಬೇಕಿತ್ತು ಎಂದರು.

**ಮರಳು ನೀತಿ ಸರಳಿಕರಣ:**

ಜನಸಾಮಾನ್ಯರಿಗೆ ಶೀಘ್ರ ಮತ್ತು ಸುಲಭವಾಗಿ ಮರಳು ಸಿಗುವಂತೆ ಮರಳು ನೀತಿಗೆ ಸರಳೀಕರಣ ಮಾಡಲಾಗತ್ತಿದೆ. ಈ ಕುರಿತು ಮುಖ್ಯಮಂತ್ರಿಗಳು ಸೂಕ್ತ ಕ್ರಮ ಕೈಗೊಳ್ಳಲಿದ್ದಾರೆ. ಇನ್ನು ಕಲಬುರಗಿ ಜಿಲ್ಲೆಯಲ್ಲಿ ಮರಳು ಮಾಫಿಯಾಗೆ ಕಡಿವಾಣ ಹಾಕಲು ಎಸ್.ಪಿ. ಅಡ್ಡೂರು ಶ್ರೀನಿವಾಸಲು ಅವರಿಗೆ ಸೂಚನೆ ನೀಡಲಾಗಿದೆ ಎಂದರು.

ನಂತರ ಸಚಿವರು ಜಿಮ್ಸ್ ನಿರ್ದೇಶಕ ಡಾ.ಉಮೇಶ್ ಮತ್ತು ವೈದ್ಯಕೀಯ ಅಧೀಕ್ಷಕ ಡಾ.ಶಿವಕುಮಾರ ಸಿ.ಆರ್. ಸೇರಿದಂತೆ ಹಿರಿಯ ಅಧಿಕಾರಿಗಳೊಂದಿಗೆ ಆಸ್ಪತ್ರೆಯಲ್ಲಿಯೇ ಸಭೆ ನಡೆಸಿದರು.

## ಪರಿಷತ್ತಿಗೆ ನೇಮಕ: ಜಾಬಾಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ ಬೀದರ. ಮಾ. 22 : ಕನ್ನಡ ಸಾಹಿತ್ಯ ಪರಿಷತ್ತಿನ ಬೀದರ್ ತಾಲ್ಲೂಕು ಘಟಕದ ಗೌರವ ಕಾರ್ಯದರ್ಶಿಯಾಗಿ ನೇಮಕಗೊಂಡ ಉಮೇಶ ಜಾಬಾ ಅವರನ್ನು ತಾಲ್ಲೂಕಿನ ಮರಕಲ್ ಗ್ರಾಮ ಪಂಚಾಯಿತಿಯಲ್ಲಿ ರಾಷ್ಟ್ರೀಯ ದಲಿತ ಬ್ರಿಗೇಡ್ ವತಿಯಿಂದ ಸನ್ಮಾನಿಸಲಾಯಿತು. ಬ್ರಿಗೇಡ್ ಸಂಸ್ಥಾಪಕ ಅವಿನಾಶ ದೀನೆ ಶಾಲು ಹೊದಿಸಿ, ಮೈಸೂರು ಪೇಟ ತೊಡಿಸಿ ಸನ್ಮಾನಿಸಿದರು.

ಬ್ರಿಗೇಡ್ ಯುವ ಘಟಕದ ಅಧ್ಯಕ್ಷ ಶಿವಕುಮಾರ ಜೀರ್ಗೆ, ದಲಿತ ಸಂಘರ್ಷ ಸಮಿತಿಯ ರಾಜಕುಮಾರ ಜ್ಯೋತಿ, ಪ್ರಮುಖರಾದ ಶಿವಾಜಿ ಸಾಕ್ರೆ ಮತ್ತಿತರರು ಇದ್ದರು.

## ಅಲ್ಲಮಪ್ರಭು ಬಿ.ಇಡಿ ಕಾಲೇಜಿಗೆ ಉತ್ತಮ ಫಲಿತಾಂಶ






ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.22:ತಾಲೂಕಿನ ತಳವಾಡ(ಕೆ) ಗ್ರಾಮದ ಅಲ್ಲಮಪ್ರಭು ಬಿ.ಇಡಿ ಕಾಲೇಜಿಗೆ ಎರಡನೆಯ ಸೆಮಿಸ್ಟರ್‌ನಲ್ಲಿ ಉತ್ತಮ ಫಲಿತಾಂಶ ಲಭಿಸಿದೆ.

ಬೀದರ್ ವಿಶ್ವವಿದ್ಯಾಲಯ ಫಲಿತಾಂಶ ಪ್ರಕಟಿಸಿದ್ದು ವಿದ್ಯಾರ್ಥಿ ಆನಂದ ಸ್ವಾಮಿ ಶೇ.89.2 ರಷ್ಟು ಫಲಿತಾಂಶ ಪಡೆದು ಕಾಲೇಜಿಗೆ ಪ್ರಥಮ ಸ್ಥಾನ ಮತ್ತು ಪವನ ಶೇ.88.5ರಷ್ಟು ಫಲಿತಾಂಶ ಪಡೆದು ದ್ವಿತೀಯ ಸ್ಥಾನ ಪಡೆದು ಕೊಂಡಿದ್ದಾನೆ ಎಂದು ಪ್ರಾಚಾರ್ಯ ಡಾ.ಆಶಾ ಮುದ್ದಾಳೆ ತಿಳಿಸಿದ್ದಾರೆ.

ಉಳಿದಂತೆ ವಿದ್ಯಾರ್ಥಿನಿ ಐಶ್ವರ್ಯ ಶೇ.88.16,&ಟಿಥರಿ;ಅಯ್ಯಪ್ಪ ಶೇ.88, ದೀಪಾಲಿ ಶೇ.87, ಅಶ್ವಿನಿ ಶಿಂಧೆ ಶೇ.87, ಪರಶುರಾಮ ಶೇ.87, ನಾಗಮ್ಮ ಶೇ.87, ಭಾಗ್ಯಶ್ರೀ ಶೇ.86, ಜ್ಯೋತಿ ಶೇ.86, ಈರಣ್ಣ ಆಲಗೂರ ಶೇ.85, ಬಸವರಾಜ ಶೇ.85, ಕನ್ಯಾಕುಮಾರಿ ಶೇ.85, ರಾಜೇಶ್ವರಿ ಶೇ.85, ರೇಣುಕಾ ಶೇ.85, ಅರ್ಚನಾ ಶೇ.85 ರಷ್ಟು ಫಲಿತಾಂಶ ಪಡೆದುಕೊಂಡು ಉತ್ತಮ ಸಾಧನೆ ತೆ–ೋರಿದ್ದಾರೆ.

ಹರ್ಷ:ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರು, ಮಹಾಲಿಂಗ ಸ್ವಾಮೀಜಿ, ಆಡಳಿತಾಧಿಕಾರಿ ಮೋಹನ ರೆಡ್ಡಿ, ಪ್ರಾಚಾರ್ಯರಾದ ಬಸವರಾಜ ಮೊಳಕೀರೆ, ಡಾ.ಆಶಾ ಮುದ್ದಾಳೆ ಸೇರಿದಂತೆ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತ ಪಡಿಸಿದ್ದಾರೆ.

**CITATION**
**IN THE COURT OF THE PRL.CIVIL JUDGE AND JMFC., AT HUMNABAD**
**CRL. MISC. NO. 85/2025**

**Petitioner's :-**

1. Chandrakant S/o Sharanappa Kottarge Age.56 R/o MSK MILL Road Kalburgi
2. Kupendra S/o Sharanappa Kottarage Age.51 R/o Hunsgera Tq. Humnabad
3. Mallamma W/o Shankar Age. 52 R/o Rajola Tq. Basavakalyan
4. Chandrakala W/o Vijaykumar Age. 38 R/o Handikera Tq. Humnabad

Respondent:-

THE CHIEF REGISTRAR OF BIRTH AND DEATH THROUGH THE TMC OFFICE HUMNABAD

Sub:-Petition U/Sec 13(3) of Birth and Death Registration Act 1969

Whereas the above named petitioner has filed the petition under section 13(3) of Birth and Death Registration Act 1969 praying this Honorable court to issue Death certificates of Sonabai W/o Sharanappa Who died on 07.09.2022 The petitioner claiming the death certificate of petitioners mother for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 24.04.2025 at 11.00AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 20.03.2025

//By order of the court//
Chief Ministerial Officer.
Prl. Civil Judge and JMFC court
Humnabad

## ಬೀದರ್ ವಿಶ್ವವಿದ್ಯಾಲಯದ ಸೆನೆಟ್ ಸದಸ್ಯೆ ವೈಷ್ಣವಿ ಆರ್.ಪಾಟೀಲಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ರಾಜ್ಯಮಹಿಳಾ ಅಭಿವೃದ್ಧಿಯಮಾಜಿನಿರ್ದೇಶಕರು ಹಾಗೂ ಮಾನವ ಹಕ್ಕುಗಳ ಜಿಲ್ಲಾ ಸದಸ್ಯೆ ಶೋಭಾ ಆರ್. ಪಾಟೀಲ್ ಅವರ ಸುಪುತ್ರಿ ವೈಷ್ಣವಿ ಆರ್. ಪಾಟೀಲ್ ಬೀದರ್ ವಿಶ್ವವಿದ್ಯಾಲಯದ ಸೆನೆಟ್ ಸದಸ್ಯೆಯಾಗಿ ನೇಮಕವಾದ ಪ್ರಯುಕ್ತ ತಾಲೂಕಿನ ಮುಸ್ತರಿ ಗ್ರಾಮದ ಅವರ ನಿವಾಸದಲ್ಲಿ ಮಾನವ ಹಕ್ಕುಗಳ ತಾಲೂಕ ಸದಸ್ಯರಾದ ಸುರೇಖಾ ಎಂ. ಸಿಂಧೆ, ಆಶಾ ಗಾಂಜಿ, ಜಗದೇವಿ ಇಟಗಾ ಅವರು ವೈಷ್ಣವಿ ಆರ್. ಪಾಟೀಲ ಅವರಿಗೆ ಸನ್ಮಾನಿಸಿ ಶುಭ ಕೋರಿದರು. ಈ ಸಂದರ್ಭದಲ್ಲಿ ರಾಜಶೇಖರ್ ಪಾಟೀಲ್ ಮುಸ್ತರಿ, ಶೋಭಾ ಆರ್. ಪಾಟೀಲ್ ಮುಸ್ತರಿ ಉಪಸ್ಥಿತರಿದ್ದರು.



ಬಸವಕಲ್ಯಾಣ :- ಉತ್ತರ ಪ್ರದೇಶದ ಅಯೋಧ್ಯಾ ನಗರದಲ್ಲಿ ಜರುಗುತ್ತಿರುವ ಔಸಾ ಗುರುಬಾಬಾ ಮಹಾರಾಜರ ಶ್ರೀ ನಾಥಷಷ್ಠಿ ಮಹೋತ್ಸವಕ್ಕೆ ತಾಲೂಕಿನ ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಬಿ ಕೆ ಹಿರೇಮಠ, ಮಲ್ಲಿನಾಥ ಹಿರೇಮಠ ಮುಂತಾದವರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)



ಚಿಟಗುಪ್ಪ:- ಕರ್ನಾಟಕ ರಾಜ್ಯದ ಪೌರಳಿತ ಹಾಗೂ ಹಜ್ ಸಚಿವರಾದ ರಹೀಮ ಖಾನ ಅವರಿಗೆ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಅವರು ಬೆಂಗಳೂರಿನಲ್ಲಿ ಹೂ ಗುಚ್ಛ್ ನೀಡಿ ಪವಿತ್ರ ರಂಜಾನ್ ಹಬ್ಬದ ಶುಭಾಶಯಗಳು ತಿಳಿಸಿದರು. ಜೊತೆಯಲ್ಲಿ ಪಿಕೆಪಿಎಸ್ ನಿರ್ದೇಶಕ ರಾಶೀದ್ ಅಲಿ ಪಟೇಲ್, ಮೌಲಾನಾ ತಸಾದ್ದುಖ್ ನದವಿ, ಸೇರಿದಂತೆ ಇತರರು ಇದ್ದರು. (ಮಲ್ಲಮ್ಮ ನುಡಿ ಚಿತ್ರ)



ಬಸವಕಲ್ಯಾಣ :- ವಿಶೇಷ ಚೇತನ ಮಕ್ಕಳಿಗೆ ಕ್ರೀಡೆ ಮತ್ತು ಕ್ಷೇತ್ರ ಭೇಟಿ ಅರಿವು ಮೂಡಿಸುವ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಇಲ್ಲಿನ ತಿಪುರಾಂತಿನ ಗವಿಮಠದಲ್ಲಿ ಪೂಜ್ಯ ಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಗೌರವ ಡಾಕ್ಟರೇಟ್ ಪ್ರಶಸ್ತಿ ಪುರಸ್ಕೃತರಾದ ಕೆ. ಜಿ. ಶರಣಪ್ಪ ಗದಲೇಗಾಂವ ಅವರಿಗೆ ಸನ್ಮಾನಿಸಿದರು . ಈ ಸಂದರ್ಭದಲ್ಲಿ ಬಿ. ಆರ್. ಪಿ ಗಳಾದ ಶಾಲಿವಾನ ಬಿರಾದಾರ. ಪುಂಡಲಿಕ್ ಬಸ್ ನಾಯಕ. ಬಾಲಕೃಷ್ಣ ಪಾಟೀಲ್. ಬಿ. ಐ. ಆರ್. ಟಿ. ಅನಿತಾ. ದೈಹಿಕ ಶಿಕ್ಷಕರಾದ ಮಾರುತಿ ಸೂರ್ಯವಂಶಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಬೆಂಗಳೂರು: ಕಾಲೇಜು ಕಟ್ಟಡದಿಂದ ಹಾರಿ 21 ವರ್ಷದ ವಿದ್ಯಾರ್ಥಿನಿ ಸಾವು



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಸೋಲದೇವನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಶುಕ್ರವಾರ ಮಧ್ಯಾಹ್ನ 21 ವರ್ಷದ ಬಿಸಿಎ ವಿದ್ಯಾರ್ಥಿನಿ ಖಾಸಗಿ ಎಂಜಿನಿಯರಿಂಗ್ ಕಾಲೇಜು ಕಟ್ಟಡದ ನಾಲ್ಕನೇ ಮಹಡಿಯಿಂದ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ.

ಮೃತಳನ್ನು ಕೇರಳದ ಕೋಝಿ-ಕ್ಕೋಡ್ ಮೂಲದ ಲಕ್ಷ್ಮಿ ಮಿತ್ರ ಎಂದು ಗುರುತಿಸಲಾಗಿದೆ. ಖಾಸಗಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಆರನೇ ಸೆಮಿಸ್ಟರ್ ಬಿಸಿಎ (ವಿಮಾನಯಾನ) ವಿದ್ಯಾರ್ಥಿನಿಯಾಗಿದ್ದಳು. ಮಧ್ಯಾಹ್ನ 1.30 ರ ಸುಮಾರಿಗೆ ಲಕ್ಷ್ಮಿ ಕಾಲೇಜಿನ ನಾಲ್ಕನೇ ಮಹಡಿಯಿಂದ ಹಾರಿ ಈ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಹೇಳಲಾಗಿದೆ.

ಕಾಲೇಜು ಸಿಬ್ಬಂದಿ ಆಕೆಯನ್ನು ಹತ್ತಿರದ ಆಸ್ಪತ್ರೆಗೆ ಸಾಗಿಸಿದರು, ಆದರೆ ವೈದ್ಯರು ಆಕೆ ಮೃತಪಟ್ಟಿದ್ದಾಳೆ ಎಂದು ಘೋಷಿಸಿದರು. ಯಾವುದೇ ಆತ್ಮಹತ್ಯೆ ಪತ್ರ ಪತ್ತೆಯಾಗಿಲ್ಲ, ಘಟನೆಗೆ ಕಾರಣ ಇನ್ನೂ ತಿಳಿದುಬಂದಿಲ್ಲ.

ಈ ಸಂಬಂಧ ಪೊಲೀಸರು ಇನ್ನೂ ದೂರು ದಾಖಲಿಸಿಲ್ಲ, ಸಂತ್ರಸ್ತೆಯ ಪೋಷಕರ ಆಗಮನಕ್ಕಾಗಿ ಪೊಲೀಸರು ಕಾಯುತ್ತಿದ್ದಾರೆ.

## ರಣಬಿಸಿಲಿಗೆ ಉತ್ತರ ಕರ್ನಾಟಕ ತತ್ತರ: ರಾಜ್ಯ ವಿಪತ್ತು ಎಂದು ಘೋಷಿಸಲು ತಜ್ಞರ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಈ ಬಾರಿ ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಬಿಸಿಲಿನ ತಾಪಮಾನ ಮತ್ತಷ್ಟು ಏರಿಕೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ (IMD) ಮುನ್ಸೂಚನೆ ಬೆನ್ನಲ್ಲೇ ಉಷ್ಣ ಅಲೆ ಸಮಸ್ಯೆಯನ್ನು ರಾಜ್ಯ ವಿಪತ್ತು ಎಂದು ಘೋಷಿಸಿ ಎಂದು ತಜ್ಞರು ಒತ್ತಾಯಿಸಿದ್ದಾರೆ.



ಉತ್ತರ ಕರ್ನಾಟಕದ ಕಲಬುರಗಿ, ರಾಯಚೂರು ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಉಷ್ಣ ಅಲೆ ಕಾಣಿಸಿಕೊಂಡಿದ್ದು ತಾಪಮಾನ ಸುಮಾರು 43 ಡಿಗ್ರಿ ಸೆಲ್ಸಿಯಸ್ ತಲುಪಿದೆ. ಇದು ಮಕ್ಕಳು, ವೃದ್ಧರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ಇನ್ನು ಈ ಪ್ರದೇಶಗಳ ತಾಪಮಾನದಲ್ಲಿ ಮತ್ತಷ್ಟು ಏರಿಕೆಯಾಗುವ ಬಗ್ಗೆ ಐಎಂಡಿ ಮುನ್ಸೂಚನೆ ನೀಡಿರುವುದು ಜನರನ್ನು ಕಂಗಾಲಾಗಿಸಿದೆ. ರಾಜ್ಯ ಸರ್ಕಾರ ಉಷ್ಣ ಅಲೆಯನ್ನು ರಾಜ್ಯ ವಿಪತ್ತು ಎಂದು ಘೋಷಿಸುವುದರಿಂದಾಗುವ ಪ್ರಯೋಜನಗಳು ಏನೆಂದರೆ, ಕರ್ನಾಟಕ ವಿಪತ್ತು ಪರಿಹಾರ ನಿಧಿಯಿಂದ ಸಂತ್ರಸ್ತರಿಗೆ ಪರಿಹಾರ ನೀಡಲು ಸಾಧ್ಯವಾಗಲಿದೆ. ಈ ಪರಿಸ್ಥಿತಿಯನ್ನು ಎದುರಿಸಲು ಜಿಲ್ಲೆಗಳಿಗೆ ನೆರವಾಗಲಿದೆ. ಏತನ್ಮಧ್ಯೆ, ಅಧಿಕ ತಾಪಮಾನದಿಂದ ರಕ್ಷಣೆಗೆ ಜನರಲ್ಲಿ

ಕಲ್ಯಾಣ ಕರ್ನಾಟಕ ಪ್ರದೇಶ ಈಗಾಗಲೇ ಮಕ್ಕಳಲ್ಲಿ ಅಪೌಷ್ಟಿಕತೆ ಮತ್ತು ಹೆಚ್ಚಿನ ತಾಯಂದಿರ ಮರಣ ಪ್ರಮಾಣದಿಂದ ಬಳಲುತ್ತಿದ್ದು, ಇಲ್ಲಿನ ಜನರಿಗೆ ಅಧಿಕ ತಾಪಮಾನದಿಂದ ರಕ್ಷಿಸಿಕೊಳ್ಳುವ ನಿಟ್ಟಿನಲ್ಲಿ ಸಹಾಯ ಮಾಡಲು ಯಾವುದೇ ಕ್ರಿಯಾ ಯೋಜನೆ ಜಾರಿಯಲ್ಲಿಲ್ಲ ಎಂದು ತಜ್ಞರು ಹೇಳಿದ್ದಾರೆ. ಇದುವರೆಗೆ ಯಾವುದೇ ರೋಗಿಗಳು ಅಥವಾ ಜನ ಬಿಸಿಲಾಘಾತ ಅಥವಾ ಉಷ್ಣ ಅಲೆಯಿಂದಾಗಿ ಆಸ್ಪತ್ರೆಗೆ ದಾಖಲಾಗಿಲ್ಲ ಎಂದು ಕಲಬುರಗಿ ಜಿಲ್ಲಾ ಆರೋಗ್ಯ ಅಧಿಕಾರಿ ಶರಣಬಸಪ್ಪ ಕ್ಯಾತನಾಳ್ ತಿಳಿಸಿದ್ದಾರೆ. ತಾಪಮಾನ ಏರಿಕೆಯಿಂದಾಗಿ ಮಧ್ಯಾಹ್ನ 12 ರಿಂದ 3 ಗಂಟೆಯವರೆಗೆ ಮನೆಯಿಂದ ಹೊರಹೋಗುವುದನ್ನು ತಪ್ಪಿಸುವಂತೆ ಸಾರ್ವಜನಿಕರಿಗೆ ಎಚ್ಚರಿಕೆ ನೀಡಲಾಗಿದೆ ಎಂದು ಅವರು ಹೇಳಿದ್ದಾರೆ.

## ಪರಿಶಿಷ್ಟ ಜಾತಿ ಹಾಗು ಪರಿಶಿಷ್ಟ ಪಂಗಡಗಳ ದೌರ್ಜನ್ಯ ಕಾಯ್ದೆ ಅರಿವು ಮೂಡಿಸುವ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ ಸಹಾಯಕ ನಿರ್ದೇಶಕರು, ಸಾಮಾಜ ಕಲ್ಯಾಣ ಇಲಾಖೆ ಹಾಗೂ ತುಕ್ಕಮ್ಮ ಮಹಿಳಾ ಮಂಡಳ ಹುಡಗಿ ಇವರ ಸಂಯುಕ್ತಶ್ರಯದಲ್ಲಿ ತಾಲ್ಲೂಕಿನ ಕುಮಾರ್ ಚಿಂಚೋಳಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ದೌರ್ಜನ್ಯಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಕಾನೂನು ಅರಿವು ಮೂಡಿಸುವ ಕಾರ್ಯಕ್ರಮ ಜರುಗಿತು. ತಾ.ಸ.ನಿರ್ದೇಶಕರಾದ ಲಿಂಗರಾಜ್ ಅರಸ್ ಮಾತನಾಡಿ, ಸಮಾಜದಲ್ಲಿ ಜಾತಿ ವ್ಯವಸ್ಥೆ ನಿರ್ಮೂಲನೇ ಮಾಡಬೇಕು ಅನ್ನುವುದು ಸರಕಾರದ ಕನಸು ಈ ನಿಟ್ಟಿನಲ್ಲಿ ಸರಕಾರ ಅಂತರ್ಜಾತಿ ವಿವಾಹಗಳು ನಡೆಯುತ್ತಿದ್ದು, ಅವುಗಳಿಗೆ ನಮ್ಮ ಇಲಾಖೆ ವತಿಯಿಂದ ಪರಿಹಾರ ನೀಡುತ್ತಿದ್ದು, ದೌರ್ಜನ್ಯಕ್ಕೆ ಒಳಗಾದವರಿಗೆ ದೌರ್ಜನ್ಯ ಮಾಡಿದವರ ವಿರುದ್ಧ ಕೇಸ್ ದಾಖಲೆ ಮಾಡಿ, ಅನ್ಯಾಯಕ್ಕೆ ಒಳಗಾದವರಿಗೆ ನಮ್ಮ ಇಲಾಖೆ ಪರಿಹಾರ ನೀಡುವದು ಇದರ ಸದುಪಯೋಗ ಪಡೆದುಕೊಳ್ಳಿ. ಇಲಾಖೆಯ ಸವಲತ್ತುಗಳ ಬಗ್ಗೆ ಅರಿವು ಮೂಡಿಸುವ ಜಾಗೃತಿ ಹಾಗೂ ಬೀದಿ ನಾಟಕ ಜೊತೆಗೆ ಅಭಿಯಾನ ಹಮ್ಮಿಕೊಂಡಿದೆ ಎಂದು ಹೇಳಿದರು. ದೌರ್ಜನ್ಯ ಕಾನೂನುಗಳ ಬಗ್ಗೆ ಮಾಹಿತಿ ನೀಡಿ ಈ ಭೂಮಿ ಮೇಲೆ ಹೆಣ್ಣು ಗಂಡು ಎಂಬ ಎರಡು ಜಾತಿಗಳು ಇದ್ದು, ಇವುಗಳ ಬಗ್ಗೆ ಕಠಿಣ ಕಾಯ್ದೆಗಳು ಇದ್ದು, ಜಾತಿ ನಿರ್ಮೂಲನೆ ಮಾಡಬೇಕು ಎಂದು ವಿಶೀಷ್ಟ ಅರಿವು ಮೂಡಿಸುವದು ಸರಕಾರದ ಕೆಲಸವಾಗಿದೆ ಎಂದರು. ಸುಧಾರಾಣಿ ಜೈಕುಮಾರ ಗ್ರಾಮ ಪಂಚಾಯಿತಿಯ ಅಧ್ಯಕ್ಷರು, ಸುಲೇಮ್ಮಾ, ಪ್ರಲ್ಹಾದ , ವಿಜಯಕುಮಾರ ಘನಚಕ್ರ,

ಅಂಜುಬಾಯಿ ಪವಾರ, ತು.ಮ.ಮ ಹುಡುಗಿಯ ಅಧ್ಯಕ್ಷರು ಹಾಗೂ ದಲಿತ ಮುಖಂಡರು ಹಾಗೂ ಶಾಲೆ ಮಕ್ಕಳು ಇನ್ನಿತರರು ಉಪಸ್ಥಿತರಿದ್ದರು.

## 1.41 ಲಕ್ಷ ರೂ.ಮೌಲ್ಯದ 43 ಕ್ವಿಂಟಲ್ ಅಕ್ಕಿ ಜಪ್ತಿ

ಮಲ್ಲಮ್ಮ ನುಡಿ ವಾರ್ತೆ




ಕಲಬುರಗಿ,ಮಾ.22- ಸರ್ಕಾರದ ವಿವಿಧ ಯೋಜನೆಗಳಡಿ ಬಿಡುಗಡೆಯಾದ ಅಕ್ಕಿಯನ್ನು ಅಕ್ರಮವಾಗಿ ಹೆಚ್ಚಿನ ಬೆಲೆಗೆ ಕಾಳಸಂತೆಯಲ್ಲಿ ಮಾರಾಟ ಮಾಡಲು ಸಾಗಿಸಲಾಗುತ್ತಿದೆ ಎಂಬ ಮಾಹಿತಿ ಮೇಲೆ ತಹಶೀಲ್ದಾರ ಕಾರ್ಯಾಲಯದ ಆಹಾರ ನಿರೀಕ್ಷಕ ವಿನಯ ಎಂ, ಸಬ್ ಅರ್ಬನ್ ಪೊಲೀಸ್ ಠಾಣೆಯ ಎಎಸ್ಐ ಜೈರಾಮ ರಾಠೋಡ್ ಅವರು ದಾಳಿ ನಡೆಸಿ 1,41,375 ರೂ. ಮೌಲ್ಯದ 43.50 ಕ್ವಿಂಟಲ್ ಅಕ್ಕಿ ಮತ್ತು 6 ಲಕ್ಷ ರೂ. ಮೌಲ್ಯದ ಮಹೇಂದ್ರ ಪಿಕಪ್ ವಾಹನ ಸೇರಿ 7,41,375 ರೂ.ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಿದ್ದಾರೆ.

ವಾಹನ ಚಾಲಕ ಕಿರಣ್ ಫಿರೋಜ್ ಹಾಗೂ ಅಕ್ಕಿಯ ಮಾಲೀಕ ಸಂತೋಷಗೌಡ ಹಾಗೂ ಕೃಷ್ಣ ಲಾತೂರ ಅವರ ವಿರುದ್ಧ ಸಬ್-ಅರ್ಬನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

## ಮಾರ್ಚ್ 24 ರಂದು ವಿಶ್ವ ಕ್ಷಯರೋಗ ದಿನಾಚರಣೆ

ಕಲಬುರಗಿ,ಮಾ.22-ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕಚೇರಿ ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಕ್ಷಯರೋಗ ದಿನಾಚರಣೆ ಅಂಗವಾಗಿ ಮಾರ್ಚ್ 24 ರಂದು ಬೆಳಿಗ್ಗೆ 8.30 ಗಂಟೆಗೆ ಕಲಬುರಗಿ ಜಿಲ್ಲಾ ಆಸ್ಪತ್ರೆಯಲ್ಲಿ ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿ ಶ್ರೀನಿವಾಸ ನವಲೆ ಅವರು ಜಾಥಾ ಉದ್ಘಾಟಿಸುವರು.

ಅಂದು ಬೆಳಿಗ್ಗೆ 10.30 ಗಂ-ಟೆಗೆ ಕಲಬುರಗಿ ಹೊಸ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ವಿಶ್ವ ಕ್ಷಯರೋಗ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸುವರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಜಂಟಿ ನಿರ್ದೇಶಕರ ಕಚೇರಿಯ ಸಹ ನಿರ್ದೇಶಕ ಡಾ. ಶಂಕ್ರಪ್ಪ ಮೈಲಾರಿ, ಉಪ ನಿರ್ದೇಶಕ ಡಾ. ಎ.ಎಸ್. ರುದ್ರವಾಡಿ, ಡಾ. ಶರಣಬಸಪ್ಪ ಗಣಜಲಖೇಡ, ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಜ್ಞರು ಹಾಗೂ ಅಧೀಕ್ಷಕ ಡಾ. ರುಖಿಯಾ ಅಸ್ನ ರಬಾ, ಬೆಳಗಾವಿ ರಾಷ್ಟ್ರೀಯ ಪಾರಂಪರಿಕ ಚಿಕಿತ್ಸಾ ವಿಜ್ಞಾನ ಸಂಸ್ಥೆ ಐ.ಸಿ.ಎಮ್. ಎರ್. ವಿಜ್ಞಾನಿ ಡಾ. ಬನ್ನಪ್ಪ ಎಸ್. ಉಂಗಾರ ಅತಿಥಿಗಳಾಗಿ ಪಾಲ್ಗೊಳ್ಳುವರು. ಕಲಬುರಗಿ ವಿಭಾಗದ (ಕ್ಷಯ) ವಿಭಾಗೀಯ ವಿಶ್ವ ಸಂಸ್ಥೆ ಸಲಹೆಗಾರ ಡಾ. ನಿಮ್ರಾ ಶರೀನ ಅತಿಥಿ ಉಪನ್ಯಾಸ ನೀಡುವರು.

## ಕ್ಷೇತ್ರ ಪುನರ್ ವಿಂಗಡಣೆಯಲ್ಲಿ ಆರ್‌ಎಸ್‌ಎಸ್ ಪಾತ್ರವಿಲ್ಲ; ಉತ್ತರ-ದಕ್ಷಿಣ ಚರ್ಚೆ ರಾಜಕೀಯ ಪ್ರೇರಿತ: ಸಿಆರ್ ಮುಕುಂದ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಕ್ಷೇತ್ರ ಪುನರ್ ವಿಂಗಡಣೆಯ ನಂತರವೂ ದಕ್ಷಿಣದ ರಾಜ್ಯಗಳು ಲೋಕಸಭಾ ಕ್ಷೇತ್ರಗಳ ಸಂಖ್ಯೆಯನ್ನು ಉಳಿಸಿಕೊಳ್ಳುತ್ತವೆ ಎಂದು ಕೇಂದ್ರ ಸಚಿವರು ಸ್ಪಷ್ಟಪಡಿಸಿದ್ದಾರೆ ಎಂದು ಆರ್‌ಎಸ್‌ಎಸ್‌ನ ಜಂಟಿ ಪ್ರಧಾನ ಕಾರ್ಯದರ್ಶಿ ಸಿಆರ್ ಮುಕುಂದ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಶುಕ್ರವಾರ ನಡೆದ ಅಖಿಲ ಭಾರತೀಯ ಪ್ರತಿನಿಧಿ ಸಭೆ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲೋಕಸಭಾ ಕ್ಷೇತ್ರಗಳ ಸಂಖ್ಯೆಗಳನ್ನು ಹೆಚ್ಚಿಸುವ ಅಥವಾ ನಿಗದಿಪಡಿಸುವ ನಿರ್ಧಾರವನ್ನು ಕೇಂದ್ರ ಸರ್ಕಾರ ತೆಗೆದುಕೊಳ್ಳಬೇಕು ಮತ್ತು ಈ ವಿಷಯದಲ್ಲಿ ಆರ್‌ಎಸ್‌ಎಸ್ ಯಾವುದೇ ಪ್ರಭಾವ ಬೀರುವುದಿಲ್ಲ ಎಂದು ಹೇಳಿದರು.

ಉತ್ತರ-ದಕ್ಷಿಣ ಚರ್ಚೆಯನ್ನು ನಿಜವಾದ ಕಾಳಜಿಗಳ ಮೇಲೆ ಕೇಂದ್ರೀಕರಿಸುವ ಬದಲು ರಾಜಕೀಯ ಉದ್ದೇಶಗಳಿಗಾಗಿ ಬಳಸಲಾಗುತ್ತಿದೆ. ಇದಕ್ಕೆ ಸಂಬಂಧಿಸಿದ ಕೆಲವು ಸಮಸ್ಯೆಗಳನ್ನು ರಾಜಕೀಯವಾಗಿ ಪರಿಹರಿಸಲಾಗಿದ್ದರೂ, ಮತ್ತೆ ಕೆಲವನ್ನು ಸಾಮಾಜಿಕ ಮುಖಂಡರು ಪರಿಹರಿಸುವ ಅಗತ್ಯವಿದೆ. ನಮ್ಮೊಳಗೆ ಜಗಳವಾಡುವುದು ಒಳ್ಳೆಯದಲ್ಲ ಎಂದು ಅವರು ಹೇಳಿದರು.

ರಾಜಕೀಯ ಪ್ರೇರಿತ ಸಮಸ್ಯೆಗಳು ಹಲವು ಇವೆ. ಸ್ಥಳೀಯ ಭಾಷೆಗಳಲ್ಲಿ ರೂಪಾಯಿ ಚಿಹ್ನೆಯ ಬಳಕೆ ಮತ್ತು ಶಾಲೆಗಳಲ್ಲಿ ಬೋಧನಾ ಭಾಷೆಯಂತಹ ಅನೇಕ ಸಮಸ್ಯೆಗಳು ರಾಜಕೀಯ ಪ್ರೇರಿತವಾಗಿವೆ. ಈ ಸಮಸ್ಯೆಗಳನ್ನು ರಾಜಕೀಯ ನಾಯಕರು ನಿರ್ವಹಿಸಬಾರದು. ಬದಲಾಗಿ ರಾಜಕೀಯ ಕಾರ್ಯಸೂಚಿಗಳನ್ನು ಮೀರಿ ಹೆಚ್ಚು ತಟಸ್ಥ ಮತ್ತು ರಚನಾತ್ಮಕ ರೀತಿಯಲ್ಲಿ ಸಾಮಾಜಿಕ ನಾಯಕರು ಅವುಗಳನ್ನು ಪರಿಹರಿಸಬೇಕು ಎಂದು ತಿಳಿಸಿದರು.

# ಮಾತೆ ಮಹಾದೇವಿಯವರು ಮನೆಮನಗಳಲ್ಲಿ ಅಚ್ಚಳಿಯದೆ ಉಳಿದಿದ್ದಾರೆ: ಡಾ. ಶೈಲೇಂದ್ರ ಬೆಲ್ದಾಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 22 : 1980ರ ದಶಕದಲ್ಲಿ ಪೂಜ್ಯ ಲಿಂಗಾನಂದ ಸ್ವಾಮಿಗಳು ಹಾಗೂ ಪೂಜ್ಯ ಮಾತೆ ಮಹಾದೇವಿಯವರು ಕಾಲಿಗೆ ಚಕ್ರಕಟ್ಟಿಕೊಂಡವರಂತೆ ಹಗಲು ರಾತ್ರಿ ಎನ್ನದೆ ಬಸವ ತತ್ವದ ಪ್ರಸಾರವನ್ನು ನಾಡಿನಾದ್ಯಂತ ಮಾಡಿರುವುದು ನಿಜಕ್ಕೂ ಸ್ಮರಣೀಯ ಕಾರ್ಯ. ಇಂದು ಅವರ ಸಂಸ್ಮರಣೆಯನ್ನು ಮಹಾದಂಡನಾಯಕರು ಎನ್ನುವ ವಿಶಿಷ್ಟ ಮತ್ತು ವಿನೂತನ ಹೆಸರಿನ ಮೇಲೆ ಕಾರ್ಯಕ್ರಮ ಆಯೋಜನೆ ಮಾಡಿರುವುದು ಖುಷಿ ತಂದಿದೆ. ಮಾತಾಜಿಯವರು ಎಲ್ಲರ ಮನೆಮನಗಳಲ್ಲಿ ಅಚ್ಚಳಿಯದೆ ಉಳಿದಿದ್ದಾರೆ ಎಂದು ಮಹಾದಂಡನಾಯಕರ ಸ್ಮರಣೋತ್ಸವದ ಸ್ವಾಗತ ಸಮಿತಿಯ ಅಧ್ಯಕ್ಷರು ಹಾಗೂ ಶಾಸಕ ಡಾ. ಶೈಲೇಂದ್ರ ಕೆ ಬೆಲ್ದಾಳೆ ತಿಳಿಸಿದರು.

ನಗರದ ಸ್ವಾಮಿ ಸಮರ್ಥ ಕಲ್ಯಾಣಮಂಟಪದಲ್ಲಿ ರಾಷ್ಟ್ರೀಯ ಬಸವದಳ, ಲಿಂಗಾಯತ ಧರ್ಮ ಮಹಾಸಭಾ ಹಾಗೂ ಕ್ರಾಂತಿ ಗಂಗೋತ್ರಿ ಅಕ್ಕನಾಗಲಾಂಬಿಕಾ ಮಹಿಳಾ ಗಣದ ವತಿಯಿಂದ ಜರುಗಿದ ಲಿಂಗಾಯತ ಧರ್ಮದ ಮಹಾದಂಡನಾಯಕರ ಸ್ಮರಣೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿಶೇಷವಾಗಿ ಮಾತಾಜಿಯವರ ಭಕ್ತರು ಮಹಾರಾಷ್ಟ್ರ, ತೆಲಂಗಾಣ ಮತ್ತು ಆಂಧ್ರಪ್ರದೇಶದಲ್ಲೂ ಇದಾರೆ. ನಾನೂ ಹಾಗೂ ನಮ್ಮ ತಾಯಿ ಶಕುಂತಲಾ ಬೆಲ್ದಾಳೆಯವರು ತಮಿಳುನಾಡಿನ ಊಟಿಯಲ್ಲಿ ಮಾತಾಜಿಯವರ ಸಾನಿಧ್ಯದಲ್ಲಿ ನಡೆದಿರುವ ಸಮ್ಮೇಳನದಲ್ಲಿ ಪಾಲ್ಗೊಂಡಿದ್ದು ನಮ್ಮ ಸೌಭಾಗ್ಯ ಎಂದರು. ಮಾತಾಜಿಯವರು ಎಲ್ಲರ ಮನೆಮನಗಳಲ್ಲಿ ಅಚ್ಚಳಿಯದೆ ಉಳಿದಿದ್ದಾರೆ. ಎಲ್ಲರೂ ಧರ್ಮವಂತರಾಗಬೇಕು. ಸಂಸ್ಕಾರದಿಂದ ಬದುಕಬೇಕೆಂದು ಸಲಹೆ ನೀಡಿದರು.

ದಿವ್ಯ ಸಾನಿಧ್ಯ ವಹಿಸಿದ್ದ ಹುಲಸೂರಿನ ಪೂಜ್ಯ ಶ್ರೀ ಡಾ. ಶಿವಾನಂದ ಸ್ವಾಮೀಜಿ ಮಾತನಾಡಿ ಮಾತಾಜಿಯವರು ಕಟ್ಟಿದ್ದು ರಾಷ್ಟ್ರೀಯ ಬಸವ ದಳವೆಂಬ ಮಹಾಸೈನ್ಯ. ಇಲ್ಲಿ ಬಂದಿರುವವರು ಗಟ್ಟಿ ಕಾಳುಗಳು. ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯುತ್ತಿರುವುದು ನಿಜಕ್ಕೂ ಹೆಮ್ಮೆಯ ಸಂಗತಿ. ಬಸವ ತತ್ವವನ್ನು ಬಿತ್ತಿ ಬೆಳೆಸುವ ಕಾರ್ಯ ಎಲ್ಲರೂ ಕೂಡಿ ಮಾಡೋಣ ಎಂದರು.

ಸ್ವಾಗತ ಸಮಿತಿ ಕಾರ್ಯಾಧ್ಯಕ್ಷ ಶ್ರೀಕಾಂತ ಸ್ವಾಮಿ ಮಾತನಾಡಿ ಮಾತಾಜಿಯವರ ಜ್ಞಾನಕ್ಕೆ ಬೆರಗಾಗಿ ಅವರಿಗಿಂತ ದೊಡ್ಡವರಾದ ಲಿಂಗಾನಂದ ಸ್ವಾಮಿಗಳು ಚಿಕ್ಕವರಾದ ಮಾತಾಜಿಯವರಿಗೆ ಜಗದ್ಗುರು ಸ್ಥಾನ ನೀಡಿ ಪಾದಪೂಜೆ ಮಾಡಿದ್ದರು. ಇದು ನಿಜವಾದ ಗುರು ಶಿಷ್ಯರ ಪರಂಪರೆ ಎಂದು ಹೇಳಿದರು. ಮಾತಾಜಿಯವರ ಅವಿರತ ಬಸವತತ್ವಸೇವೆಗಾಗಿ ಅವರನ್ನು ಮಹಾದಂಡನಾಯಕಿ ಎಂದು ಅವರ ಅನುಯಾಯಿಗಳು ಕರೆದಿದ್ದಾರೆ ಎಂದು ಶ್ಲಾಘಿಸಿದರು.

ಪೂಜ್ಯ ಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿ ಮಾತನಾಡಿ ಲಿಂಗಾಯತ ಧರ್ಮದ ಸ್ವತಂತ್ರ ಧರ್ಮದ ಮಾನ್ಯತೆಗಾಗಿ ತಮ್ಮ ಆರೋಗ್ಯವನ್ನೂ ಲೆಕ್ಕಿಸದೆ ಪೂಜ್ಯ ಮಾತೆ ಮಹಾದೇವಿಯವರು ಹೋರಾಟ ಮಾಡಿದ್ದರು. ಹೀಗಾಗಿ ಮಾನ್ಯತೆ ಪಡೆಯುವುದು ಮಾತಾಜಿಯವರ ದೊಡ್ಡ ಕನಸಾಗಿತ್ತು. ಹೀಗಾಗಿ ಶಾಸಕ ಬೆಲ್ದಾಳೆ ಸೇರಿದಂತೆ ಇನ್ನಿತರ ಲಿಂಗಾಯತ ಶಾಸಕರು ವಿಧಾನಸೌಧದಲ್ಲಿ ಸ್ವತಂತ್ರ ಧರ್ಮದ ಮಾನ್ಯತೆಗಾಗಿ ಧ್ವನಿ ಎತ್ತಬೇಕೆಂದು ತಿಳಿಸಿದರು. ಲಿಂಗಾಯತ ಎಂದರೆ ಅದರಲ್ಲಿ ಎಲ್ಲಾ 101 ಪಂಗಡದವರು ಬರುತ್ತಾರೆ. ಹೀಗಾಗಿ ಈಗಾಗಲೇ ಸಿದ್ಧರಾಮಯ್ಯನವರು ಕೇಂದ್ರಕ್ಕೆ ಶಿಫಾರಸ್ಸು ಮಾಡಿದ್ದಾರೆ. ಚೆ-ಂಡು ಕೇಂದ್ರದ ಅಂಗಳದಲ್ಲಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಅನುನೋದನೆ ಮಾಡಲು ಶಾಸಕರು ಕೇಂದ್ರ ಸರ್ಕಾರಕ್ಕೆ ಸಲಹೆ ನೀಡಬೇಕೆಂದು ಪೂಜ್ಯರು ಹೇಳಿದರು.

ಇದೇ ವೇಳೆ ರಾಮಕೃಷ್ಣ ವಿವೇಕಾನಂದ ಆಶ್ರಮದ ಪೂಜ್ಯ ಜ್ಯೋತಿರ್ಮಯಾನಂದ ಶ್ರೀಗಳು, ಪೂಜ್ಯ ಸಿದ್ಧರಾಮ ಬೆಲ್ದಾಳ ಶರಣರು ಮಾತಾಜಿಯವರ ಕಾರ್ಯ ಶ್ಲಾಘಿಸಿದರು. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಮೃತರಾವ ಚಿಮಕೋಡೆ ಮಾತನಾಡಿದರು. ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಸೋಮಶೇಖರ ಬಿರಾದಾರ ಚಿದ್ರಿ ಹಾಗೂ ಪದಾಧಿಕಾರಿಗಳಿಗೆ ಸನ್ಮಾನಿಸಲಾಯಿತು.

ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಹಿರಿಯ ಪತ್ರಕರ್ತ ಶಶಿಕಾಂತ ಶೆಂಬೆಳ್ಳಿ ಹಾಗೂ ಪತ್ರಕರ್ತ ಸದಾನಂದ ಜೋಶಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಪೂರ್ಣಚಂದ್ರ ಮೈನಾಳೆ, ಸಮೃದ್ಧಿ ಲಾಧಾ ಅವರ ನೃತ್ಯ, ಶಿವು ಜನ್ಯ ಅವರ ವಚನ ಗಾಯನ ಸಭಿಕರ ಗಮನ ಸೆಳೆಯಿತು.

ವೇದಿಕೆ ಮೇಲೆ ಪೂಜ್ಯ ಅಕ್ಕನಾಗಲಾಂಬಿಕಾ ಮಾತಾಜಿ, ಪೂಜ್ಯ ಅಕ್ಕಮಹಾದೇವಿ ಮಾತಾಜಿ, ಪೂಜ್ಯ ಸತ್ಯಾದೇವಿ ಮಾತಾಜಿ, ಪೂಜ್ಯ ಓಂಕಾರೇಶ್ವರ ಸ್ವಾಮೀಜಿ, ಪೂಜ್ಯ ವೆಂಕಟೇಶ ಅಪ್ಪಾಜಿ, ಶಾಹಿನ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ . ಅಬ್ದುಲ್ ಖದೀರ್, ಡಾ. ಮಹೇಶ ಬಿರಾದಾರ, ಬೆಳಗಾವಿಯ ಅಶೋಕ ಬೆಂ-ಡಿಗೇರಿ, ಕೆ. ಶರಣಪ್ರಸಾದ್, ಮಹಾಂತೇಶ ಗುಡಸ್, ಕಲಬುರಗಿಯ ನಾಗೇಂದ್ರಪ್ಪ ನಿಂಬರಗಿ, ಜಗದೇವಿ ಚೆಟ್ಟಿ, ಗೋಕಾಕ್‌ನ ಸಂಜಯ್ ಪಾಟೀಲ, ಶಿವಶರಣಪ್ಪ ಪಾಟೀಲ, ಶಿವರಾಜ ಪಾಟೀಲ ಅತಿವಾಳ, ಸಚ್ಚಿದಾನಂದ ಚಟನಳ್ಳಿ, ಸತೀಶ ಪಾಟೀಲ, ಮಲ್ಲಿಕಾರ್ಜುನ ಜೈಲರ್, ಗಣಪತಿ ಬಿರಾದಾರ ಸೇರಿದಂತೆ ಹಲವರಿದ್ದರು. ಬಸವರಾಜ ಸಂಗಮದ್ ನಿರೂಪಿಸಿದರು. ಸ್ವಾಗತ ಸಮಿತಿ ಪ್ರಧಾನ ಕಾರ್ಯದರ್ಶಿ ಬಸವರಾಜ ಪಾಟೀಲ ಶಿವಪೂರ ಸ್ವಾಗತಿಸಿದರು.

ಅಕ್ಕಮಹಾದೇವಿ ಸ್ವಾಮಿ ವಂದಿಸಿದರು.

ವಸ್ತು ಪ್ರದರ್ಶನ: ಮಾತೆ ಮಹಾದೇವಿಯವರ ಜೀವನ ಮತ್ತು ಸಾಧನೆಯಾಧಾರಿತ ವಸ್ತುಪ್ರದರ್ಶನ ಹಾಗೂ ಅವರ ಕುಳಿತ ಭಂಗಿಯ ಭಾವಚಿತ್ರದ ಆಕರ್ಷಕವಾಗಿತ್ತು. ಶರಣ ಶರಣೆಯರು ಸೆಲ್ಫಿ ತೆಗೆದುಕೊಂಡು ಸಂತಸಪಟ್ಟರು.

# ಬೀದರನಿಂದ ಬೆಂಗಳೂರಿಗೆ ಹೊಸ ಐರಾವತ ಕ್ಲಬ್ ಕ್ಲಾಸ್ 2.0 ಬಸ್ ಓಡಿಸಲು ಮನವಿ



ಬಿ ಜಿ ಶೇಟಕಾರ



ಡಾ: ವೀರೇಂದ್ರ ಶಾಸ್ತ್ರಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 22 ಕರ್ನಾಟಕದ ಅನೇಕ ಜಿಲ್ಲೆಗಳಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ಹೊಸಮಾದರಿಯ ಕ್ಲಬ್ ಕ್ಲಾಸ್ 2.0 ಐರಾವತ ಬಸ್ಸುಗಳನ್ನು ಓಡಿಸುತ್ತಿರುವುದು ಸ್ವಾಗತಾರ್ಹ ವಿಷಯವಾಗಿದೆ. ಅದಕ್ಕಾಗಿ ಬೀದರ ಜಿಲ್ಲೆಯ ಜನತೆಯ ಪರವಾಗಿ ತಮಗೆ ಅಭಿನಂದನೆಗಳನ್ನು ಸಲ್ಲಿಸುತ್ತೇವೆ. ಬೀದರ ಜಿಲ್ಲೆಯೂ ರಾಜಧಾನಿ ಬೆಂಗಳೂರಿನಿಂದ ಅತಿ ದೂರದಲಿದ್ದು ಬಸ್ಸಿನಿಂದ ಸುಮಾರು 14–16 ತಾಸು ಅವಧಿ ಬೇಕಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಬೀದರನಿಂದ ಬೆಂಗಳೂರಿಗೆ ಸಾರ್ವಜನಿಕರು ವಿದ್ಯಾರ್ಥಿಗಳು, ಅಧಿಕಾರಿಗಳು ಹಾಗು ವ್ಯಾಪಾರೋದ್ಯಮಿಗಳ ಓಡಾಟ ಹೆಚ್ಚಾಗಿದೆ. ಆದ್ದರಿಂದ ಬೀದರನಿಂದ ಬೆಂಗಳೂರಿಗೆ ಹೋಗಿ ಬರಲು ವ್ಹಾಯಾ ಹೈದ್ರಾಬಾದ ಮತ್ತು ಕಲಬುರಗಿ ಮುಖಾಂತರ ಹೊಸ ಐರಾವತ ಕ್ಲಬ್ ಕ್ಲಾಸ್ 2.0 ಬಸ್ಸಿನ ಸೌಕರ್ಯ ಕಲ್ಪಿಸಬೇಕೆಂದು ಬೀದರ ನಾಗರಿಕರ ಮತ್ತು ವ್ಯಾಪಾರೋದ್ಯಮಿಗಳ ಪರವಾಗಿ ಮನವಿ ಮಾಡುತ್ತೇವೆ ಎಂದು ಬಿ ಜಿ ಶೇಟಕಾರ ಹಾಗೂ ಡಾ: ವೀರೇಂದ್ರ ಶಾಸ್ತ್ರಿ ತಿಳಿಸಿದ್ದಾರೆ.

# ಮನಸ್ಸನ್ನು ಪ್ರಶಾಂತವಾಗಿ ಇಡುವುದೆ ಆನಂದಮಯ ಜೀವನದ ಮೂಲ: ಬಿ.ಕೆ. ವೀಣಾ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮಾ.22:ಮನಸ ಸ್ಸನ್ನು ಪ್ರಶಾಂತವಾಗಿ ಇಡುವುದೆ ಆನಂದಮಯಾ ಜೀವನದ ನಿಜವಾದ ಮೂಲ, ಜೀವನದ ಚಿಕ್ಕಪುಟ್ಟ ವಿಚಾರಗಳಿಗೆ ಮತ್ತು ಇತರರು ಜೀವನ ನೋಡಿ ನಮ್ಮ ಮನಸ್ಸನ್ನು ವಿಚಾಲಿತ ವಾಗದಂತೆ ಮಾಡಬಾರದು ಎಂದು ಬಿ. ಕೆ. ವೀಣಾ ಬಹನಜಿ ನುಡಿದರು.

ಪಟ್ಟಣದ ಶರಣಬಸಪ್ಪ ಪಬ್ಲಿಕ ಶಾಲೆಯಲ್ಲಿ

ಪ್ರಜಾಪಿತಾ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಶಾಖೆ ಕಮಲನಗರ ವತಿಯಿಂದ ಆಯೋಜಿಸಿದ "ಶರಣರು ಕಂಡ ಶಿವ" ಮೂರನೇ ದಿವಸದ ರಾಜಯೋಗ ಶಿಬಿರ ಕಾರ್ಯಕ್ರಮ ಜ್ಯೋತಿ ಬೆಳಗಿ ಉದ್ಘಾಟನೆ ಮಾಡಿ ಮಾತನಾಡಿದರು.

ಸ್ವಾರ್ಥಕ್ಕಾಗಿ ಬದುಕ್ಕುವುದು ಬಿಟ್ಟಿ ಪರಮಾತ್ಮನ ಧ್ಯಾನವನ್ನು ಮಾಡಿ ಎಲ್ಲರ ಜೀವನ ಸಾರ್ಥಕತೆ ಚಿಂತನೆ ಮಾಡಿದಾಗ, ಮನಸು ಹಗುರವಾಗಿ ಮನಸಿನಲ್ಲಿ ಒಂದು ಸಕಾರಾತ್ಮ ಶಕ್ತಿ ಉತ್ಪತ್ತಿಯಾಗುತ್ತದೆ ಇದರಿಂದ ಮನಸು ಆನಂದ ವಾಗಿರುತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ತಾಲೂಕಿನ ಪತ್ರಕರ್ತರನ್ನು ಮುಖ್ಯ ಅತಿಥಿಗಾಗಿ ಕರೆಯಲಾಗಿತ್ತು. 12 ಜ್ಯೋತಿರ್ಲಿಂಗ ಒಂದು ಮಂಟಪದಲ್ಲಿ ಪ್ರತಿಷ್ಠಾಪನೆ ಮಾಡಿ ಎಲ್ಲರ ದರ್ಶನ ಭಾಗ್ಯ ನೀಡಿದರು. ಅತಿಥಿಗಳು ಮೊದಲಿಗೆ ಎಲ್ಲಾ ಜ್ಯೋತಿರ್ಲಿಂಗಗಳಿಗೆ ಹೂವಿನ ಹಾರಹಾಕಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಬಿ.ಕೆ. ಸುಮಂಗಲಾ, ಬಿ. ಕೆ. ಜಯಶ್ರೀ ಬೆಹನಜಿಯರು, ತಾಲೂಕಿನ ಪತ್ರಕರ್ತರಾದ ಡಾ. ಎಸ್. ಎಸ್. ಮೈನಾಳೆ, ಭಾವುರಾವ ಹೆಡೆ, ಸಿ. ಎಮ್ ಗಳಿಗೆ, ಮನೋಜ ಹಿರೇಮಠ, ರಾಜಶೇಖರ ಅಜ್ಞಾ, ಪರಮೇಶ ರಾಂಪುರೆ, ಸಂಗಮೇಶ್ವರ ಮುರ್ಕೆ, ಶಿವಕುಮಾರ ಏಕಲಾರೆ, ಮೊಯಿನ ಸೇರಿದಂತೆ ಇನ್ನಿತರ ದೀಪಬೆಳಗಿ ಕಾರ್ಯಕ್ರಮ ಉದ್ಘಾಟನೆ ನೆರವೇರಿಸಿದರು.

ಬಿ. ಕೆ. ಲಕ್ಷ್ಮಿ ಬೆಹನಜೀ ಸ್ವಾಗತಿಸಿ, ವಂದಿಸಿದರು.

# ಕಲ್ಯಾಣ ಕರ್ನಾಟಕದ ಜನರ ಭಕ್ತಿ ಅಭಿಮಾನ ಬಹಳ ದೊಡ್ಡದು: ರಂಭಾಪುರಿ ಜಗದ್ಗುರುಗಳು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 22 : ಕಲ್ಯಾಣ ಕರ್ನಾಟಕ ಭಾಗದ ಜನರ ಭಕ್ತಿ, ಶ್ರದ್ಧೆ ಮತ್ತು ಅಭಿಮಾನ ಬಹಳ ದೊಡ್ಡದು. ಅದು ಬಣ್ಣಿಸಲಸಾಧ್ಯವಾದುದು ಎಂದು ಪೂಜ್ಯ ಶ್ರೀ ರಂಭಾಪುರಿ ಜಗದ್ಗುರುಗಳು ನುಡಿದರು. ನಗರದ ಬೇಟಿ ವೃತ್ತದ ಹತ್ತಿರ ಇರುವ ಏಕತಾ ಫೌಂಡೇಶನ್ ಅಧ್ಯಕ್ಷ ರವೀಂದ್ರ ಸ್ವಾಮಿಯವರ ಗೃಹದಲ್ಲಿ ಶನಿವಾರ ಪೂಜೆಯನ್ನು ನೆರವೇರಿಸಿ, ಭಕ್ತರಿಗೆ ದರ್ಶನ ನೀಡಿದ ಬಳಿಕ ಆಶೀರ್ವಚನ ನೀಡುತ್ತ ಮಾತನಾಡಿದರು.

ಇಂದು ಜನರಲ್ಲಿ ಗುರುಪರಂಪರೆ ಹಾಗೂ ಧರ್ಮದ ಬಗ್ಗೆ ಕಳಕಳಿ ಎಷ್ಟಿರಬೇಕೋ ಅಷ್ಟು ಇಲ್ಲದ ಕಾರಣ ಧರ್ಮ ಸೊರಗುತ್ತಿದೆ ಎಂಬ ಭಾವ ಜನರಲ್ಲಿ ಮೂಡುತ್ತಿದೆ. ಆದರೂ ಕೂಡಾ ಜಗದ್ಗುರುಗಳು ನಿರಾಶಾವಾದಿಯಾಗದೆ ಆಶಾವಾದಿಗಳಾಗಿ ಮನುಕುಲದ ಒಳಿತಿಗಾಗಿ ಕೆಲಸ ಮಾಡುತ್ತಿದ್ದೇವೆ. ಶ್ರೀಪೀಠದ ಭಕ್ತರು ನಾವು ಎಲ್ಲೇ ಹೋದರೂ ಜಾತ್ಯಾತೀತವಾಗಿ ನಮ್ಮೊಂದಿಗೆ ಚರ್ಚಿಸುತ್ತಾರೆ. ಇಂದಿನ ಕಾಲದಲ್ಲಿ ಅವರವರ ಧರ್ಮಕ್ಕೆ ಹಾಗೂ ಜಾತಿಗೆ ಜಯವಾಗಲಿ ಎಂದು ಎಲ್ಲರೂ ಹೇಳುತ್ತಾರೆ. ಆದರೆ ಮಾವನ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂಬ ವಿಶಾಲ ಸಂದೇಶ ನೀಡಿದ ಏಕೈಕ ಧರ್ಮಪೀಠ ಅದು ಬಾಳೆಹೊನ್ನೂರಿನ ಶ್ರೀ ಜಗದ್ಗುರು ರಂಭಾಪುರಿ ಪೀಠ ಎಂದು ಹೆಮ್ಮೆಯಿಂದ ಹೇಳಬೇಕಾಗುತ್ತದೆ.

ನಮ್ಮ ಪೀಠವು ಮಾನವ ಧರ್ಮದ ಹಿರಿಮೆಯನ್ನು ನಾಡಿನಾದ್ಯಂತ ಪ್ರಚಾರ ಪ್ರಸಾರ ಮಾಡಿದೆ. ಅವರವರ ಧರ್ಮ ಅವರಿಗೆ ಶ್ರೇಷ್ಠ ಎನಿಸಿದರೂ ಕೂಡಾ ಪರಧರ್ಮ ಸಹಿಷ್ಣುತಾಭಾವ ಎಲ್ಲರಲ್ಲೂ ಬರಬೇಕೆಂದು ಜಗದ್ಗುರುಗಳು ಸಂದೇಶ ನೀಡಿದರು.

ವೀರಶೈವ ಧರ್ಮವು ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸುವ ಧರ್ಮವಾಗಿದ್ದು, ಆದರೆ ಕೆಲವು ಜನರು ಈ ಧರ್ಮವನ್ನು ವಿಂಗಡಣೆ ಮಾಡುವ ರೀತಿಯಲ್ಲಿ ನಡೆದುಕೊಳ್ಳುತ್ತಿರುವುದು ನಿಜಕ್ಕೂ ದುರದೃಷ್ಟಕರ ಎಂದು ಕಳವಳ ವ್ಯಕ್ತಪಡಿಸಿದರಲ್ಲದೆ ಇವನಮ್ಮವ ಇವನಮ್ಮವ ಎಂಬ ಬಸವೇಶ್ವರರ ಸಂದೇಶ ಎಲ್ಲರೂ ಅಳವಡಿಸಿಕೊಳ್ಳಬೇಕಾಗಿದೆ. ಈ ಸದುದ್ದೇಶದಿಂದಲೇ ಕೊಳಾರ ಕೆ ಪರಿಸರದಲ್ಲಿ ಜಗದ್ಗುರು ಪಂಚಾಚಾರ್ಯ ಪುಣ್ಯಾಶ್ರಮ ಸ್ಥಾಪಿಸಲಾಗಿದೆ. ಅಲ್ಲಿ ನಿರ್ಮಾಣವಾಗುತ್ತಿರುವ ಗುರುಭವನ ಹಾಗೂ ಮಂದಿರದ ನಿರ್ಮಾಣ ಕಾರ್ಯ ಪರಿಶೀಲನೆ ಮಾಡಲಾಗಿದೆ. ಶೀಘ್ರವೇ ಲೋಕಾರ್ಪಣೆಗೊಳಿಸುವ ಪ್ರಯತ್ನ ನಡೆಯುತ್ತಿದೆ. ಈ ನಿಟ್ಟಿನಲ್ಲಿ ಧಾರ್ಮಿಕ ಕಾರ್ಯಗಳಲ್ಲಿ ಹಾಗೂ ಜನಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿರುವ ರವೀಂದ್ರ ಸ್ವಾಮಿಯವರ ಕ್ರಿಯಾಕರ್ತೃತ್ವ ಶಕ್ತಿ ಬಹಳ ದೊಡ್ಡದು. ಬಡವ ಶ್ರೀಮಂತ ಎನ್ನುವ ಭೇದಭಾವವಿಲ್ಲದೆ ನೊಂದವರ ಧ್ವನಿಯಾಗಿ, ಬಡವರ ಬಂಧುವಾಗಿ ರವಿಸ್ವಾಮಿಯವರು ಅನೇಕ ಸಾಮಾಜಿಕ ಕಾರ್ಯಗಳನ್ನು ಮಾಡುತ್ತ ಜನಮನ್ನಣೆ ಪಡೆದುಕೊಂಡಿದ್ದಾರೆ ಎಂದು ಜಗದ್ಗುರುಗಳು ಶ್ಲಾಘಿಸಿದರು.

ಮುಂದೊಂದು ದಿನ ರಾಜಕೀಯದಲ್ಲಿ ರವಿಸ್ವಾಮಿಯವರಿಗೆ ಉಜ್ವಲ ಭವಿಷ್ಯವಿದೆ ಎನ್ನುವುದರಲ್ಲಿ ಯಾವುದೇ ಅನುಮಾನವೇ ಇಲ್ಲ. ಸ್ವಾಮಿಯವರು ಮಾಡಿರುವ ಜನಹಿತಾತ್ಮಕ ಮತ್ತು ಗುಣಾತ್ಮಕ ಕಾರ್ಯಗಳೇ ಮುಂದೆ ಅವರಿಗೆ ಶ್ರೀರ-ಕ್ಷೆಯಾಗಿ ಮುಂದೆ ರಾಜಕೀಯ ಜೀವನದಲ್ಲಿ ಭದ್ರಬುನಾದಿ ಹಾಕಿಕೊಡಲಿದೆ ಎಂದು ಶುಭ ಹಾರೈಸಿದರು.

ಬರುವ ಅಕ್ಟೋಬರ್ ತಿಂಗಳಲ್ಲಿ ಬಸವಕಲ್ಯಾಣದಲ್ಲಿ ಶರನ್ನವರಾತ್ರಿ ದಸರಾ ಮಹೋತ್ಸವ ಬಹಳ ಅದ್ದೂರಿಯಾಗಿ ಜರುಗಲಿದೆ. ಈಗಾಗಲೇ ಈ ದಸರಾ ಮಹೋತ್ಸವದ ಸ್ವಾಗತ ಸಮಿತಿ ರಚಿಸಲಾಗಿದೆ. ಉಪಸಮಿತಿಯುವರಿಗೆ ಜವಾಬ್ದಾರಿಗಳನ್ನು ನೀಡಿ ಕಾರ್ಯಕ್ರಮಯಶಸ್ವಿಗೊಳಿಸುವ ಉದ್ದೇಶ ಹೊಂದಲಾಗಿದೆ. ಈ ಹಿಂದಿನ 33 ದಸರಾ ಮಹೋತ್ಸವಗಳು ಯಶಸ್ವಿಯಾಗಿ ಸಂಭ್ರಮದಿಂದ ನಡೆದಿವೆ. ಇದೀಗ ಬಸವಕಲ್ಯಾಣದಲ್ಲಿ ನಡೆಯುವ ದಸರಾ ಮಹೋತ್ಸವ ಹಿಂದಿನ ಎಲ್ಲಾ ದಸರಾ ಮಹೋತ್ಸವವನ್ನು ಮೀರಿ ಜರುಗಲಿದೆ ಎಂದು ಹೇಳಿದರು. ಈ ದಸರಾ ಮಹೋತ್ಸವದಿಂದ ಜಿಲ್ಲೆಯಲ್ಲಿ ಹೊಸ ವಾತಾವರಣ ನಿರ್ಮಾಣವಾಗಲಿದೆ ಎಂದು ಆಶಾಭಾವವನ್ನು ಜಗದ್ಗುರುಗಳು ನುಡಿದರು. ಜೊತೆಗೆ ಹೊಸ ವರ್ಷದ ಯುಗಾದಿ ಹಬ್ಬವು ನಾಡಿನ ಜನತೆಗೆ ಹೊಸ ಹರುಷ ತಂದುಕೊಡಲಿ ಎಂದು ಶುಭ ಹಾರೈಸಿದರು.

ಇದೇ ವೇಳೆ ರವೀಂದ್ರ ಸ್ವಾಮಿಯವರ ಮನೆಯಲ್ಲಿ ಜಗದ್ಗುರುಗಳ ಪೂಜೆ ಹಾಗೂ ಧರ್ಮಸಭೆ ಜರುಗಿತು. ಕಲ್ಲಯ್ಯ ಸ್ವಾಮಿ ದಂಪತಿಗಳು, ರವೀಂದ್ರ ಸ್ವಾಮಿ, ಅರುಣಾ ರವೀಂದ್ರ ಸ್ವಾಮಿ, ಶಿವಾನಂದ ಸ್ವಾಮಿ, ಬ್ರಹ್ಮಾನಂದ ಸ್ವಾಮಿ ಸೇರಿದಂತೆ ಬಂಧು-ಬಳಗದವರು ಹಾಗೂ ಹಿತೈಷಿಗಳು ಸ್ನೇಹಿತರು ಉಪಸ್ಥಿತರಿದ್ದರು.

# ಜಾನಪದ ಅಕಾಡೆಮಿ ರಾಜ್ಯ ಪ್ರಶಸ್ತಿಗೆ ಭಾಜನರಾದ ಮಾರುತಿರಾವಗೆ ಸನ್ಮಾನ



ಬೀದರ. ಮಾ. 22 : ಕರ್ನಾಟಕ ಜಾನಪದ ಅಕಾಡೆಮಿ ರಾಜ್ಯ ಪ್ರಶಸ್ತಿಗೆ ಭಾಜನರಾದ ಬಾಲ್ಯ ದಿಂದಲೇ ಸಂಗೀತ ಕ್ಷೇತ್ರದಲ್ಲಿ ತನದೆ ಆದಂತ ಕೊಡುಗೆ ನೀಡುತ್ತಿರುವ ಬೀದರ ತಾಲ್ಲೂಕಿನ ಚಾಂಬೋಳ ಗ್ರಾಮದ ನಿವಾಸಿಯಾದ ಶ್ರೀ ಮಾರುತಿರಾವ ತಂದೆ ನರಸಿಂಗ ಕೊಳಿ ಅವರಿಗೆ ಇಂದು ಭಾರತೀಯ ಜನತಾ ಪಾರ್ಟಿ ಗ್ರಾಮಾಂತರ ಮಂಡಲ ವತಿಯಿಂದ ಸತ್ಕರಿಸಲಾಯಿತು.

ಈ ಸಂದರ್ಭದಲ್ಲಿ ಕ್ಷೇತ್ರದ ನಾಯಕರಾದ ಶ್ರೀ ಈಶ್ವರ ಸಿಂಗ ಠಾಕೂರ, ಗ್ರಾಮಾಂತರ ಮಂಡಲ ಅಧ್ಯಕ್ಷರಾದ ಶ್ರೀ ದೀಪಕ ಗಾದಗೆ ಹಾಳೆಂಬುರ, ನಿಕಟಪೂರ್ವ ಮಂಡಲ ಅಧ್ಯಕ್ಷರಾದ ಶ್ರೀ ರಾಜೇಂದ್ರ ಪೂಜಾರಿ, ಶಿಕ್ಷಣ ಪ್ರಕೋಷ್ಠದ ರಾಜ್ಯ ಸಂಚಾಲಕರಾದ ಶ್ರೀ ರಾಜಶೇಖರ ನಾಗಮೂರ್ತಿ, ಮಂಡಲದ ಉಪಾಧ್ಯಕ್ಷರಾದ ಶ್ರೀ ಸಂತೋಷ ಕಾಳೆ, ಮಾಳೆಗಾವ ಮಹಾ ಶಕ್ತಿ ಕೇಂದ್ರ ಅಧ್ಯಕ್ಷರಾದ ಶ್ರೀ ಸಂದೀಪ ಪ್ರಸರ್ಗೆ, ಬಿಜೆಪಿ ದಲಿತ ನಾಯಕರಾದ ಶ್ರೀ ಮಾಣಿಕರಾವ ಕಟ್ಟಿಮನಿ ಹಾಳೆಂಬುರ, ಎಸ್. ಟಿ. ಮೋರ್ಚಾ ನಗರ ಪ್ರಧಾನ ಕಾರ್ಯದರ್ಶಿಗಳಾದ ವೆಂಕಟ ಚಿದ್ರಿ ಉಪಸ್ಥಿತರಿದ್ದರು.

# ಸಂಸದ ಸಾಗರ ಖಂಡ್ರೆಯವರಿಗೆ ಅಭಿಮಾನಿಗಳಿಂದ ಭಾವನಾತ್ಮಕ ಅಭಿನಂದನೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.22:ಬೀದರ ಕ್ಷೇತ್ರದ ಯುವ ಸಂಸದ ಸಾಗರ ಈಶ್ವರ ಖಂಡ್ರೆಯವರಿಗೆ ಅಭಿಮಾನಿಗಳಿಂದ ಭಾವನಾತ್ಮಕ ಅಭಿನಂದನಾ ಪರ್ವ ಪ್ರಾರಂಭವಾಗಿದೆ.

ಸಾಗರ ಈಶ್ವರ ಖಂಡ್ರೆಯವರ ಮೇಲೆ ಉತ್ತಮ ಕವನ ರಚಿಸಿದ ಕವಿಯತ್ರಿ ರಾಜೇಶ್ವರಿ ಅನೀಲ ಪಾಟೀಲ ರವರು ಶನಿವಾರ ಸಂಸದರ ಮನೆಗೆ ತೆರಳಿ ಸಹಕುಟುಂಬ ಸಮೇತ ಸಾಗರ ಖಂಡ್ರೆಯವರಿಗೆ ತಾವು ರಚಿಸಿದ ಕವನದ ದೊಡ್ಡದಾದ ಭಾವಚಿತ್ರ ನೀಡುವುದರೊಂದಿಗೆ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಉಪನ್ಯಾಸಕ ಅನೀಲ ಪಾಟೀಲ, ನಮ್ಮ ಯುವ ಸಂಸದರು, ನಮ್ಮ ಭಾಗದ ಅಭಿವೃದ್ಧಿಗಾಗಿ ದೆಹಲಿ ಮಟ್ಟದಲ್ಲಿ ನಡೆಸುತ್ತಿರುವ ಪ್ರಯತ್ನ ನಮ್ಮೆಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ. ಈ ಭಾಗದ ಜ್ವಲಂತ ಸಮಸ್ಯೆಗಳನ್ನು ಪ್ರಧಾನ ಮಂತ್ರಿ ಹಾಗು ಸಂಬಂಧ ಪಟ್ಟ ಮಂತ್ರಿಗಳ ಮನ ಮುಟ್ಟುವಂತೆ ತಿಳಿಸಿ, ಈ ಭಾಗಕ್ಕೆ ಉತ್ತಮ ಕೊಡುಗೆ ನೀಡುತ್ತಿರುವುದು ಎಲ್ಲಾ ಸಂಸದರಿಗೂ ಮಾದರಿಯಾಗಿದೆ. ಇಂತಹ ಸಂಸದರನ್ನು ಪಡೆದ ನಾವೇ ಧನ್ಯರು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವರವಟ್ಟಿ(ಬಿ)ಯ ಅಭಿಮಾನಿಗಳೊಂದಿಗೆ ಸಂಸದರ ಕಚೇರಿಯ ಕುಮಾರ ಲಕಶೆಟ್ಟಿ, ಅಮರ ಮೂಲಗೆ, ರಾಜಕುಮಾರ ಘಾಳೆ, ಪತ್ರಕರ್ತ ಜಯರಾಜ ದಾಬಶೆಟ್ಟಿ ಸೇರಿದಂತೆ ಹಲವರು ಇದ್ದರು.

# ನಂದವಾಡಗಿ ಏತ ನೀರಾವರಿ ಕಾಮಗಾರಿ ವಿಳಂಬ ಕಾಮಗಾರಿ ಶೀಘ್ರ ವಾಗಿ ಪೂರ್ಣ ಗೊಳಿಸುವದಾಗಿ ಕರಿಯಪ್ಪ ವಜ್ಜಲ್



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು:ನಂದವಾಡಿಗೆ ಏತನೀರಾವರಿ ಹೋರಾಟ ಹಾಗೂ ರೈತ ಸಭೆಯಲ್ಲಿ ಗುತ್ತಿಗೆದಾರರಾದ ಕರಿಯಪ್ಪ ವಜ್ಜಲ್ (ಎನ.ಡಿ ವಡ್ಡರ್) ಮಾತನಾಡಿ ಭಾಗದಲ್ಲಿ ನಮಗೆ ಕೆಲ ರೈತರಿಂದ ಕಾಮಗಾರಿ ವಿಳಂಭ ವಾಗಿದೆ . ಜಮೀನು ಅವಾರ್ಡ ಆಗಿದ್ದರೂ ಹೆಚ್ಚಿನ ಮೊತ್ತ ಪರಿಹಾರ ಕೊಡಿಸಲು ಕೇಳುತ್ತಿದ್ದಾರೆ. ಇದು ಸರಕಾರದ ಮಟ್ಟದಲ್ಲಿ ನಿರ್ಧಾರವಾಗಬೇಕು, ಕೆಲವೆಡೆ ರೈತರು ತಮಗೆ ಬರುವ ಹಣ ಪಡೆಯಲು ಮುಂದೆ ಬರುತ್ತಿಲ್ಲ ಇದ–ರಿಂದ ಕೆಲಭಾಗದಲ್ಲಿ ಮಾತ್ರ ಕಾಮಗಾರಿ ವಿಳಂಭವಾಗಿದೆ. ಇನ್ನೂ ಮುಂದಿನ 6 ತಿಂಗಳನಲ್ಲಿ ಪೂರ್ಣಗೂಳಿಸಲಾಗುವದು ಎಂದು ಹೇಳಿದರು.

ಕಳೆದೆರಡು ದಿನಗಳಿಂದ ನಂದವಾಡಗಿ ಏತ ನೀರಾವರಿ ಹೋರಾಟ ಸಮಿತಿ ಅಧ್ಯಕ್ಷ ಸಿದ್ದರಾಮಪ್ಪಸಾಹುಕಾರನೇತೃತ್ವದಲ್ಲಿ ರೈತರು ಯೋಜನಾ ಪ್ರದೇಶದ ಭೇಟಿ ನೀಡಿ ಬಾಕಿ ಉಳಿದ ಕಾಮಗಾರಿ ಪೂರ್ಣಗೊಳಿಸಿ ರೈತರ ಜಮೀನಿಗೆ ನೀರು ಹರಿಸುವಂತೆ ಯೋಜನಾ ಪ್ರದೇಶದ ಕಾಮಗಾರಿ ವೀಕ್ಷಣೆ ನಡೆಸಿ ಕೆಬಿಜೆಎನ್ಎಲ್ ಹಾಗೂ ಗುತ್ತಿಗೆದಾರರ ಒತ್ತಡ ಹಾಕುತ್ತಿದ್ದಾರೆ.

ಕಸಬಾ ಲಿಂಗಸಗೂರುನಲ್ಲಿ ಜರುಗಿದ ಸಭೆಯಲ್ಲಿ ಸಂತೆಕೆಲ್ಲೂರು, ಮಟ್ಟೂರು, ಸರ್ಜಾಪೂರ, ಗೆಜ್ಜಲಗಟ್ಟಾ, ಅಂಕುಶದೊಡ್ಡಿ ಸೇರಿ ನಾನಾ ಗ್ರಾಮ ಪಂಚಾಯಿತಿಗಳ ನೂರಾರು ರೈತ ಮುಖಂಡರು ಕಾಮಗಾರಿ ವಿವರವಾದ ಮಾಹಿತಿ ಪಡೆಯಲು ಭಾಗವಹಿಸಿದರು.

ಹೋರಾಟ ಸಮಿತಿ ತಾಂತ್ರಿಕ ಸಮಿತಿ ಅಧ್ಯಕ್ಷ ಶರಣಗೌಡ ಬಸಾಪೂರ ಮತ್ತು ಕಾರ್ಯದರ್ಶಿ ರಮೇಶ ಶಾಸ್ತಿ ಮಾತನಾಡಿ ಈಗಾಗಲೇ ಸರಕಾರ ನೀರಿನ ಹಂಚಿಕೆ ಮಾಡಿ ಹಣ ಕೂಡಾ ಬಿಡುಗಡೆ–ಯಾಗಿದೆ. ತೊಂಡಿಹಾಳದಿಂದ ನಂದವಾಡಗಿವರೆಗೆ ಮುಖ್ಯ ಪೈಪಲೈನ್ (ರೈಸಿಂಗ್‌ಮೇನ್) ಕಾಮಗಾರಿ ಮತ್ತು ಪಂಪ್‌ಹೌಸ್ ವಿದ್ಯುತ್ ಕಾಮಗಾರಿ ಎಲ್ & ಟಿ ಕಂಪನಿ ಪೂರ್ಣಗೋಳಿಸಿದೆ. ಪ್ರಥಮ ಹಂತದ ಕಾಮಗಾರಿ ಪಡೆದ ಇಸ್ರೇಲ್ ಮೂಲದ ಥಾಲ್ ಮತ್ತು ಶೇ60% ಮಾತ್ರ ಕಾಮಗಾರಿ ಪೂಣಗೊಳಿಸಿದೆ. ಅವರಿಗೆ ಹಾಗೂ ಶೇ 80% ಕಾಮಗಾರಿ ಪೂರ್ಣಗೊಳಿಸಿದ ಎರಡನೇ ಹಂತದ ಗುತ್ತಿಗೆ ಪಡೆದ ಹೈದ್ರಾಬಾದನ ಮೇಘಾ ಕಂಪನಿ ಗುತ್ತೇದಾರರು ಹಾಗೂ ಅಧಿಕಾರಿಗಳಿಗೂ ಮೂರು ತಿಂಗಳ ಬೇಸಿಗೆ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಲು ತಾಕೀತು ಮಾಡಲಾಗಿದೆ ತಮ್ಮ ಕಂಪನಿಯಿಂದ ಬಾಕಿ ಉಳಿದ ಕಾಮಗಾರಿ ಬೇಗ ಪೂರ್ಣಗೊಳಿಸುವಂತೆ ರೈತರ ಪರವಾಗಿ ಮನವಿ ಮಾಡಿದರು.

ಆಗ ಕೆಬಿಜೆಎನ್ಎಲ್ ಎಇಇ ಮಲ್ಲಪ್ಪ ಆರು ತಿಂಗಳ ಅವಧಿಯಲ್ಲಿ ಮೂರನೇ ಹಂತದ ಗುತ್ತಿಗೆದಾರರ ಎಲ್ಲಾ ಕಾಮಗಾರಿ ಪೂರ್ಣಗೊಳಿಸುವ ಭರವಸೆ ನೀಡಿದರು. ಆಗ ರೈತರು ನೀವು ಪೂರ್ಣಗೊಳಿಸದಿದ್ದರೆ ಗುತ್ತಿಗೆ ಪಡೆದ ಕಂಪನಿ ಮುಂದೆ ಉಪವಾಸ ಸತ್ಯಾಗ್ರಹ ಚಳುವಳಿ ಮಾಡುವ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಹೋರಾಟ ಸಮಿತಿ ಅಧ್ಯಕ್ಷ ಸಿದ್ದರಾಮಪ್ಪ ಸಹುಕಾರ, ಶರಣಗೌಡ ಬಸಾಪೂರ, ಬಸವಂತರಾಯ ಕುರಿ, ಹೆಚ್. ಬಿ.ಮುರಾರಿ ರಮೇಶ ಶಾಸ್ತಿ ಮಲ್ಲೇಶಗೌಡ ಮಟ್ಟೂರು, ಆದನಗೌಡ ಪಾಟೀಲ್, ಗುರುನಾಥರೆಡ್ಡಿ ದೇಸಾಯಿ, ಮಲ್ಲನಗೌಡ ಹಳ್ಳಿ, ರೈತ ಮುಖಂಡರಾದ ಕರಿಬಸನಗೌಡ ಬಸಾಪೂರ, ಚಂದ್ರಶೇಖರಪ್ಪ ವಂದ್ಲಿ, ವಿರುಪಾಕ್ಷಪ್ಪ ಹಂದ್ರಾಳ, ಅಮರಗುಂಡಪ್ಪ ಅರಳಳ್ಳಿ, ಸಿದ್ದನಗೌಡ, ವೆಂಕನಗೌಡ, ದೇವರೆಡ್ಡಿ, ಸಿದ್ರಾಮಪ್ಪ, ಶರಣಪ್ಪ ಸಾಹುಕಾರ, ಶರಣಪ್ಪ ಹೊಳೆಯಾಚಿ, ಶರಣಪ್ಪ ಉಮಲೂಟಿ, ಶೇಖರಯ್ಯ,, ದೇವಪ್ಪ, ಶಿವಕುಮಾರ, ಮಂಜುನಾಥ, ಸಿಂಗ್ ಸೇರಿ ನೂರಾರು ರೈತ ಮುಖಂಡರು ಇಲಾಖೆ ಮತ್ತು ಕಂಪನಿ ಅಧಿಕಾರಿ ವರ್ಗ ಇದ್ದರು.




ಬಸವಕಲ್ಯಾಣ :– ನಗರದಲ್ಲಿ ಡಾ. ಕೆ. ಜಿ. ಶರಣಪ್ಪ ಗದಲೇಗಾಂವ ಅವರು ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನಪತ್ರಿಕೆ ಓದುತ್ತಿರುವದು ದೃಶ್ಯ ಕಾಣಬಹುದು.

# ಹಲ್ಲಿನ ಆರೋಗ್ಯ ಅತಿ ಮುಖ್ಯ



ಮಲ್ಲಮ್ಮ ನುಡಿ ವಾರ್ತೆ

ಕೆಂಭಾವಿ:ಮಾ.22:ನಾವು ತಿನ್ನುವ ಆಹಾರ ಸರಿಯಾಗಿ ಜೀರ್ಣವಾಗಬೇಕಾದರೆ ನಮ್ಮ ಹಲ್ಲು ಮತ್ತು ಬಾಯಿಯನ್ನು ಅನೇಕ ರೋಗಗಳಿಂದ ಕಾಪಾಡಿಕೊಳ್ಳುವುದು ಅತೀಮುಖ್ಯ ಎಂದು ಖ್ಯಾತ ಹಲ್ಲುಬಾಯಿ ರೋಗದ ತಜ್ಞೆ ಡಾ. ಅಶ್ವಿನಿ ಪಾಟೀಲ ಹೇಳಿದರು.

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಗುರುವಾರ ವಿಶ್ವ ಬಾಯಿ ಆರೋಗ್ಯ ದಿನಾಚರಣೆ ನಿಮಿತ್ಯ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹಲ್ಲು ಬೇನೆ, ಬಾಯಿಯಿಂದ ದುರ್ನಾತ ಬರುವುದು ಇಂಥಾ ಲಕ್ಷಣಗಳು ಕಂಡು ಬಂದರೆ ಕೂಡಲೆ ತಜ್ಞವೈದ್ಯರನ್ನು ಕಾಣುವುದು ಸೂಕ್ತ. ವಿಶೇಷವಾಗಿ ವೃದ್ಧರಲ್ಲಿ, ಗರ್ಭಿಣಿ ಸ್ತ್ರೀಯರು ತಮ್ಮ ಹಲ್ಲುಗಳನ್ನು ಬಾಯಿಯನ್ನು ತಪಾಸಣೆ ಮಡಿಸಿಕೊಳ್ಳುವಂತೆ ಸಲಹೆ ನೀಡಿದರು.

ವೈದ್ಯಾಧಿಕಾರಿ ಡಾ. ಗಿರೀಶ ಕುಲಕರ್ಣಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪಟ್ಟಣದಲ್ಲಿ ಈಗಾಗಲೆ ಬಾಯಿ ರೋಗದ ಲಕ್ಷಣಗಳು ಕಂಡು ಬಂದಿದ್ದು ಸಮಯಕ್ಕೆ ಸರಿಯಾಗಿ ತಮ್ಮ ಹಲ್ಲು ಬಾಯಿಯನ್ನು ಪರೀಕ್ಷೆ ಮಾಡಿಸಿ ರೋಗನಿರೋಧಕ ಔಷಧಿ ತೆಗೆದುಕೊಳ್ಳುವಂತೆ ಸಲಹೆ ನೀಡಿದರು.

ಪುರಸಭೆ ಅಧ್ಯಕ್ಷ ರಹೆಮಾನ ಪಟೇಲ ಯಲಗೋಡ, ಪುರಸಭೆ ಮಾಜಿ ಸದಸ್ಯ ರಾಘವೇಂದ್ರ ದೇಶಪಾಂಡೆ, ಡಾ. ಬಸನಗೌಡ, ಡಾ. ರಕ್ಷಿತಾ ನ್ಯಾಮಗೊಂಡ, ಕಿರಣ, ಮಲ್ಲಣ್ಣ, ರಮೇಶ ಇದ್ದರು. ರೇವಣಸಿದಪ್ಪ ನಿರೂಪಿಸಿದರು.

# ಚಿಟಗುಪ್ಪದಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಶ್ರಮಿಸುತ್ತೇನೆ : ಅನೀಲಕುಮಾರ ಸಿಂಧೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ : ಎಲ್ಲಾ ಭಾಷೆಗಳಲ್ಲಿ ಕನ್ನಡ ಭಾಷೆ ಅತ್ಯಂತ ಶ್ರೇಷ್ಠವಾದ ಭಾಷೆ ಕನ್ನಡ ಭಾಷೆಯು ಪ್ರಾಚೀನ ಭಾಷೆಯಾಗಿದ್ದು ನಾಡು ನುಡಿ ನಮ್ಮ ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಹೊಣೆಯಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ತಾಲೂಕಾಧ್ಯಕ್ಷ ಅನೀಲಕುಮಾರ ಎಂ. ಸಿಂಧೆ ಅವರು ಅಭಿಪ್ರಾಯ ವ್ಯಕ್ತಪಡಿಸಿದರು. ಪಟ್ಟಣದ ಓಂಕಾರೇಶ್ವರ ಮೋಟಾರ್ ಶೋರೂಮನಲ್ಲಿ ಗೆಳೆಯರ ಬಳಗದಿಂದ ಹಮ್ಮಿಕೊಂಡಿದ್ದ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳಾಗಿ ಆಯ್ಕೆಯಾದ ವೀರೇಶತುಗಾಂವ, ಅನೀಲಕುಮಾರ ಸಿಂಧೆ, ಮುರಳೀಧರ ನಾಯಕ, ರವಿರಾಜ ಮಂಕಾಲ ಇವರುಗಳಿಗೆ ಹಮ್ಮಿಕೊಂಡಿದ್ದ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಚಿಟಗುಪ್ಪ ತಾಲೂಕಿನಲ್ಲಿ ಕನ್ನಡ ಭವನಕ್ಕಾಗಿ ಒಂದು ನೀವೇಶನ ಮಂಜುರು ಮಾಡಿಸಿ, ಶಾಲಾ–ಕಾಲೇಜುಗಳಲ್ಲಿ ಕನ್ನಡ ಪರ ಕಾರ್ಯಕ್ರಮ ಹಾಗೂ ಕಡಿಮೆ ವಿದ್ಯಾರ್ಥಿಗಳ ಸಂಖ್ಯೆ ಇರುವ ಕನ್ನಡ ಸರ್ಕಾರಿ ಶಾಲೆಗಳನ್ನು ಸರ್ಕಾರ ಮುಚ್ಚುವ ಹಂತದಲ್ಲಿ ಯೋಚಿಸುತ್ತಿದೆ. ಅಂತಹ ಕನ್ನಡ ಶಾಲೆಗಳನ್ನು ಮುಚ್ಚದಂತೆ ನೋಡಿಕೊಳ್ಳುವುದು ನನ್ನ ಗುರಿ, ಕನ್ನಡ ನಾಡು, ನುಡಿ, ನೆಲ, ಜಲಕ್ಕಾಗಿ ಹಗಲಿರಳು ಶ್ರಮಿಸುತ್ತೇನೆ ನಿಮ್ಮೆಲ್ಲರ ಸಹಕಾರ ಇರಲಿ ಎಂದು ತಿಳಿಸಿದರು. ಪತ್ರಕರ್ತ ರಾಜಕುಮಾರ ಆರ್. ಹಡಪದ ಮಾತನಾಡಿ, ಕನ್ನಡ ಭಾಷೆಯ ಬಗ್ಗೆ ಜಾಗೃತಿ ಮೂಡಿಸುವುದು ಕೇವಲ ವೇದಿಕೆಗೆ ಸೀಮಿತವಾಗಿರಬಾರದು ಎಂದು ಹೇಳುತ್ತಾ ಪ್ರಾಥಮಿಕ ಶಿಕ್ಷಣದಿಂದ ಹತ್ತನೆಯ ತರಗತಿವರೆಗೆ ಕಡ್ಡಾಯವಾಗಿ ಕನ್ನಡದಲ್ಲಿ ಕನ್ನಡ ಶಾಲೆಯಲ್ಲಿ ಸೇರಿಸಬೇಕು ಮತ್ತು ನಮ್ಮ ಕಲೆ ಸಂಸ್ಕೃತಿಯನ್ನು ಉಳಿಸಲು ಕನ್ನಡ ಮನಸುಗಳು ನಿರಂತರ ಶ್ರಮಿಸಬೇಕು ಇತ್ತೀಚಿನ ದಿನಗಳಲ್ಲಿ ನಾವು ನೋಡುತ್ತಿದ್ದೇವೆ ಇಂಗ್ಲಿಷ್ ವ್ಯಾಮೋಹಕ್ಕೆ ಒಳಗಾಗಿ ಇಂದಿನ ಮಕ್ಕಳು ಕನ್ನಡವನ್ನು ಮರೆಯುತ್ತಿದ್ದಾರೆ. ಅರ್ಧ ಮರ್ದ ಇಂಗ್ಲಿಷ್ ಕಲಿತು ಯಾವ ಭಾಷೆಯಲ್ಲಿಯೂ ಪರಿಣಿತಿಯನ್ನು ಹೊಂದದೆ ತಮ್ಮ ಮುಂದಿನ ಭವಿಷ್ಯವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ ಪಾಲಕರು ಇದನ್ನು ಆಲೋಚಿಸಿ ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಕಲಿಸಬೇಕು ಎಂದು ಹೇಳಿದರು. ಕರ್ನಾಟಕ ರಾಜ್ಯ ಶಾಲಾ ಶಿಕ್ಷಣ ಇಲಾಖೆ ನೌಕರರ ಸಂಘದ ವಿಭಾಗಿಯ ಕಾರ್ಯಾಧ್ಯಕ್ಷ ಮುರಳೀಧರ ಎಲ್. ನಾಯಕ ಮಾತನಾಡಿ, ಗಡಿಭಾಗದ ಬೀದರ್ ಜಿಲ್ಲೆಯಲ್ಲಿ ಕನ್ನಡದೊಂದಿಗೆ, ತೆಲುಗು, ಉರ್ದು, ಮರಾಠಿ, ಹಿಂದಿ ಮುಂತಾದ ಭಾಷೆಗಳು ಇರುವುದರಿಂದ ಕನ್ನಡವೂ ಮರೆಯಾಗುತ್ತಿದೆ ದೈನಂದಿನ ಜೀವನದಲ್ಲಿ ಎಲ್ಲರೊಂದಿಗೆ ಕನ್ನಡವನ್ನೇ ಮಾತನಾಡಲು ರೂಢಿಸಿಕೊಳ್ಳಬೇಕು ಇತರನ್ನು ಕನ್ನಡದಲ್ಲಿ ಮಾತನಾಡಲು ಜಾಗೃತಿ ಮೂಡಿಸಬೇಕು ಭಾಷಾಭಿಮಾನ ಎಲ್ಲರಲ್ಲಿ ಬೆಳೆದಾಗ ಮಾತ್ರ ಕನ್ನಡವು ಉಳಿಯುತ್ತದೆ ಎಂದು ನುಡಿದರು. ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಮಾತನಾಡಿ, ಕನ್ನಡ ನಾಡು ಕಟ್ಟಲು ಒಬ್ಬರಿಂದ ಸಾಧ್ಯವಿಲ್ಲ, ಎಲ್ಲರ ಸಹಕಾರ ಇದ್ದಾಗ ಮಾತ್ರ ನಾಡು ಕಟ್ಟಲು ಸಾಧ್ಯವಾಗುತ್ತದೆ. ಕಲಿಕೆ ಎಂಬುದು ಪುಸ್ತಕ, ಶಾಲಾ ಕೊಠಡಿಯಿಂದ ಮಾತ್ರ ಸಾಧ್ಯವಿಲ್ಲ. ಮಹನೀಯರ ನಡವಳಿಕೆ ಕೂಡ ನಮ್ಮ ಕಲಿಕೆಗೆ ಸಹಕಾರಿಯಾಗಿದ್ದು, ಸಮ್ಮೇಳನ ವೇದಿಕೆಗಳು ಮಹನೀಯರ ನಡವಳಿಕೆ ತಿಳಿದುಕೊಳ್ಳಲು ಸಹಕಾರಿಯಾಗುತ್ತವೆ' ಎಂದರು. ಜಿಲ್ಲಾ ಸಹಕಾರಿ ಯೂನಿಯನ್ ನಿರ್ದೇಶಕ ವೀರೇಶ ತುಗಾಂವ ಮಾತನಾಡಿ, ಸಹಕಾರಿ ಕ್ಷೇತ್ರ ಅಭಿವೃದ್ಧಿಪಡಿಸುವುದೇ ನನ್ನ ಮುಖ್ಯ ಉದ್ದೇಶವಾಗಿದೆ, ಮುಂಬರುವ ದಿನಗಳಲ್ಲಿ, ಚಿಟಗುಪ್ಪ ತಾಲೂಕಿನಲ್ಲಿ ಕೈಗಾರಿಗಳು ಸ್ಥಾಪನೆಯಾಗಬೇಕಾಗಿದೆ, ಅಲ್ಲದೆ ಬಡವರಿಗಾಗಿ– ರೈತರಿಗಾಗಿ ಕಡಿಮೆ ಖರ್ಚಿನಲ್ಲಿ ಮಲ್ಟಿ ಸ್ಪೇಷಾಲಿಟಿ ಆಸ್ಪತ್ರೆ ನಿರ್ಮಾಣ ಕಾರ್ಯಕ್ಕೆ ತಾಲೂಕಿನ ಸರ್ವರ ಸಹಾಯ ಸಹಕಾರ ಬೇಕಾಗಿದೆ ಎಂದರು ಹೇಳಿದರು. ಉಪನ್ಯಾಸಕ ಶಾಂತಕುಮಾರ್ ಪಾಟೀಲ್ ಕಾರ್ಯಕ್ರಮ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹಾರುದ್ರಪ್ಪ ಅಣದುರೆ, ವಿಜಯಕುಮಾರ ಬೊಮ್ಮಣಿ, ಸಂಜೀವನ ಭೋಸ್ಲೆ ಮಾತನಾಡಿ, ಕನ್ನಡ ನಾಡು ನುಡಿಗಾಗಿ ಎಲ್ಲರು ಒಗ್ಗಟ್ಟಿನಿಂದ ಶ್ರಮಿಸೋಣ ಎಂದು ಹೇಳಿದರು. ರಾಮದಾಸ ಮಂಕಾಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಚಿತ್ರಕಲಾ ಶಿಕ್ಷಕ ಗುಂಡಪ್ಪ ಕೋರಿ ಭಾವಗೀತೆ ಹಾಡಿದರು. ಚಂದ್ರಕಾಂತ ನಾರಾಯಪುರ್ ನಿರೋಪಿಸಿ ವಂದಿಸಿದರು. ಈ ಸಂದರ್ಭದಲ್ಲಿ ಜಗನಾಥ ಗಾದಾ, ರಾಘವೇಂದ್ರ ಕುಲಕರ್ಣಿ, ಹಸನ್, ಮೋಹನ, ವೀರಣ್ಣ ಕಟಗಿ, ಬಸವರಾಜ ಪಡಗಿ, ವೆಂಕಟೇಶ್ ಮದರಗಾಂವ, ರಜನಿಕಾಂತ್ ಫುಲೇ, ರವಿ ಪಡಗಿ, ಶಿವಕುಮಾರ ರಾಸೂರ, ಮಲ್ಲಿಕಾರ್ಜುನ ತಿರಲಾಪುರ್, ಸುನೀಲ ದರವೇಶ, ನಾಗೇಂದ್ರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.21 –ಇಲ್ಲಿನ ತೋಟಗಾರಿಕೆ ಇಲಾಖೆಯಿಂದ 2025–26ನೇ ಸಾಲಿಗೆ ಜಿಲ್ಲೆಯ ಆಸಕ್ತಿಯುಳ್ಳ ಅರ್ಹ ರೈತ ಮಕ್ಕಳಿಗೆ ಕೊಪ್ಪಳ ತಾಲ್ಲೂಕಿನ ಮುನಿರಾಬಾದ ತೋಟಗಾರಿಕಾ ತರಬೇತಿ ಕೇಂದ್ರದಲ್ಲಿ 10 ತಿಂಗಳ ತೋಟಗಾರಿಕೆ ತರಬೇತಿ ನಡೆಯಲಿದ್ದು, ಆಸಕ್ತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕನಿಷ್ಠ 18 ವರ್ಷ ಗರಿಷ್ಠ 33 ವರ್ಷ, ಇತರರಿಗೆ ಕನಿಷ್ಠ 18 ವರ್ಷ ಗರಿಷ್ಠ 30 ವರ್ಷ ವಯೋಮಿತಿಯನ್ನು ನಿಗಧಿಪಡಿಸಲಾಗಿದೆ.

ಅಭ್ಯರ್ಥಿಗಳು ಕನ್ನಡ ವಿಷಯದೊಂದಿಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು. ತರಬೇತಿ ಪ್ರವೇಶ ಬಯಸುವ ಅಭ್ಯರ್ಥಿಯ ತಂದೆ /ತಾಯಿ /ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು. ಹಾಗೂ ಸ್ವಂತ ಸಾಗುವಳಿ ಮಾಡುತ್ತಿರಬೇಕು.

ಅರ್ಜಿಗಳನ್ನು ತೋಟಗಾರಿಕೆ ಉಪನಿರ್ದೇಶಕರು (ಜಿ.ಪಂ) ರಾಯಚೂರು ಕಚೇರಿ ಅಥವಾ ಇಲಾಖೆಯ ವೆಬ್‌ಸೈಟ್ ವಿಳಾಸ: https://horticulturedir.karnataka.gov.in ನ ಮೂಲಕ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಏಪ್ರೀಲ್ 01ರ ಸಂಜೆ 05.30 ಗಂಟೆಯೊಳಗೆ ಈ ಕಚೇರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 7338371136ಗೆ ಸಂಪರ್ಕಿಸುವಂತೆ ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ತಾಳಿಕೋಟಿ ಪಟ್ಟಣಕ್ಕೆ ಡಾ.ಶಂಕರ ಬಿದರಿ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ (ರಿ) ರಾಜ್ಯಾಧ್ಯಕ್ಷ, ನಿವೃತ್ತ ಡಿಜಿಪಿ ಡಾ.ಶಂಕರ ಬಿದರಿ ಅವರು ತಾಳಿಕೋಟಿ ಪಟ್ಟಣಕ್ಕೆ ಇಂದು( ಮಾ.23) ಆಗಮಿಸಲಿದ್ದಾರೆ. ಮಧ್ಯಾಹ್ನ 3:00 ಘಂಟೆಗೆ ಪಟ್ಟಣದ ಅಡತ್ ಅಸೋಸಿಯೇಷನ್ ಸಭಾ ಭವನದಲ್ಲಿ ನಡೆಯಲಿರುವ ವೀರಶೈವ ಲಿಂಗಾಯತ ಸಮಾಜದ ಬಾಂಧವರ ಸಭೆಯಲ್ಲಿ ವೀರಶೈವ ಲಿಂಗಾಯತ ಮಹಾಸಭಾ ತಾಳಿಕೋಟಿ ತಾಲೂಕ ಘಟಕದ ರಚನೆ ಕುರಿತು ಚರ್ಚೆ ನಡೆಸಲಿದ್ದಾರೆ, ಸಮಾಜದ ಬಾಂಧವರು ಸರಿಯಾದ ಸಮಯಕ್ಕೆ ಈ ಸಭೆಗೆ ಹಾಜರಿರಬೇಕು ಎಂದು ಪ್ರಕಟಣೆ ತಿಳಿಸಿದೆ.

# ಮಾ.24ರಂದು ಜನ ಜಾಗೃತಿ ಜಾಥಾ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.22– ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಕ್ಷಯರೋಗ ನಿರ್ಮೂಲ ವಿಭಾಗದಿಂದ ಮಾ.24ರ ಬೆಳಿಗ್ಗೆ 8ಗಂಟೆಗೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿ ಆವರಣದಿಂದ ನಗರದ ಪ್ರಮುಖ ರಸ್ತೆಗಳಲ್ಲಿ ವಿಶ್ವಕ್ಷಯರೋಗ ದಿನಾಚರಣೆ ಅಂಗವಾಗಿ ಜನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಜಾಥಾ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳ್ಳಿಸಬೇಕೆಂದು ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್ಸೆಸ್ಸೆಲ್ಸಿ ಪರೀಕ್ಷೆಗೆ 1,119 ವಿದ್ಯಾರ್ಥಿಗಳು ಗೈರು

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.22– : ರಾಯಚೂರು ಜಿಲ್ಲೆಯಲ್ಲಿ ಶುಕ್ರವಾರದಿಂದ ಆರಂಭಗೊಂಡ ಎಸ್ಸೆಸ್ಸೆಲ್ಸಿ ಪರೀಕ್ಷೆ ಮೊದಲ ದಿನ ಸುಗಮವಾಗಿ ನಡೆಯಿತು.

97 ಕೇಂದ್ರಗಳಲ್ಲಿ ನಡೆದ ಪ್ರಥಮ ಭಾಷೆ ಪರೀ–ಕ್ಷೆಗೆ 1,119 ವಿದ್ಯಾರ್ಥಿಗಳು ಗೈರಾದರು. ಜಿಲ್ಲೆಯಲ್ಲಿ ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದ 31,617 ವಿದ್ಯಾರ್ಥಿಗಳ ಪೈಕಿ 30,498 ವಿದ್ಯಾರ್ಥಿಗಳು ಹಾಜರಾದರು. ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತವೆಂದು ಘೋಷಿಸಲಾಗಿತ್ತು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಸ್ಕಿ: ಮಾ.26ರಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪರಿಶೀಲನಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.22–ಜಿಲ್ಲೆಯ ಮಸ್ಕಿ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಮೆಹಬೂಬಸಾಬ್ ಮುದ್ದಾಪೂರ ಅವರ ಅಧ್ಯಕ್ಷತೆಯಲ್ಲಿ ಮಾ.26ರ ಬೆಳಿಗ್ಗೆ 11ಗಂಟೆಗೆ ಮಸ್ಕಿ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಅನುಷ್ಠಾನ ಪರಿಶೀಲನಾ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಸಂಬಂಧಿಸಿದ ತಾಲೂಕು ಅಧಿಕಾರಿಗಳ ಹಾಜರಾಗಬೇಕೆಂದು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಮಿತ ಪಾಟೀಲ್ ಸೆಂಟ್ರಲ್ ಸ್ಕೂಲ್‌ಗೆ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯಪುರಸ್ಕಾರ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.22:ಭಾರತ ಸೌಟ್ಸ್ ಮತ್ತು ಗೈಡ್ಸ್ 2022–23 ನೇ ಸಾಲಿನ ರಾಜ್ಯ ಮಟ್ಟದ ರಾಜ್ಯಪುರಸ್ಕಾರ ಪ್ರಶಸ್ತಿ ಸಮಾರಂಭದಲ್ಲಿ ಅಮಿತ ಪಾಟೀಲ್ ಸೆಂಟ್ರಲ್ ಶಾಲೆಯ ವಿದ್ಯಾರ್ಥಿನಿಯಾದ ಅರ್ಪಿತಾ ಪ್ರಕಾಶ ರಾಜ್ಯಭವನದಲ್ಲಿ ರಾಜ್ಯಪಾಲರಿಂದ ಪ್ರಶಸ್ತಿ ಪಡೆದಿದ್ದಾರೆ.

ಇನ್ನುಳಿದ ವಿದ್ಯಾರ್ಥಿಗಳಾದ ಗೈ ಡ್‌ಗಳಾದ ಭವಾನಿ ರವೀಂದ್ರ, ಅರ್ಚನಾ ರೆಡ್ಡಿ ಹಾಗೂ ಸ್ಕೌಟ್ಸ್ ವತಿಯಿಂದ ಅಮಿತ ಚಂದ್ರಕಾಂತ, ಅಭಿಶೇಕ ಅಂಬರೀಷ, ಶ್ರೇಯಸ್ ದಾನೇಶ್ವರ, ವಿರೇಶ ಮಂಜುನಾಥ, ಅಖಿಲೇಶ ಅನಿಲಕುಮಾರ, ಚಂದ್ರಶೇಖರ ಶರಣಬಸಪ್ಪ ಹಾಗೂ ಚರಿತ ಶರಣಬಸಪ್ಪ ಅವರುಗಳು ಕೂಡಾ ಪ್ರಶಸ್ತಿಯನ್ನು ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಸ್ಕೌಟ್ಸ್ ಮತ್ತು ಗೈಡ್ಸ್ ತರಬೇತುದಾರರಾದ ಆನಂದ ಆರ್. ಮಾಕೊಂಡಿ ಹಾಗೂ ಭಾಗ್ಯಶ್ರೀ ಎಸ್. ಕಂಚಿನಕೋಟಿ, ಶಾಲೆಯ ಅಧ್ಯಕ್ಷ ಡಾ.ಬಿ.ಜಿ.ಪಾಟೀಲ್, ಶಾಲೆಯ ವ್ಯವಸ್ಥಾಪಕ ನಿರ್ದೇಶಕ ಚಂದ್ರಕಾಂತ ಬಿ. ಪಾಟೀಲ್ ಹಾಗೂ ಶಾಲೆಯ ನಿರ್ದೇಶಕ ಡಾ.ಕೈಲಾಶ ಬಿ. ಪಾಟೀಲ್ ಮತ್ತು ಶಾಲೆಯ ಪ್ರಾಂಶುಪಾಲರಾದ ಸುಷ್ಮಾ ಎಸ್. ಹಡಗಲಿಮಠ ಅವರು ಹರ್ಷ ವ್ಯಕ್ತಪಡಿಸಿದ್ದಾರೆ.

## ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ
ರಾಯಚೂರು ಮಾ.22: ಇಲ್ಲಿನ ತೋಟಗಾರಿಕೆ ಇಲಾಖೆಯಿಂದ 2025–26ನೇ ಸಾಲಿಗೆ ಜಿಲ್ಲೆಯ ಆಸಕ್ತಿಯುಳ್ಳ ಅರ್ಹ ರೈತ ಮಕ್ಕಳಿಗೆ ಕೊಪ್ಪಳ ತಾಲ್ಲೂಕಿನ ಮುನಿರಾಬಾದ ತೋಟಗಾರಿಕಾ ತರಬೇತಿ ಕೇಂದ್ರದಲ್ಲಿ 10 ತಿಂಗಳ ತೋಟಗಾರಿಕೆ ತರಬೇತಿ ನಡೆಯಲಿದ್ದು, ಆಸಕ್ತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕನಿಷ್ಠ 18 ವರ್ಷ ಗರಿಷ್ಠ 33 ವರ್ಷ, ಇತರರಿಗೆ ಕನಿಷ್ಠ 18 ವರ್ಷ ಗರಿಷ್ಠ 30 ವರ್ಷ ವಯೋಮಿತಿಯನ್ನು ನಿಗಧಿಪಡಿಸಲಾಗಿದೆ.

ಅಭ್ಯರ್ಥಿಗಳು ಕನ್ನಡ ವಿಷಯದೊಂದಿಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು. ತರಬೇತಿ ಪ್ರವೇಶ ಬಯಸುವ ಅಭ್ಯರ್ಥಿಯ ತಂದೆ /ತಾಯಿ /ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು. ಹಾಗೂ ಸ್ವಂತ ಸಾಗುವಳಿ ಮಾಡುತ್ತಿರಬೇಕು.

ಅರ್ಜಿಗಳನ್ನು ತೋಟಗಾರಿಕೆ ಉಪನಿರ್ದೇಶಕರು (ಜಿ.ಪಂ) ರಾಯಚೂರು ಕಚೇರಿ ಅಥವಾ ಇಲಾಖೆಯ ವೆಬ್‌ಸೈಟ್ ವಿಳಾಸ: https://horticulturedir.karnataka.gov.in ಮೂಲಕ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಏಪ್ರೀಲ್ 01ರ ಸಂಜೆ 05.30ಗಂಟೆಯೊಳಗೆ ಈ ಕಚೇರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 7338371136ಗೆ ಸಂಪರ್ಕಿಸುವಂತೆ ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವತಿ ಕಾಣೆ: ಪತ್ತೆಗೆ ಪೊಲೀಸರ ಮನವಿ



ಮಲ್ಲಮ್ಮ ನುಡಿ ವಾರ್ತೆ
ರಾಯಚೂರು ಮಾ.22: ಇಲ್ಲಿನ ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯ ವ್ಯಾಪ್ತಿಯ ನಿವಾಸಿಯಾದ ಕುಮಾರಿ ಮಾನಸ ತಂದೆ ಶರಣಪ್ಪ (19) ಇಡಿಗಾ ಎಂಬ ಯುವತಿ ಮಾ.16ರ ಬೆಳಿಗ್ಗೆ 10ಗಂಟೆಗೆ ಲ್ಯಾಟ್ರೀನ್ ಹೋಗುತ್ತೀನಿ ಅಂತ ಹ ಮನೆಯಿಂದ ಹೋದವಳು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ: 40/2025 ಕಲಂ ಅಡಿ ಪ್ರಕರಣ ದಾಖಲಾಗಿದೆ.

ಯುವತಿಯ ಚಹರೆ: ವಯಸ್ಸು 19, ಅಂದಾಜು 4.5 ಅಡಿ ಎತ್ತರ, ಗೋದಿ ಮೈ ಬಣ್ಣ, ಗುಂಡನೇಯ ಮುಖ, ಕಪ್ಪು ಕೂದಲು ಹೊಂದಿದ್ದು, ಕಡು ನೀಲಿ ಬಣ್ಣದ ಚೂಡಿದಾರ ಹಾಗೂ ಬಿಳಿ ವೇಲ್ ಧರಿಸಿದ್ದಾರೆ. ಕನ್ನಡ, ತೆಲುಗು ಹಾಗೂ ಹಿಂದಿ ಭಾಷೆ ಮಾತನಾಡುತ್ತಾಳೆ. ಈ ಯುವತಿ ಬಗೆ ಸುಳಿವು ಸಿಕ್ಕಲ್ಲಿ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 085322–35308, ಪಿಎಸ್‌ಐ ದೂರವಾಣಿ ಸಂಖ್ಯೆ: 9480803850, ವೃತ್ತ ಅಧಿಕಾರಿ ದೂರವಾಣಿ ಸಂಖ್ಯೆ: 9480803832ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಷತ್ತಿಗೆ ನೇಮಕ: ಜಾಬಾಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ
ಬೀದರ್: ಕನ್ನಡ ಸಾಹಿತ್ಯ ಪರಿಷತ್ತಿನ ಬೀದರ್ ತಾಲ್ಲೂಕು ಘಟಕದ ಗೌರವ ಕಾರ್ಯದರ್ಶಿಯಾಗಿ ನೇಮಕಗೊಂಡ ಉಮೇಶ ಜಾಬಾ ಅವರನ್ನು ತಾಲ್ಲೂಕಿನ ಮರಕಲ್ ಗ್ರಾಮ ಪಂಚಾಯಿತಿಯಲ್ಲಿ ರಾಷ್ಟ್ರೀಯ ದಲಿತ ಬ್ರಿಗೇಡ್ ವತಿಯಿಂದ ಸನ್ಮಾನಿಸಲಾಯಿತು. ಬ್ರಿಗೇಡ್ ಸಂಸ್ಥಾಪಕ ಅವಿನಾಶ ದೀನೆ ಶಾಲು ಹೊದಿಸಿ, ಮೈಸೂರು ಪೇಟ ತೊಡಿಸಿ ಸನ್ಮಾನಿಸಿದರು.

ಬ್ರಿಗೇಡ್ ಯುವ ಘಟಕದ ಅಧ್ಯಕ್ಷ ಶಿವಕುಮಾರ ಜೀರ್ಗೆ, ದಲಿತ ಸಂಘರ್ಷ ಸಮಿತಿಯ ರಾಜಕುಮಾರ ಜ್ಯೋತಿ, ಪ್ರಮುಖರಾದ ಶಿವಾಜಿ ಸಾಕ್ರೆ ಮತ್ತಿತರರು ಇದ್ದರು.

ಜಿಲ್ಲೆಯಲ್ಲಿ ಮೊದಲ ದಿನದ ಎಸ್.ಎಸ್.ಎಲ್.ಸಿ ಪರೀಕ್ಷೆ ಸುಗಮ

## ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಪರೀಕ್ಷೆ ಏದುರಿಸಲಿ; ಜಿ.ಪಂ ಸಿಇಒ ರಾಹುಲ್

ಮಲ್ಲಮ್ಮ ನುಡಿ ವಾರ್ತೆ
ರಾಯಚೂರು ಮಾ.21– ಇಂದಿನಿಂದ ಎಸ್.ಎಸ್.ಎಲ್.ಸಿ ಪರೀಕ್ಷೆಗಳು ಆರಂಭವಾಗಿವೆ. ರಾಯಚೂರು ಜಿಲ್ಲೆಯಲ್ಲಿ 34,619 ವಿದ್ಯಾರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. 97 ಪರೀಕ್ಷಾ ಕೇಂದ್ರಗಳನ್ನು ತೆರಯಲಾಗಿದೆ. ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಪರೀಕ್ಷೆ ಏದುರಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ತುಕಾರಂ ಪಾಂಡ್ವೆ ಅವರು ಹೇಳಿದರು.

ಮಾ.21ರ ಶುಕ್ರವಾರದಂದು ಜಿಲ್ಲೆಯ ಮಾನವಿ ತಾಲೂಕಿನ ಆದರ್ಶ ವಿದ್ಯಾಲಯ, ಸರಕಾರಿ ಬಾಲಕರ ಪದವಿ ಪೂರ್ವ ಕಾಲೇಜು ಹಾಗೂ ವೆಲಂಕಿ ರಾಮಕೃಷ್ಣ ಹಿರಿಯ ಪ್ರಾಥಮಿಕ ಶಾಲೆಯ ಪರೀಕ್ಷೆ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಿ ಮಾತನಾಡಿದರು.

ನೀರಮಾನ್ವಿಯ ಆದರ್ಶ ವಿದ್ಯಾಲಯ ಪರೀಕ್ಷೆ ಕೇಂದ್ರಕ್ಕೆ ಬೇಟಿ ನೀಡಿ ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳ ಮಾಹಿತಿ ಪಡೆದರು. ಕೇಂದ್ರದಲ್ಲಿ ಒಟ್ಟು 607 ವಿದ್ಯಾರ್ಥಿಗಳ ಪೈಕಿ 52 ವಿದ್ಯಾರ್ಥಿಗಳು ಗೈರು ಹಾಜರಿ ಕಂಡುಬಂತು. ಸರಕಾರಿ ಬಾಲಕರ ಪದವಿ ಪೂರ್ವ ಕಾಲೇಜು ಕೇಂದ್ರದಲ್ಲಿ ಒಟ್ಟು 387 ವಿದ್ಯಾರ್ಥಿಗಳ ಪೈಕಿ 10 ವಿದ್ಯಾರ್ಥಿಗಳು ಗೈರು, ವೆಲಂಕಿ ರಾಕೃಷ್ಣ ಹಿರಿಯ ಪ್ರಾಥಮಿಕ ಶಾಲೆ ಕೇಂದ್ರದಲ್ಲಿ ಒಟ್ಟು 536 ಪೈಕಿ 48 ವಿದ್ಯಾರ್ಥಿಗಳು ಗೈರು ಆಗಿರುವ ಮಾಹಿತಿಯನ್ನು ಪಡೆದುಕೊಂಡರು.

ಈ ಬಾರಿ ಪರೀಕ್ಷಾ ಕೇಂದ್ರಗಳಲ್ಲಿ ಪ್ರತಿಯೊಂದು ಕೊಠಡಿಗೆ ಸಿಸಿ ಕ್ಯಾಮರಾ ಅಳವಡಿಸಿ ಮುಖ್ಯಗುರುಗಳ ಕೋಣೆಯಲ್ಲಿ ವೀಕ್ಷಿಸಲು ಅವಕಾಶ ಕಲ್ಪಿಸಿದ್ದು, ಸಿಸಿ ಕ್ಯಾಮರಾ ಕಣ್ಗಾವಲಿನಲ್ಲಿ ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿರುವ ವ್ಯವಸ್ಥೆ ಪರಿಶೀಲಿಸಿದರು. ನಂತರ ಪರೀಕ್ಷಾ ಕೇಂದ್ರದಲ್ಲಿ ಯಾವುದೇ ಕಾರಣಕ್ಕೂ ನಕಲು/ಅಕ್ರಮಗಳು ನಡೆಯದಂತೆ ಎಲ್ಲಾ ಬಗೆಯ ಅಗತ್ಯಕ್ರಮಗಳನ್ನು ಕೈಗೊಂಡು ಪರಿಕ್ಷಾರ್ಥಿಗಳಿಗೆ ಆರೋಗ್ಯಕರ ವಾತಾವರಣದಲ್ಲಿ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸುವಂತೆ ಕೇಂದ್ರಗಳ ಅಧೀಕ್ಷಕರಿಗೆ ಸೂಚಿಸಿದರು.

ಇನ್ನೂ ಪರೀಕ್ಷೆ ಕೇಂದ್ರಗಳಿಗೆ ನಿಂಯೋಜನೆಗೊಂಡ ಸಿಬ್ಬಂದಿಯವರಿಂದ ಪರೀಕ್ಷೆ ಸುಗಮವಾಗಿ ನಡೆಯುವ ಬಗ್ಗೆ ಮಾಹಿತಿ ಪಡೆದುಕೊಂಡರು.

ಇದೇ ಸಂದರ್ಭದಲ್ಲಿ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಹಾಗೂ ಕರ್ತವ್ಯ ನಿರತ ಅಧಿಕಾರಿಗಳು ಹಾಗೂ ಸೇರಿದಂತೆ ಇತರೆ ಸಿಬ್ಬಂದಿಗಳು ಇದ್ದರು.

## ರಾಜ್ಯದ ಜನರ ಏಳಿಗೆಗೆ ಹಣ ಮೀಸಲಿಡಲು ಎಐಡಿಎಸ್‌ಓ ಜಿಲ್ಲಾ ಸಮಿತಿ ಇಂದ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ
ಕೊಪ್ಪಳ: ಕರ್ನಾಟಕ ರಾಜ್ಯದ ಎಲ್ಲಾ ಸಚಿವರು ಹಾಗೂ ಶಾಸಕರು ಪಕ್ಷಾತೀತವಾಗಿ ತಮ್ಮ ಸಂಬಳ ಮತ್ತು ಭತ್ಯೆಯನ್ನು ಹೆಚ್ಚಿಸಿಕೊಂಡಿದ್ದಾರೆ. ರಾಜ್ಯದ ವಿದ್ಯಾರ್ಥಿ, ಯುವಜನರು ಸೇರಿದಂತೆ ರೈತ ಕಾರ್ಮಿಕರಾದಿಯಾಗಿ ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿರುವ ಸಂದರ್ಭದಲ್ಲಿ ಸರ್ಕಾರದ ಈ ನಡೆಯು ಪ್ರಜಾತಂತ್ರವನ್ನು ನಗೆಪಾಟಲು ಮಾಡಿದೆ.

ಕಳೆದ ಮೂರು ವರ್ಷಗಳಿಂದ ವಿದ್ಯಾರ್ಥಿಗಳಿಗೆ ಸರಿಯಾಗಿ ವಿದ್ಯಾರ್ಥಿ ವೇತನ ದೊರೆತಿಲ್ಲ. ಕಳೆದ ವರ್ಷವಷ್ಟೇ ಕಾರ್ಮಿಕರ ಮಕ್ಕಳ ವಿದ್ಯಾರ್ಥಿ ವೇತನದ ಮೊತ್ತವನ್ನು ಗಣನೀಯವಾಗಿ ಕಡಿತಗೊಳಿಸಲಾಗಿದೆ. ರಾಜ್ಯದ ಸಾವಿರಾರು ಸರ್ಕಾರಿ ಶಾಲೆಗಳಲ್ಲಿ 59 ಸಾವಿರಕ್ಕೂ ಹೆಚ್ಚು ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಸಮರ್ಪಕ ಕಟ್ಟಡ, ಶೌಚಾಲಯ ಕುಡಿಯುವ ನೀರು ಮುಂತಾದ ಕನಿಷ್ಠ ಸೌಕರ್ಯಗಳಿರದೇ ರಾಜ್ಯದ ಅನೇಕ ಸರ್ಕಾರಿ ಶಿಕ್ಷಣ ಸಂಸ್ಥೆಗಳು ಶೋಚನೀಯ ಪರಿಸ್ಥಿತಿಯಲ್ಲಿವೆ. ಇವುಗಳ ಪರಿಸ್ಥಿತಿಯನ್ನು ಉತ್ತಮ ಪಡಿಸುವುದರ ಬದಲಿಗೆ ಸರ್ಕಾರವು ಅನೇಕ ಶಾಲೆಗಳನ್ನು ಮುಚ್ಚಲು ಹೊರಟಿದೆ. ಇನ್ನು ರಾಜ್ಯದ ವಿಶ್ವವಿದ್ಯಾಲಯಗಳಂತೂ ಅನುದಾನದ ಕೊರತೆಯಿಂದ ತೀವ್ರ ಸಂಕಷ್ಟಕ್ಕೆ ಗುರಿಯಾಗಿವೆ. ರಾಜ್ಯದ ಅನೇಕ ವಿಶ್ವವಿದ್ಯಾಲಯಗಳಲ್ಲಿ ವರ್ಷಗಳಿಂದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ನೇಮಕಾತಿಯಾಗಿಲ್ಲ. ಇತ್ತೀಚೆಗಷ್ಟೆ, ಅನುದಾನ ನೀಡದೇ ರಾಜ್ಯ ಸರ್ಕಾರವು ರಾಜ್ಯದ 9 ವಿಶ್ವವಿದ್ಯಾಲಗಳನ್ನು ಮುಚ್ಚಲು ಹೊರಟಿದೆ. ಈ ಸಂದಿಗ್ಧ ಪರಿಸ್ಥಿತಿಯಲ್ಲಿ ಜನರ ತೆರಿಗೆಯನ್ನು ಶಿಕ್ಷಣ, ಆರೋಗ್ಯ, ಉದ್ಯೋಗ ಸೇರಿದಂತೆ ಜನಕಲ್ಯಾಣ ಯೋಜನೆಗಳಿಗೆ ವ್ಯಹಿಸುವುದನ್ನು ಬಿಟ್ಟು ತಮ್ಮ ವೇತನಗಳನ್ನು ಹೆಚ್ಚಿಸಿಕೊಂಡಿರುವ ಜನಪ್ರತಿನಿಧಿಗಳ ಈ ನಡೆಗೆ ಎಐಡಿಎಸ್‌ಓ ಆಕ್ರೋಶ ವ್ಯಕ್ತಪಡಿಸುತ್ತದೆ. ಕೂಡಲೇ ಈ ನಿಲುವನ್ನು ಹಿಂಪಡೆದು ರಾಜ್ಯದ ಜನರ ಏಳಿಗೆಗೆ ಈ ಹಣವನ್ನು ಮೀಸಲಿಡಬೇಕೆಂದು ಕರ್ನಾಟಕ ಸರ್ಕಾರವನ್ನು ಎಐಡಿಎಸ್‌ಓ ಆಗ್ರಹಿಸುತ್ತದೆ.

# ಮದುವಣಗಿತ್ತಿಯಂತೆ ಸಿಂಗಾರಗೊಂಡ ಹಲಗೇರಿ 10ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನ



ಕೊಪ್ಪಳ ತಾಲೂಕಿನ ಹಲಗೇರಿ ಗ್ರಾಮದಲ್ಲಿ ಭಾನುವಾರ ಹಮ್ಮಿಕೊಂಡಿರುವ. 10ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನದ ಪೂರ್ವ ಸಿದ್ಧತೆ.



ಭೋಜನಕ್ಕೆ ಸಿದ್ಧತೆ ಕೈಗೊಂಡಿರುವುದು.

(ವೀರಯ್ಯ ವಿ ಹಿರೇಮಠ)
ಮಲ್ಲಮ್ಮ ನುಡಿ ವಾರ್ತೆ
ಕೊಪ್ಪಳ : 10ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಭರ್ಜರಿ ತಯಾರಿ ನಡೆದಿದ್ದು, ತಾಲೂಕಿನ ಹಲಗೇರಿ ಗ್ರಾಮದ ಪ್ರಮುಖ ಬೀದಿಗಳು ತಳಿರು ತೋರಣಗಳಿಂದ ಮದುವಣಗಿತ್ತಿಯಂತೆ ಸಿಂಗಾರಗೊಂಡಿವೆ.

ಕೊಪ್ಪಳ ಜಿಲ್ಲಾ ಮತ್ತು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು, ಹಲಗೇರಿ ಗ್ರಾಮಸ್ಥರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿವಿಧ ಇಲಾಖೆಗಳು ಹಾಗೂ ಕನ್ನಡ ಪರ ಸಂಘಟನೆಗಳ ಸಹಕಾರದೊಂದಿಗೆ ಇಂದು (ಭಾನುವಾರ)ರಂದು ಕೊಪ್ಪಳ ತಾಲೂಕಿನ ಹಲಗೇರಿ ಗ್ರಾಮದ ಶ್ರೀ ಶಾಂಭವಿ ದೇವಸ್ಥಾನದ ಆವರಣದಲ್ಲುಲಿ 10ನೇ ಕನ್ನಡ ಸಾಹಿತ್ಯ ಸಮ್ಮೇಳನವು ಹಿರಿಯ ಬರಹಗಾರ್ತಿ ಶ್ರೀಮತಿ ಮಾಲಾ ಬಡಿಗೇರ ಸರ್ವಾಧ್ಯಕ್ಷತೆಯಲ್ಲಿ ನಡೆಯಲಿದೆ.

ಅಂದು ಬೆಳಗ್ಗೆ 7.30 ಕ್ಕೆ ರಾಷ್ಟ್ರಧ್ವಜಾರೋಹವನ್ನು ಶಾಸಕ ಕೆ. ರಾಘವೇಂದ್ರ ಹಿಟ್ನಾಳ, ಪರಿಷತ್ತು ಧ್ವಜ ವನ್ನು ಕಸಾಪ ಜಿಲ್ಲಾಧ್ಯಕ್ಷ ಶರಣೇಗೌಡ ಪೊಲೀಸ್ ಪಾಟೀಲ, ಕನ್ನಡ ಧ್ವಜವನ್ನು ಕಸಾಪ ತಾಲೂಕಾ ಅಧ್ಯಕ್ಷ ರಾಮಚಂ ದ್ರಗೌಡ ಗೊಂಡಬಾಳ ಆರೋಹಣ ವನ್ನು ಮಾಡುವ ಮೂಲಕ ಸಮ್ಮೇಳನಕ್ಕೆ ವಿಧ್ಯುಕ್ತ ಚಾಲನೆ ನೀಡಲಿದ್ದಾರೆ.

ಧ್ವಜಾರೋಹಣದ ನಂತರ 8 ಗಂಟೆಗೆ ಭುವನೇಶ್ವರಿ ಹಾಗೂ ಸಮ್ಮೇಳನಾಧ್ಯಕ್ಷರ ಭವ್ಯ ಮೆರವಣಿಗೆಯು ಹಮ್ಮಿಗೇಶ್ವರ ದೇವಸ್ಥಾನ ದಿಂದ ಶಾಂಭವಿ ದೇವಸ್ಥಾನದವರೆಗೂ

ನಡೆಯಲಿದ್ದು, ಮೆರವಣಿಗೆಗೆ ಹಿರಿಯ ಸಾಹಿತಿ ಈಶ್ವರ ಹತ್ತಿ ಚಾಲನೆ ನೀಡಲಿದ್ದಾರೆ. ಬೆ.10.30ಕ್ಕೆ ಸಮ್ಮೇಳನದ ಉದ್ಘಾಟನೆ ನಡೆಯಲಿದ್ದು ಪದ್ಮಶ್ರೀಪುರಸ್ಕೃತೆ ಭೀಮವ್ವ ಶಿಳ್ಳೆಕ್ಯಾತರ ಉದ್ಘಾಟಿಸಲಿದ್ದಾರೆ. ದಿಕ್ಸೂಚಿ ಭಾಷಣವನ್ನು ಶಾಸಕ ಕೆ. ರಾಘವೇಂದ್ರ ಹಿಟ್ನಾಳ ಮಾಡಲಿದ್ದು, ಆಶಯನುಡಿಯನ್ನು ಸಂಸದ ರಾಜಶೇಖರ ಹಿಟ್ನಾಳ, ಸಮ್ಮೇಳನಾಧ್ಯಕ್ಷರ ನುಡಿಯನ್ನು ಸಚಿವ ಶಿವರಾಜ ತಂಗಡಗಿ, ಸ್ಮರಣ ಸಂಚಿಕೆಯನ್ನು ಮಾಜಿ ಸಂಸದ ಸಂಗಣ್ಣ ಕರಡಿ ಹಾಗೂ ವಿವಿಧ ಲೇಖಕರ ಕೃತಿಗಳನ್ನು ಕೊಪ್ಪಳ ವಿ.ವಿ.

ಕುಲಪತಿ ಪ್ರೋ ಬಿ. ಕೆ.ರವಿ ಬಿಡುಗಡೆಗೊಳಿಸಲಿದ್ದಾರೆ.

ನಂತರ ಮ.12.30ಕ್ಕೆ ನುಡಿ ಸೇವಕ ದಿ. ರಾಜಶೇಖರ ಅಂಗಡಿ ಸ್ಮರಣೆ, ಮ.2 ಗಂಟೆಗೆ ಕೊಪ್ಪಳ ತಾಲೂಕಿನ ಸಾಹಿತ್ಯ ಮತ್ತು ಸಾಂಸ್ಕೃತಿಕ ಕೊಡುಗೆ ಸಂಕಿರಣಗೋಷ್ಠಿ, ಮ.3ಗಂಟೆಗೆ ಸುಮಾರು 42 ಕವಿಗಳಿಂದ ಕವಿಗೋಷ್ಠಿ, ಸಂಜೆ 5.ಗಂಟೆಗೆ ಬಹಿರಂಗ ಸಭೆ ಮತ್ತು ವಿವಿಧ ಸಾಧಕರಿಗೆ ಸನ್ಮಾನ ಹಾಗೂ ಸಂಜೆ 5.30ಕ್ಕೆ ಸಮಾರೋಪ ಸಮಾರಂಭ ನಂತರ ವಿವಿಧ ಕಲಾ ತಂಡಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿದೆ.

ತಳಿರು ತೋರಣಗಳಿಂದ ಸಿಂಗಾರಗೊಂಡ ಹಲಗೇರಿ:

10ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನ ಹಿನ್ನೆಲೆಯಲ್ಲಿ ಹಲಗೇರಿ ಗ್ರಾಮದ ಬಸ್ ನಿಲ್ದಾಣದಿಂದ ಶ್ರೀ ಶಾಂಭವಿ ದೇವಸ್ಥಾನದವರೆಗೂ ಕನ್ನಡಾಂಬೆಯ ಬಾವುಟದ ಜತೆಗೆ ತಳಿರು ತೋರಣಗಳಿಂದ ಗ್ರಾಮದ ಪ್ರಮುಖ ಬೀದಿಯನ್ನು ಸಿಂಗರಿಸಿ ಸಾಹಿತ್ಯ ಸಮ್ಮೇಳನವನ್ನು ಹಬ್ಬದಂತೆ ಆಚರಿಸಲು ಹಲಗೇರಿ ಗ್ರಾಮಸ್ಥರು ಹಾಗೂ ಕನ್ನಡ ಮನಸ್ಸುಗಳು ಸಿದ್ದಗೊಂಡಿದ್ದಾರೆ ಎಂದು ಕೊಪ್ಪಳ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ರಾಮಚಂದ್ರಗೌಡ ಬಿ. ಗೊಂಡಬಾಳ ತಿಳಿಸಿದ್ದಾರೆ.

1500 ಜನರಿಗೆ ಆಸನದ ವ್ಯವಸ್ಥೆ:–

10ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಆಗಮಿಸುವ ಜಿಲ್ಲೆ ಹಾಗೂ ತಾಲೂಕಿನ ವಿವಿಧ ಗ್ರಾಮಗಳ ಜನರಿಗಾಗಿ ಭವ್ಯ ವೇದಿಕೆ ಮುಂಭಾಗದಲ್ಲಿ ಸುಮಾರು 1500 ಜನರಿಗೆ ಆಸನದ ವ್ಯವಸ್ಥೆ ಕಲ್ಪಿಸಲಾಗಿದೆ.

**ಎರಡು ಸಾವಿರ ಜನರಿಗೆ ಊಟದ ವ್ಯವಸ್ಥೆ:–**
ತಾಲೂಕು ಸಮ್ಮೇಳನ ಹಿನ್ನೆಲೆಯಲ್ಲಿ ಕಾರ್ಯಕ್ರಮಕ್ಕೆ ಆಗಮಿಸುವ ಜನರಿಗಾಗಿ ಭರ್ಜರಿಯಾಗಿ ಊಟದ ವ್ಯವಸ್ಥೆ ಕೈಗೊಂಡಿದ್ದು, ಸುಮಾರು ಎರಡು ಸಾವಿರ ಜನರಿಗೆ ಮಧ್ಯಾಹ್ನದ ಭೋಜನ ವ್ಯವಸ್ಥೆ ಕಲ್ಪಿಸಲಾಗಿದೆ. ವಿಶೇಷವಾಗಿ ಉತ್ತರ ಕರ್ನಾಟಕ ಶೈಲಿ ಊಟಕ್ಕೆ ಆದ್ಯತೆ ನೀಡಿದ್ದು, ಗೋದಿಹುಗ್ಗಿ, ಖಡಕ ರೊಟ್ಟಿ, ಚಪಾತಿ, ವಿವಿಧ ಪಲ್ಲೇ, ಚಟ್ನಿ ಸೇರಿದಂತೆ ಇತರೆ ಖಾದ್ಯಗಳ ತಯಾರಿ ನಡೆದಿದೆ.

## ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕ್ರಮವಹಿಸಿ ಸಿಇಓ ರಾಹುಲ್ ರತ್ನಂ ಪಾಂಡೇಯ



ಮಲ್ಲಮ್ಮ ನುಡಿ ವಾರ್ತೆ
ಕೊಪ್ಪಳ : ಬೇಸಿಗೆ ಆರಂಭವಾಗಿರುವುದರಿಂದ ಜನರಿಗೆ ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ಅಧಿಕಾರಿಗಳು ಮುಂಜಾಗ್ರತೆ ವಹಿಸಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಹೇಳಿದರು. ಅವರು ಶುಕ್ರವಾರ ಕನಕಗಿರಿ ತಾಲೂಕಿನ ಹಿರೇಖೇಡಾ, ಮುಸಲಾಪುರ, ಚಿಕ್ಕಖೇಡಾ, ರಾಂಪುರ ಸೇರಿದಂತೆ ವಿವಿಧ ಗ್ರಾಮಗಳಿಗೆ ಭೇಟಿ ನೀಡಿದ ನಂತರ ಸಂಬಂದಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು. ವಿವಿಧ ಗ್ರಾಮಗಳ ಬೋರವೆಲಗಳ ಪರಿಶೀಲನೆ ನಡೆಸಿದ ಅವರು ಬೇಸಿಗೆ ಹಿನ್ನೆಲೆ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯವರು ಕ್ರಮವಹಿಸಬೇಕು. ಆಯಾ ಗ್ರಾಮ ಪಂಚಾಯತಿ ಪಿಡಿಓಗಳು ತಮ್ಮ ವ್ಯಾಪ್ತಿಯ ಗ್ರಾಮಗಳಲ್ಲಿ ಸರಿಯಾಗಿ ಕುಡಿಯುವ ನೀರು ಸರಬರಾಜು ಆಗುವಂತೆ ನೋಡಿಕೊಳ್ಳಲು ಸೂಚನೆ ನೀಡಿದರು.

ಇದೇ ವೇಳೆ ಮುಸಲಾಪುರ ಗ್ರಾಮ ಪಂಚಾಯತಿ ವ್ಯಾಪ್ತಿಯ ರಾಂಪುರ ಕೆರೆಗೆ ಭೇಟಿ ನೀಡಿ ಕೆರೆಯು ಸಂಪೂರ್ಣ ಭತ್ತಿರುವುದನ್ನು ಕಂಡು, ಕೆರೆಗೆ ನೀರು ತುಂಬಿಸಲು ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳಿಗೆ ದೂರವಾಣಿ ಮೂಲಕ ಮಾತನಾಡಿ ಕೆರೆಗೆ ನೀರು ತುಂಬಿಸಲು ಹೇಳಿದರು.

ಈ ಸಂದರ್ಭದಲ್ಲಿ ಕನಕಗಿರಿ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಕೆ.ರಾಜಶೇಖರ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಅಧಿಕಾರಿ ದೇವಣ್ಣ ಕಟ್ಟಿ, ಪಂಚಾಯತ ಅಭಿವೃದ್ಧಿ ಅಧಿಕಾರಿಗಳಾದ ಯು. ಮಲ್ಲಿಕಾರ್ಜುನ್. ನಾಗೇಶ ಎಚ್. ಸೇರಿದಂತೆ ಇತರರು ಉಪಸ್ಥಿತರಿದ್ದರು.

## ರಕ್ತದಾನದಿಂದ ಜೀವ ಉಳಿಸಲು ಸಾಧ್ಯ : ಡಾ. ಬಸವರಾಜ



ಮಲ್ಲಮ್ಮ ನುಡಿ ವಾರ್ತೆ
ಕೊಪ್ಪಳ : ಭಾರತದಲ್ಲಿ ಬಹುಮಟ್ಟಿನ ಜನರು ರಕ್ತದಾನ ಮಾಡಲು ಹೆದರುತ್ತಾರೆ. ಈ ಕುರಿತು ಜಾಗೃತಿ ಮೂಡಿಸಲು ಸರ್ಕಾರ ಕಾಲದಿಂದ ಕಾಲಕ್ಕೆ ಅನೇಕ ಅಭಿಯಾನಗಳನ್ನು ನಡೆಸಿದೆ. ಆದರೆ ಇಲ್ಲಿವರೆಗೆ ಜೀವವುಳಿಸುವ ರಕ್ತದಾನಕ್ಕೆ ಜನಸಮೂಹ ಮುಕ್ತವಾಗಿ ಬಂದಿಲ್ಲ ರಕ್ತದಾನ ಒಬ್ಬರ ಜೀವ ಉಳಿಸುತ್ತದೆ. ಅದಕ್ಕೆ ಯಾವುದೇ ಪರ್ಯಾಯವಿಲ್ಲ. ಕೇವಲ ಒಂದು ದಾನವು ನಾಲ್ವರ ಜೀವವನ್ನು ಉಳಿಸುತ್ತದೆ ಎಂದು ಪ್ರಾಂಶುಪಾಲರಾದ ಡಾ.ಬಸವರಾಜ ಹನಸಿ ಹೇಳಿದರು.

ಪಟ್ಟಣದ ಗದಗ ರಸ್ತೆಯಲ್ಲಿರುವ ಶಿವಪ್ರೀಯಾ ಕಾನೂನು ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರಕ್ಕೆ ಚಾಲನೇ ನೀಡಿ ಅವರು ಮಾತನಾಡಿದರು.

ರಕ್ತದಾನದಿಂದ ಹೆಚ್ಚುವರಿ ಕಬ್ಬಿಣಾಂಶ ಹೊರಹೋಗುತ್ತದೆ. ಹೆಚ್ಚುವರಿ ಕಬ್ಬಿಣಾಂಶದಿಂದ ಅಧಿಕ ರಕ್ತದ ಒತ್ತಡ ಮುಂತಾದ ಅಡ್ಡ ಪರಿಣಾಮಗಳಿರುತ್ತವೆ. ಇದು ಲಿವರ್, ಹೃದಯ ಮತ್ತು ಪಿತ್ತಜನಕಾಂಗದಲ್ಲಿ ಶೇಖರಣೆಯಾಗಿ ಹೃದಯಬೇನೆ, ರಕ್ತದೊತ್ತಡ ಉಲ್ಬಣವಾಗುತ್ತದೆ.

ನಾವು ರಕ್ತದಾನ ಮಾಡಿದರೆ ಈ ವಿಷಯಗಳು ಇತ್ಯರ್ಥವಾಗುತ್ತದೆ.

ನೀವು ಆರೋಗ್ಯ ತಪಾಸಣೆ ಅವಕಾಶ ಪಡೆಯುತ್ತೀರಿ. ರಕ್ತದಾನ ಕೇಂದ್ರದಲ್ಲಿ ವೈದ್ಯರು ಹೃದಯಬಡಿತ, ರಕ್ತದೊತ್ತಡ, ಕೊಲೆಸ್ಟ್ರಾಲ್, ಹೇಮೋಗ್ಲೋಬಿನ್ ಮಟ್ಟವನ್ನು ಪರೀಕ್ಷೆ ಮಾಡುತ್ತಾರೆ. ರಕ್ತದಾನ ಮಾಡುವ ಮೂಲಕ ನಿಮ್ಮ ಆರೋಗ್ಯದ ಜಾಡು ಹಿಡಿಯಬಹುದು ಮತ್ತು ಆಹಾರ, ವ್ಯಾಯಾಮ, ಜೀವನಶೈಲಿ ಬದಲಾವಣೆ ಮತ್ತಿತರ ಅಂಶಗಳು ಹೇಗೆ ದೇಹದ ಮೇಲೆ ಪರಿಣಾಮ ಬೀರುತ್ತದೆಂದು ತಿಳಿಯಬಹುದು ಎಂದರು.

ರಕ್ತದಾನ ಮಾಡಿ ಕಾನೂನು ವಿದ್ಯಾರ್ಥಿ ಶಿವಕುಮಾರ ಮ್ಯಾಗೇರಿ ಮಾತನಾಡಿ ರಕ್ತದಾನ ಮಾಡುವುದರಿಂದ ರಕ್ತಕ್ಯಾನ್ಸರ್ ಅಪಾಯ ತಗ್ಗುತ್ತದೆಂದು ಸಂಶೋಧಕರು ಪತ್ತೆಹಚ್ಚಿದ್ದಾರೆ. ರಕ್ತದಾನ ಮಾಡಿದಾಗ ನಿಮ್ಮ ದೇಹ ಹೊಸ ರಕ್ತ ಪಡೆಯುವ ಅವಕಾಶ ಸಿಗುತ್ತದೆ ಮತ್ತು ರಕ್ತದ ಕ್ಯಾನ್ಸರ್ ಅವಕಾಶ ಕಡಿಮೆಯಾಗುತ್ತದೆ.

ರಕ್ತದಾನದಿಂದ ನಿಮಗೇನೂ ನಷ್ಟವಾಗುವುದಿಲ್ಲ. ಆದರೆ ನಿಮ್ಮ ಆರೋಗ್ಯ ಮತ್ತು ಸಮುದಾಯದ ಆರೋಗ್ಯದ ಅನುಕೂಲಗಳು ಬೆಲೆಕಟ್ಟಲಾಗದ್ದು ಎಂದರು.

ಈ ಸಂದರ್ಭದಲ್ಲಿ ಉಪನ್ಯಾಸಕರಾದ ರಜೀಯಾಬೇಗಂ, ರೆಡ್ ಕ್ರಾಸ್ ಸಂಸ್ಥೆಯ ದೇವಿಂದ್ರಪ್ಪ ಹಿಟ್ನಾಳ, ಕಾನೂನು ವಿದ್ಯಾರ್ಥಿಗಳಾದ ಶ್ರೀದೇವಿ, ದೇವಿ, ಹರ್ಷ, ನರೇಂದ್ರ, ಮಂಜುನಾಥ ಸೇರಿದಂತೆ ಅನೇಕರು ಹಾಜರಿದ್ದರು.

# ಮಧ್ಯಸ್ಥಿಕೆದಾರರಿಗೆ ಪುನಶ್ಚೇತನ ತರಬೇತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.22-ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಮಧ್ಯಸ್ಥಿಕೆ ಕೇಂದ್ರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ವಕೀಲರ ಸಂಘದ ಸಹಯೋಗದಲ್ಲಿ ಬಾಗಲಕೋಟೆಮತ್ತುವಿಜಯಪುರ ಜಿಲ್ಲೆಯ ಮಧ್ಯಸ್ಥಿಕೆದಾರರಿಗೆ 2 ದಿನಗಳ ಪುನಶ್ಚೇತನ ತರಬೇತಿ ಕಾರ್ಯಕ್ರಮ ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಜರುಗಿತು.

ಎರಡು ದಿನಗಳ ಕಾಲ ಹಮ್ಮಿಕೊಂಡ ಪುನಶ್ಚೇತನ ತರಬೇತಿಗೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ವಿ.ವಿಜಯ ಚಾಲನೆ ನೀಡಿ ಮಾತನಾಡಿ,ನ್ಯಾಯಾಲಯದಲ್ಲಿರುವ ವ್ಯಾಜ್ಯ ಪ್ರಕರಣಗಳನ್ನು ಬೇಗನೆ ಇತ್ಯರ್ಥ ಪಡಿಸುವ ನಿಟ್ಟಿನಲ್ಲಿ ಮಧ್ಯಸ್ಥಿಕೆದಾರರಿಗೆ ಪುನಶ್ಚೇತನ ತರಬೇತಿ ಹಮ್ಮಿಕೊಳ್ಳಲಾಗಿದೆ. ಈ ತಗರಬೇತಿಯ ಸದುಪಯೋಗವನ್ನು ಮಧ್ಯಸ್ಥಿಕೆದಾರ ವಕೀಲರು ಪಡೆದುಕೊಂಡು ಜನರಿಗೆ ನ್ಯಾಯ ಒದಗಿಸುವ ಕೆಲಸ ಮಾಡಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಕೀಲರ ಸಂಘದ ಅಧ್ಯಕ್ಷ ರಮೇಶ ಬದ್ನೂರ ಮಾತನಾಡಿ,ನ್ಯಾಯಾಲಯದಲ್ಲಿರುವ ಪ್ರಕರಣಗಳನ್ನು ಬೇಗ ಇತ್ಯರ್ಥಪಡಿಸಲು ಮಧ್ಯಸ್ಥಿಕೆದಾರರ ಪಾತ್ರ ಮುಖ್ಯವಾಗಿದ್ದು, ಈ ಮಧ್ಯಸ್ಥಿಕೆದಾರರಿಗೆ ತರಬೇತಿ ನೀಡುತ್ತಿರುವುದು ಉತ್ತಮ ಕಾರ್ಯವಾಗಿದೆ. ಇದರ ಸದುಪಯೋಗವನ್ನು ಮಧ್ಯಸ್ಥಿಕೆದಾರ ವಕೀಲರು ಪಡೆದುಕೊಳ್ಳಬೇಕು. ವಾಜ್ಯಗಳನ್ನು ಇತ್ಯರ್ಥಪಡಿಸಿಕೊಳ್ಳುವುದಕ್ಕೆ ಮಧ್ಯಸ್ಥಿಕೆಯು ಕಡಿಮೆ ವೆಚ್ಚದ ಹಾಗೂ ಪರಿಣಾಮಕಾರಿಯಾದ ವ್ಯವಸ್ಥೆಯಾಗಿದೆ ಎಂದರು.

# ವಿದ್ಯೆಯ ಜೊತೆ ಸಂಸ್ಕಾರ ನೀಡಿ-ಸಾವಕಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.22-ಮಕ್ಕಳಿಗೆ ವಿದ್ಯೆಯ ಜೊತೆಗೆ ಸಂಸ್ಕಾರ ನೀಡಬೇಕು. ಸಂಪ್ರದಾಯ, ಆಚಾರ ವಿಚಾರ ತಿಳಿಸಿಕೊಡಬೇಕು. ಮಕ್ಕಳಿಗೆ ಚಿಕ್ಕವಯಸ್ಸಿನಲ್ಲಿಯೇ ತಾಯಂದಿರು ತಿಳಿಸಿಕೊಟ್ಟರೆ ಆ ಮಗು ಸುಸಂಸ್ಕೃತ ಹಾಗೂ ಸತ್ಪ್ರಜೆಯಾಗಿ ಹೊರಹೊಮ್ಮಲು ಸಾಧ್ಯ ಎಂದು ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಡಿ.ಎಂ. ಸಾವಕಾರ ಹೇಳಿದರು. ಜಿಲ್ಲೆಯ ಬೀಳಗಿ ತಾಲೂಕಿನ ಜಾನಮಟ್ಟಿ ಗ್ರಾಮದಲ್ಲಿ ತಾಪಂ, ಗ್ರಾಪಂ ಸಹಯೋಗದಲ್ಲಿ ನರ್ಮದಾ ಸಂಜೀವಿನಿ ಮಹಿಳಾ ಒಕ್ಕೂಟದಿಂದ ಹಮ್ಮಿಕೊಂಡಿದ್ದ ವಿಶ್ವಮಹಿಳಾ ದಿನಾಚರಣೆ ಹಾಗೂ ಮಹಿಳಾ ಗ್ರಾಮ ಸಭೆಯನ್ನು ಉದ್ಘಾಟಿಸಿ ಮಾತನಾಡಿ, ಇಂದು ಮಹಿಳೆಯರ ಸಾಧನೆ ಎಲ್ಲ ಕ್ಷೇತ್ರಗಳಲ್ಲಿಯೂ ಇದೆ. ಪ್ರಮುಖವಾಗಿ ತಾಂತ್ರಿಕ, ಸಂಶೋಧನಾ ಹಾಗೂ ಉತ್ಪಾದನಾ ಕ್ಷೇತ್ರಗಳಲ್ಲಿ ಮಹಿಳೆಯರು ದೇಶಕ್ಕೆ ತಮ್ಮದೇಯಾದ ಕೊಡುಗೆ ನೀಡಿದ್ದಾರೆಂದು ಹೇಳಿದರು.

ವ್ಯಕ್ತಿಯ ಸಾಧನೆಯ ಬದುಕಿನಲ್ಲಿ ಮಹಿಳೆಯ ಪಾತ್ರ ಬಹು ದೊಡ್ಡದಿರುತ್ತದೆ. ಮನೆಯ ಜವಾಬ್ದಾರಿ ಯನ್ನು ಸಮರ್ಥವಾಗಿ ನಿಭಾಯಿಸುವ ಮೂಲಕ ಮನೆಗೆ ಬೆಳಕು ಬೀರುವವರು ಮಹಿಳೆಯರು. ಈಗಿನ ಆಧುನಿಕ ದಿನಗಳಲ್ಲಿ ಶಿಕ್ಷಕಿ, ಇಂಜನೀಯರ, ವಿಜ್ಞಾನಿ, ಪೈಲಟ್, ಚಾಲಕಿ, ಯೋಧೆ, ಕ್ರೀಡೆ, ಗಗನಯಾತ್ರೆ ಸೇರಿದಂತೆ ಎಲ್ಲ ರಂಗಗಳಲ್ಲಿಯೂ ಮಹಿಳೆಯರು ಸಾಧನೆ ತೋರುತ್ತಿದ್ದಾರೆ ಎಂದು ಸಾವಕಾರ ಹೇಳಿದರು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮೇಲ್ವಿಚಾರಕಿ ಮಂಜುಳಾ ಇದ್ದಲಗಿ ಮಾತನಾಡಿ, ಮಹಿಳೆಯರು ಸ್ವ ಉದ್ಯೋಗ ಮಾಡಿ ಸ್ವಾವಲಂಬಿ ಜೀವನ ನಡೆಸಬೇಕು. ತಾಯಂದಿರು ಮಕ್ಕಳಿಗೆ ಬಾಲ್ಯ ವಿವಾಹ ಮಾಡದೇ, ಉನ್ನತ ಶಿಕ್ಷಣ ಕೊಡಿಸುವ ಮೂಲಕ ಉತ್ತಮ ಬದುಕು ಕಟ್ಟಿಕೊಳ್ಳಲು ಅವಕಾಶ ನೀಡಬೇಕೆಂದು ಹೇಳಿದರು. ಎನ್‌ಆರ್‌ಎಲ್‌ಎಂನ ವಲಯ ಮೇಲ್ವಿಚಾರಕ ಪ್ರಕಾಶ ಚಿಕ್ಕಮಠ ಮಾತನಾಡಿ, ಸಂಘಗಳು ಬೆಳವಣಿಗೆಯಾದರೆ ಒಕ್ಕೂಟ ಬೆಳವಣಿಗೆ ಆಗುತ್ತದೆ. ಸಾಲ ಪಡೆದು ದುರುಪಯೋಗ ಮಾಡಿಕೊಳ್ಳದೇ, ಸದುಪಯೋಗ ಮಾಡಿಕೊಂಡು ಅಭಿವೃದ್ಧಿ ಹೊಂದಬೇಕು ಎಂದರು.

ಆರೋಗ್ಯ ಇಲಾಖೆಯ ಸುಜಾತಾ ಅಂಗಡಿ ಮಾತನಾಡಿ, ಪೌಷ್ಟಿಕ ಆಹಾರ ಸೇವನೆ ಮಾಡುವ ಮೂಲಕ ಆರೋಗ್ಯವಂತ ಮಕ್ಕಳನ್ನು ಹೆತ್ತು ದೇಶಕ್ಕೆ ಕೊಡುಗೆ ನೀಡಬೇಕು ಎಂದು ಹೇಳಿದರು.

ಗ್ರಾಪಂ ಮಾಜಿ ಅಧ್ಯಕ್ಷೆ ರೇಣುಕಾ ಬಂಡಿ ಅಧ್ಯಕ್ಷತೆ ವಹಿಸಿದ್ದರು. ಪಿಡಿಒ ಮಹಾನಂದಾ ಬೂಸಗೊಂಡ ಪ್ರಾಸ್ತಾವಿಕ ನುಡಿ ಹೇಳಿದರು. ಅತಿಥಿಗಳಾಗಿ ಗ್ರಾಪಂ ಸದಸ್ಯರಾದ ಮಂಜುಳಾ ಗಾಳಿ, ನಾಗವ್ವ ಮಾದರ, ಗ್ರಾಪಂ ಕಾರ್ಯದರ್ಶಿ ಈರಣ್ಣ ಬಿಸನಾಳ, ದಾನೇಶ ಹಿರೇಮಠ, ಎಂ.ಡಿ.ಪಾಟೀಲ, ಹನಮವ್ವ ತಳವಾರ, ರೇಖಾ ಹೊಸಮನಿ, ಒಕ್ಕೂಟದ ಅಧ್ಯಕ್ಷೆ ಲಕ್ಷ್ಮೀಬಾಯಿ ಮಾದರ, ಕಾರ್ಯದರ್ಶಿ ಹನಮವ್ವ ಹಾದಿಮನಿ, ಖಜಾಂಚಿ ಲಕ್ಷ್ಮೀಬಾಯಿ ತಳವಾರ, ಭೀಮಾಂಬಿಕಾ ಸಿಡ್ಲನ್ನವರ, ಚಂದ್ರವ್ವ ಮಾದರ, ಪವಿತ್ರಾ ಸನ್ನಿ, ಅಕ್ಷತಾ ಹಳ್ಳೂರ, ಪುಷ್ಪಾ ಆಲಗುಂಡಿ, ಸಾವಿತ್ರಿ ಸನ್ನಿ, ತುಳಸವ್ವ ಪತ್ತಾರ ಮತ್ತಿತರಿದ್ದರು.

ಲಕ್ಷ್ಮೀ ಹಳ್ಳೂರ ಸ್ವಾಗತಿಸಿದರು. ರುಕ್ಮೀಣಿ ಬರಗಾಲ ನಿರೂಪಿಸಿದರು. ಲಕ್ಷ್ಮಣ ಭಂಟನೂರ ವಂದಿಸಿದರು.

# ಮಕ್ಕಳು ಉತ್ತಮ ಗುಣ, ಹವ್ಯಾಸ ಬೆಳೆಸಿಕೊಳ್ಳಬೇಕು-ಯಡಹಳ್ಳಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.22-ಪ್ರಾಥಮಿಕ ಶಾಲಾ ಹಂತದಲ್ಲಿಯೇ ಮಕ್ಕಳು ಒಳ್ಳೆಯ ಗುಣ ಹಾಗೂ ಹವ್ಯಾಸಗಳನ್ನು ರೂಢಿಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ನಿವೃತ್ತ ಶಿಕ್ಷಕ ಶಂಕರಗೌಡ ಯಡಹಳ್ಳಿ ಹೇಳಿದ್ದಾರೆ.

ತಾಲೂಕಿನ ಬೆನಕಟ್ಟಿಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರ ನಡೆದ 7 ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಸರಸ್ವತಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ತಂದೆ-ತಾಯಿ, ಕಲಿತ ಶಾಲೆ, ಕಲಿಸಿದ ಗುರುಗಳನ್ನು ಸದಾ ಸ್ಮರಿಸಬೇಕು. ಹಿರಿಯರನ್ನು ಗೌರವಿಸುವ ಗುಣ ಬೆಳೆಸಿಕೊಳ್ಳಬೇಕು ಎಂದರು.

ಮುಖ್ಯ ಅತಿಥಿಯಾಗಿದ್ದ ಶಿಕ್ಷಕ ಜಿ.ಜಿ.ಚಿತ್ತರಗಿ, ಬೆಳೆಯಸಿರಿ ಮೊಳಕೆಯಲ್ಲಿ ಎಂಬಂತೆ ಪಾಲಕರು ಮಕ್ಕಳು ಚಿಕ್ಕವರಿರುವಾಗಲೇ ಸಂಸ್ಕಾರ, ಮೌಲ್ಯಯುತ ಗುಣಗಳನ್ನು ಕಲಿಸಬೇಕು. ಜೊತೆಗೆ ಆರೋಗ್ಯ ಸಂಪತ್ತಿನ ಮಹತ್ವವನ್ನು ತಿಳಿಸಿ ಸದೃಢರನ್ನಾಗಿ ಮಾಡಬೇಕು ಎಂದು ಹೇಳಿದರು.

ಅತಿಥಿ ಸಿ.ಎನ್.ಬಾಳಕ್ಕನವರ, ಶತಮಾನ ಕಂಡಿರುವ ಶಾಲೆಗೆ ಸುಣ್ಣ-ಬಣ್ಣ ಬಳಿಸಲು 25 ಸಾವಿರ ರೂ.ಗಳ ದೇಣಿಗೆ ನೀಡುವ ವಾಗ್ದಾನ ಮಾಡಿದರು. ಬಯೋ ಕಂಪನಿಯ ಮಲ್ಲಿಕಾರ್ಜುನ, ಶಿಕ್ಷಕರಾದ ಅಮಾತಿಗೌಡರ, ಪಿ.ಡಿ.ಸರಿಕರ, ಶಾಲೆಯ ಮುಖ್ಯಗುರು ಜಗನ್ನಾಥ ಪತ್ತಾರ ಮಾತನಾಡಿದರು.

ಶಾಲೆಯ ಪ್ರತಿಭಾವಂತ ಬಡ ವಿದ್ಯಾರ್ಥಿಗಳಾದ ಮಣಿಕಂಠ ಹಾಗೂ ವಿಠ್ಠಲ ಅವರಿಗೆ ನಿವೃತ್ತ ಶಿಕ್ಷಕ ಶಂಕರಗೌಡ ಯಡಹಳ್ಳಿ 5 ಸಾವಿರ ರೂ.ಗಳ ಧನಸಹಾಯ ನೀಡಿದರು.

ಎಸ್.ಡಿ.ಎಂ.ಸಿ ಅಧ್ಯಕ್ಷ ಮಹಾಂತಗೌಡ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಸದಸ್ಯರಾದ ದಾವಲಸಾಬ್ ನದಾಫ, ಬಸವರಾಜ ಮನಗೂಳಿ, ಯಶೋಧಾ ಸಿದ್ನಾಳ, ಜೆಪಿ ಶಾಲೆಯ ಮುಖ್ಯಗುರು ಸುರೇಶ ಚಿತ್ತರಗಿ ಅತಿಥಿಗಳಾಗಿದ್ದರು.

ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಶಿಕ್ಷಕಿ ಆಶಾರಾಣಿ ಮೇಟಿ ಸ್ವಾಗತಿಸಿದರು. ಪಾಂಡುರಂಗ ಸನ್ನಪ್ಪನವರ ನಿರೂಪಿಸಿದರು. ರವಿ ಕೆಂಚನ್ನವರ ವಂದಿಸಿದರು.

# ಮಹಾಡ್ ಕೆರೆಯ ಜಲ ರಾಜ್ಯಾದ್ಯಂತ ಹಂಚಿಕೆ-ನೀಲನಾಯಕ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.22-ಮಹಾರಾಷ್ಟ್ರದ ಮಹಾಡ್ ನಗರದ ಚೌಡಾರ ಕೆರೆಯ ಪ್ರವೇಶ ಐತಿಹಾಸಿಕ ಪ್ರೇರಣೆ-ಯಾಗಿದ್ದು, ಅದರ ಸವಿ ನೆನಪಿಗಾಗಿ ಅಲ್ಲಿನ ಪವಿತ್ರ ಜಲವನ್ನು ತಂದು ಕರ್ನಾಟಕ ರಾಜ್ಯದ್ಯಂತ ಹಂಚಲಾಗುವದು ಎಂದು ರಾಜ್ಯ ದಲಿತ ಸಂಘರ್ಷ ಸಮಿತಿ (ಭೀಮವಾದ) ರಾಜ್ಯ ಸಂಚಾಲಕ ಪರಶುರಾಮ ನೀಲನಾಯಕ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ನೀಲನಾಯಕ, ಪವಿತ್ರ ಜಲವನ್ನು ಬಾಗಲಕೋಟೆ ಜಿಲ್ಲಾ ಕೇಂದ್ರದಲ್ಲಿ ಬರುವ ಎಪ್ರಿಲ್ 14 ರಂದು ನಡೆಯಲಿರುವ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಹಂಚಲಾಗುತ್ತಿದೆ. ಮುಂದಿನ ದಿನಮಾನಗಳಲ್ಲಿ ರಾಜ್ಯಾದ್ಯಂತ ಪ್ರವಾಸ ಮಾಡಿ ಎಲ್ಲ ದಲಿತರ ಮನೆ ಮನೆಗಳಿಗೆ ತಲುಪಿಸಲಾಗುತ್ತಿದೆ ಎಂದಿದ್ದಾರೆ.

ಯಾವ ಅಕ್ಷರವನ್ನೂ ಕಲಿಯದ ಗ್ರಾಮೀಣ ಮಹಿಳೆಯರು ಕೂಡಾ ಆತ್ಮವಿಶ್ವಾಸದಿಂದ ಸಾಮಾಜಿಕ ಅನಿಷ್ಟದ ವಿರುದ್ಧ ಧ್ವನಿ ಎತ್ತುವಂತೆ ಮಾಡಿದ್ದು ಮಹಾಡ್ ಕೆರೆಯ ಸನ್ನಿವೇಶ. ಅದರ ನೇತೃತ್ವ ಬಾಬಾಸಾಹೇಬ್ ಅಂಬೇಡ್ಕರ್ ಅವರದಾಗಿತ್ತೆಂಬುದೇ ಹೆಮ್ಮೆಯ ವಿಷಯವಾಗಿದೆ ಎಂದಿದ್ದಾರೆ.

# ಬ್ರಿಡ್ಜ್ ಗೆ ಹಾರಿ ಯುವಕ ಆತ್ಮಹತ್ಯೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.22-ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಇರುವ ಕುರಿಕೋಟಾ ಬ್ರಿಡ್ಜ್ ಮೇಲಿಂದ ಜಿಗಿದು ಯುವಕನೋರ್ವ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಶುಕ್ರವಾರ ಮಧ್ಯಾಹ್ನ ನಡೆದಿದೆ.

ಕಲಬುರಗಿ ನಗರದ ಮಿಲ್ಲತ್ ನಗರ ನಿವಾಸಿ ಎಂಡಿ ಸಮೀರ್ (23) ನದಿಗೆ ಹಾರಿದ ಯುವಕ ಎಂದು ಗುರುತಿಸಲಾಗಿದೆ. ಶುಕ್ರವಾರ ಮಧ್ಯಾಹ್ನ ಸಮೀರ್ ಕಲಬುರಗಿಯಿಂದ ಕುರಿಕೋಟಾ ಹಳೆ ಬ್ರಿಡ್ಜ್ ಮೇಲೆ ಬೈಕ್ ನಿಲ್ಲಿಸಿ ನೀರಿನಲ್ಲಿ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎನ್ನಲಾಗಿದೆ.

ಯುವಕ ನಾಪತ್ತೆಯಾಗಿದ್ದು, ಆತನ ಶೋಧಕ್ಕಾಗಿ ಎನ್.ಡಿಆರ್.ಡಿ ತಂಡ ಮಹಾಗಾಂವ ಪೊಲೀಸ್ ಸಿಬ್ಬಂದಿ, ಅಗ್ನಿಶಾಮಕ ದಳದ ಸಿಬ್ಬಂದಿಗಳು ಕಾರ್ಯಾಚರಣೆ ನಡೆಸಿದ್ದಾರೆ.

ಶುಕ್ರವಾರ ರಾತ್ರಿಯಾಗಿದ್ದರೂ ಮೃತದೇಹ ಪತ್ತೆಯಾಗಿಲ್ಲ. ಮತ್ತೆ ಶನಿವಾರ ಶೋಧ ಕಾರ್ಯಾಚರಣೆ ಮುಂದುವರೆಯುತ್ತದೆ ಎಂದು ಮಹಾಗಾಂವ್ ಪೊಲೀಸ್ ಠಾಣೆಯ ಪಿಎಸ್‌ಐ ತಿಳಿಸಿದ್ದಾರೆ.

# ಆಶಾಪೂರ ಆಂಜನೇಯ ದೇವರ 21ನೇ ಜಾತ್ರಾ ಮಹೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ,ಮಾ.22-ಗುರಮಠಕಲ್ ತಾಲೂಕಿನ ಯಲ್ಹೇರಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಸುಕ್ಷೇತ್ರ ಆಶಾಪೂರ ನಗರದಲ್ಲಿ 21ನೇ ಜಾತ್ರಾ ಮಹೋತ್ಸವ ಬುಧವಾರ ಸುತ್ತ ಮುತ್ತಲಿನ ಗ್ರಾಮಗಳ ಸದ್ಭಕ್ತರ ಸಮ್ಮುಖದಲ್ಲಿ ಬಹು ವಿಜೃಂಭಣೆಯಿಂದ ಜರುಗಿತು.

ಮುಂಜಾನೆ ಆಶಪೂರ ನಗರದ ಭಕ್ತರು ಭೀಮಾನದಿಗೆ ಹೊಗಿ ಗಂಗಾ ಜಲವ ತಂದು ನಗರದಲ್ಲಿ ಇರುವ ಆಂಜನೇಯ ದೇವರ ಗದ್ದಿಗೆಗೆ ಅಭಿಷೇಕ ಪೂಜೆಗೈದು ವಾದ್ಯಮೇಳಗಳಿಂದ ಭಕ್ತರು ಚತ್ರಿ ಚಾಮರಗಳನ್ನು ಹಿಡಿದು ನೂತನ ಆಂಜನೇಯ ದೇವರ ಬೆಳ್ಳಿಯ ಉತ್ಸವ ಮೂರ್ತಿಯನ್ನು ಪಲ್ಲಕ್ಕಿಯೊಳಗಿಟ್ಟುಕೊಂಡು ಅರಣ್ಯ ಭಾಗದಲ್ಲಿರುವ ದೇವರಗುಡಿ ಸೇರಿ ದೇವರ ಅಭಿಷೇಕ ಮಹಾಪ್ರಸಾದ, ಮಂಗಳಾರತಿ ತಿರ್ಥಪ್ರಸಾದ ಸ್ವಿಕರಿಸಿದರು. ರಾತ್ರಿ 8-00 ಗಂಟೆಯ ಸಮಯಕ್ಕೆ ಗ್ರಾಮದ ಸುತ್ತಮುತ್ತಲಿನ ಸದ್ಭಕ್ತರು ಬಹು ಸಂಖ್ಯೆಯಲ್ಲಿ ಸೇರಿ ರಥೋತ್ಸವ ಕಾರ್ಯಕ್ರಮ ಬಹು ವಿಜೃಂಭಣೆಯಿಂದ ಜರುಗಿತು. ಅರ್ಚಕರು, ಗಿರಾಚಾರ್ಯರು ಪುರಾತನ ದೇವಸ್ಥಾನವು ಬೆಳೆದು ಬಂದಿರುವ ಬಗ್ಗೆ ಸಂಕ್ಷಿಪ್ತವಾಗಿ ಕಿರುಮಾಹಿತಿ ನೀಡುತ್ತ ಇದು 21ನೇಯ ಜಾತ್ರಾ ಮಹೋತ್ಸವವಾಗಿದ್ದು, ಅರಣ್ಯದ ನಾಲ್ಕು ಗೊಡೆಗಳ ಮಧ್ಯೆ ಇರುವದರಿಂದ ಸಮಿಪದಲ್ಲಿರುವ ಗಣಪೂರ ಗ್ರಾಮದ ಭಕ್ತ ಹಣ್ಮಂತ್ತಪ್ಪ ಎಂಬುವ ಭಕ್ತನು ಬಂದು ದೇವರ ಗರ್ಭಗುಡಿಯ ಮೇಲೆ ಚೆತ್ತು ಹಾಕಿಸುವದರ ಜೊತೆಗೆ ದೇವರ ರಥವನ್ನು ಕೂಡ ನಾನು ಮಾಡಿಸುತ್ತೆನೆ ಎಂದು ಹೇಳಿ ದೇವರ ಕೃಪಾಶಿರ್ವಾದದಿಂದ ಅದೇ ವರ್ಷ ಮಾಡಿಸಿದ. ಅಂದಿನಿಂದ ಇಂದಿನವರೆಗು ಜಾತೆ-ಯು ವರ್ಷದಿಂದ ವರ್ಷಕ್ಕೆ ಅತಿ ವಿಜೃಂಭಣೆಯಿಂದ ಆಂಜನೇಯ ದೇವರ ಕೃಪಾಶಿರ್ವಾದದಿಂದ ಹೆಚ್ಚು ಹೆಚ್ಚು ಬೆಳೆಯುತ್ತ ಬಂದಿರುವದು ಇದಕ್ಕೆಲ್ಲಾ ಭಕ್ತರ ಭಕ್ತಿಯೆ ಕಾರಣವೆಂದರು. ಬೇಡಿದ ಇಷ್ಟಾರ್ಥಗಳನ್ನು ಕೊಡುವ ಕಾಮಧೇನುವು ತಾನಾಗಿ ಸ್ವಯಂಬು ಉಧ್ಭವಿಸಿದ ಆಂಜನೇಯ ದೇವರ ದರ್ಶನ ಪಡೆದು ಪುನಿತರಾಗಿರಿ ಎನ್ನುವದರ ಜೋತೆಗೆ ದೇವಸ್ಥಾನಕ್ಕೆ ಬರಲು ಸರಿಯಾದ ರಸ್ತೆಯ ಮಾರ್ಗ ಇಲ್ಲ ಎಂದು ಅವರು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು. ಅರ್ಚಕರಾದ ಕಿಷ್ಟಾಚಾರ್ಯ, ಮಧ್ವಚಾರ್ಯ, ಗಿರಚಾರ್ಯ, ಗುರಚಾರ್ಯ, ಭೀಮಚಾರ್ಯ ಇವರು ಐದು ಸಹೋದರರು ಸೇರಿ ಪ್ರತಿವರ್ಷವು ಜಾತ್ರಾಮಹೋತ್ಸವದಲ್ಲಿಯು ಹಾಗೂ ಪ್ರತಿದಿನ ಪೂಜೆಯನ್ನು ಮಾಡುತ್ತೆವೆ ಎಂದು ಆರ್ಶಿವಚನ ನೀಡಿದರು. ಜಾತ್ರೆಯಲ್ಲಿ ಮಿಠಾಯಿ ಅಂಗಡಿಗಳು, ಕಬ್ಬಿನ ಹಾಲಿನ ಬಂಡಿಗಳು, ತಂಪಾದ ಐಸ್ ಕ್ರೀ ಬಂಡಿಗಳು ಇದ್ದು ಭಕ್ತರು ಮಹಾಪ್ರಸಾದ ಸ್ವಿಕರಿಸಿ ದೇವರ ಕೃಪೆಗೆ ಪಾತ್ರರಾದರು.

# ದೇಶದ ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸುತ್ತಿರುವುದು ಹೆಮ್ಮೆಯ ವಿಷಯ: ಡಾ.ನ್ಯಾಯಮೂರ್ತಿ ಶ್ರೀ ಶಿವರಾಜ ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಮಾ.22-ನಮ್ಮ ದೇಶದಲ್ಲಿ ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸುತ್ತಿರುವುದು ಹೆಮ್ಮೆಯ ವಿಷಯವಾಗಿದೆ ಹಾಗೂ ಮಹಿಳೆಯರಿಗೆ ಗೌರವದಿಂದ ಕಾಣಬೇಕು ಎಂದು ಗೌರವಾನ್ವಿತ ನಿವೃತ್ತ ಡಾ. ನ್ಯಾಯಮೂರ್ತಿ ಶ್ರೀ ಶಿವರಾಜ ಪಾಟೀಲ ಹೇಳಿದರು.

ಶುಕ್ರವಾರದಂದು ನಗರದ ಜಿಲ್ಲಾ ನ್ಯಾಯಾಲದ ಸಭಾಂಗಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ನ್ಯಾಯಾಂಗ ನೌಕರರ ಸಂಘ ಜಿಲ್ಲಾ ಶಾಖೆ ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಪ್ರಾಧನಿಯಾಗಿದ್ದಾರೆ, ರಾಷ್ಟ್ರಪತಿಯಾಗಿದ್ದಾರೆ ಹಾಗೂ ಹಲವಾರು ಹುದ್ದೆಗಳನ್ನು ಅಲಂಕರಿಸುತ್ತಿದ್ದಾರೆ ಮಹಿಳೆಯರು ಪುರುಷರಂತೆ ಸಮಾನತೆ ಬರುತ್ತಿದ್ದಾರೆ ಇದು ಒಂದು ಒಳ್ಳೆಯ ಬೆಳವಣಿಗೆಯಾಗಿದೆ ಎಂದರು.

ನಾನು ಕಳೆದ ಕೆಲವು ದಶಕದಿಂದ ಇದೇ ಜಿಲ್ಲಾ ಕೋರ್ಟನಲ್ಲಿ ಕೆಲಸ ನಿರ್ವಹಿಸುತ್ತಿದ್ದೆ ನಾನು ಹೆಮ್ಮೆಯಿಂದ ಕೆಲಸವನ್ನು ಮಾಡಿದ್ದೇನೆ ನನಗೆ ಸಂತೃಪ್ತಿ ತಂದಿದೆ ಎಂದರು.

ಯಾವುದೇ ವೃತ್ತಿಯಲ್ಲಿ ಸೇವಾ ಮನೋಭಾವ ಕರ್ತವ್ಯ ಪ್ರಜ್ಞೆ ಮುಖ್ಯವಾಗುತ್ತದೆ. ನಮಗೆಲ್ಲ ಕೆಲಸ ಮಾಡಲು ಒಂದು ಕುರ್ಚಿ ಇರುತ್ತದೆ. ಕುರ್ಚಿ ಮೇಲೆ ಕೋರುವ ಮುನ್ನ ವಿನಯವಿರಬೇಕು, ಈ ಅವಕಾಶ ಸಿಕ್ಕಿದ್ದಕ್ಕಾಗಿ ಭಗವಂತನಿಗೆ ಕೃತಜ್ಞತೆ ಸಲ್ಲಿಸಬೇಕು. ಈ ಕುರ್ಚಿ ಇರೋದು ಆಡಳಿತ ನಡೆಸಲು ಅಲ್ಲ. ಸೇವೆ ಸಲ್ಲಿಸಲು ಎಂದುಕೊಳ್ಳಬೇಕು. ಕುರ್ಚಿಯಲ್ಲಿ ಕುಳಿತ ಬಳಿಕ ನಾವು ಕುಳಿತಿರಿರುವುದು ಕರ್ತವ್ಯ ಪರಿಪಾಲನೆಗೆ ಹೊರತು ದರ್ಪ ತೋರಿಸುವುದಕ್ಕಲ್ಲ ನೆನಪಿಟ್ಟುಕೊಳ್ಳಬೇಕು. ಇದು ಎಲ್ಲರಿಗೂ ಅನ್ವಯವಾಗುತ್ತದೆ. ಈ ಮೂರು

ಹಂತಗಳಲ್ಲಿ ಅನುಸರಿಸಿದರೆ ದೇಶದ ಶೇ. 50 ರಷ್ಟು ಪರಿಹಾರವಾಗುತ್ತೇವೆ. ಎಂದು ಪ್ರತಿಪಾದಿಸಿದರು.

ಕರ್ನಾಟಕ ಉಚ್ಚನ್ಯಾಯಲಯ ಗೌರವಾನ್ವಿತ ಡಾ. ನ್ಯಾಯಮೂರ್ತಿ ಚಿಲ್ಲಕೂರ ಸುಮಲತಾ ಮಾತನಾಡಿ, ಭಾರತ ಸೇರಿದಂತೆ ವಿಶ್ವದಲ್ಲಿ ಪುರುಷರಿಗಿಂತಲೂ ಮಹಿಳೆಯರು ಹೆಚ್ಚು ಶ್ರಮಪಡುತ್ತಾರೆ. ಯಾವುದೇ ವೃತ್ತಿಯಲ್ಲಿ ಮಹಿಳೆಯರಿಗೆ ಅಡ್ಡಿಗಳು ಜಾಸ್ತಿ ಮದುವೆಯಾದಾಗ ವಿರಾಮ, ಗರ್ಭಿಣಿಯಾದಾಗ, ಹೆರಿಗೆಯಾದಾಗ ವೃತ್ತಿಗೆ ವಿರಾಮ ಪಡೆಯಬೇಕಾಗುತ್ತದೆ ಎಂದರು.



ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶ ಶ್ರೀಮತಿ ಜ್ಯೋತಿಶ್ರೀ ಪಾಟೀಲ ಮಹಿಳೆಯರು ಮೌಢ್ಯತೆ, ದಬ್ಬಾಳಿಕೆ ಖಂಡಿಸಬೇಕು. ವೈಚಾರಿಕ, ವೈಜ್ಞಾನಿಕ ದೃಷ್ಟಿಕೋನ ಅಳವಡಿಸಿಕೊಳ್ಳಬೇಕು. ಸಮಯ ಪ್ರಜ್ಞೆ ಮತ್ತು ತಾಳ್ಮೆ ರೂಢಿಸಿಕೊಂಡರೆ, ಜೀವನದಲ್ಲಿ ಸಂತೃಪ್ತಿ ನೆಮ್ಮದಿ ಕಾಣಲು ಸಾಧ್ಯ ಎಂದರು.

ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಆಡಳಿತಾತ್ಮಕ ಗೌರವಾನ್ವಿತ ನ್ಯಾಯಮೂರ್ತಿಗಳಾದ ಕೆ. ನಟರಾಜ್‌ನ್ ಮಾತನಾಡಿ, ಮಹಿಳೆ ಅಂದರೆ ಶಕ್ತಿ ಅದಕ್ಕೆ ಇಷ್ಟೊಂದು ಹೆಸರು ವಿದ್ಯುಚ್ಛಕ್ತಿ, ಆ ಶಕ್ತಿಯನ್ನು ಬೆಳಕ್ಕಾಗಿ ಬಳಸಬಹುದು ಅಂಥರೆ , ದುರ್ಬಳಕೆಗೆ ಯತ್ನಿಸಿದರೆ ಶಾಕ್ ಹೊಡೆಯುತ್ತದೆ. ಎಂದರು.

ಕಲಬುರಗಿ ಜಿಲ್ಲಾ ಕಾನೂನು ಸೇವ ಪ್ರಾಧಿಕಾರ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶ ಜಿ.ಎಲ್ಲ್ ಲಕ್ಷ್ಮೀನಾರಾಯ ಸ್ವಾಗತಿಸಿದರು.

ಗುಲಬರ್ಗಾ ವಕೀಲರ ಸಂಘದ ಅಧ್ಯಕ್ಷ ಗುಪ್ತಲಿಂಗ ಪಾಟೀಲ ನ್ಯಾಯಾಂಗ ಇಲಾಖೆ ನೌಕರರ ಸಂಘದ ಕಲಬುರಗಿ ಜಿಲ್ಲಾ ಘಟಕದ ಅಧ್ಯಕ್ಷ ಸುನೀಲಕುಮಾರ ಚಾಂದೆ ವೇದಿಕೆಯಲ್ಲಿದ್ದರು. ಮಹಿಳಾ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

# ಬಾಗಲಕೋಟೆ ಜಿಲ್ಲೆಯಲ್ಲೂ ಬಂದ್‌ಗೆ ನೀರಸ ಪ್ರತಿಕ್ರಿಯೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.22– ಬೆಳಗಾವಿಯಲ್ಲಿ ಕನ್ನಡಿಗರ ಮೇಲೆ ಮರಾಠಿ ಪುಂಡರು ನಡೆಸುತ್ತಿರುವ ದೌರ್ಜನ್ಯ ಖಂಡಿಸಿ ಹಾಗೂ ರಾಜ್ಯದ ಹಿತಾಸಕ್ತಿಗೆ ಸಂಬಂಧಿತ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕನ್ನಡಪರ ಸಂಘಟನೆಗಳು ಶನಿವಾರ ನೀಡಿದ್ದ ಬಂದ್ ಕರೆಗೆ ಬಾಗಲಕೋಟೆ ಜಿಲ್ಲೆಯಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಜಿಲ್ಲೆಯ ಜಮಖಂಡಿ, ಬಾಗಲಕೋಟೆ, ರಬಕವಿ–ಬನಹಟ್ಟಿ,ಮುಧೋಳ,ಬೀಳಗಿ, ಬಾದಾಮಿ,ಹುನಗುಂದ,ಇಳಕಲ್ಲ ತಾಲೂಕಿನಲ್ಲಿ ಬಹುತೇಕ ಅಂಗಡಿ–ಮುಗ್ಗಟ್ಟುಗಳು ಎಂದಿನಂತೆ ತೆರೆದಿದ್ದು, ಜನಜೀವನದ ಮೇಲೆ ಬಂದ್ ಯಾವುದೇ ರೀತಿಯ ಪರಿಣಾಮ ಬೀರಲಿಲ್ಲ. ಬಸ್, ವಾಹನಗಳ ಓಡಾಟ ಎಂದಿನಂತಿತ್ತು. ವ್ಯಾಪಾರ ವಹಿವಾಟಿಗೆ ಯಾವ ತೊಂದರೆಯೂ ಇರಲಿಲ್ಲ. ಬೆಳಿಗ್ಗೆಯಿಂದಲೇ ಅಂಗಡಿಗಳು ಎಂದಿನಂತೆ ತೆರೆದಿದ್ದವು.ಕೆಲವರಿಗೆ ಬಂದ್‌ನ ಮಾಹಿತಿಯೂ ಇರಲಿಲ್ಲ. ಎಸ್.ಎಸ್.ಎಲ್.ಸಿ ಪರೀಕ್ಷೆ ನಡೆದಿರುವುದರಿಂದ ಕೆ.ಎಸ್.ಆರ್.ಟಿ.ಸಿ ಬಸ್ಸುಗಳ ಸಂಚಾರ ಯಥಾಸ್ಥಿತಿಯಾಗಿ ನಡೆಯಿತು. ಹೊಟೇಲ್, ಕಿರಾಣಿ ಅಂಗಡಿ, ಬಟ್ಟೆ ಅಂಗಡಿ ಸೇರಿ ಎಲ್ಲ ಅಂಗಡಿಗಳೂ ತೆರೆದಿದ್ದು, ಕೆಲವು ಕನ್ನಡಪರ ಸಂಘಟನೆಗಳು ಮಾತ್ರ ಬಂದ್‌ಗೆ ಬೆಂಬಲ ವ್ಯಕ್ತಪಡಿಸಿದ್ದು, ಬಹುತೇಕ ಸಂಘಟನೆಗಳು ಸಾಂಕೇತಿಕ ಬೆಂಬಲ ನೀಡಿದ್ದವು.

# ಶಾಸಕರ ಅಮಾನತ್ತಿಗೆ ಕಲ್ಲೂರ ಖಂಡನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮಾ.22: 18 ಬಿಜೆಪಿ ಶಾಸಕರನ್ನು ವಿಧಾನ ಸಭೆಯಿಂದ 6 ತಿಂಗಳುಗಳ ಕಾಲ ಅಮಾನತ್ತು ಮಾಡಿರುವ ಕಾಂಗ್ರೆಸ್ ಸ್ಪೀಕರ್ ಕ್ರಮ ಕಾನೂನು ಬಾಹಿರವಾಗಿದೆ ಎಂದು ಕಲಬುರಗಿ ಜಿಲ್ಲಾ ಬಿಜೆಪಿ ಓಬಿಸಿ ಮೋರ್ಚಾದ ನಗರ ಅಧ್ಯಕ್ಷ ದೇವೇಂದ್ರ ದೇಸಾಯಿ ಕಲ್ಲೂರ ಅವರು ತೀವ್ರವಾಗಿ ಖಂಡಿಸಿದ್ದಾರೆ.



ಸದನದ ಪ್ರತಿಷ್ಠಿತ ಸ್ಥಾನದಲ್ಲಿರುವ ಸಭಾಪತಿಗಳಾದ ಯು.ಟಿ. ಖಾದರ ಅವರು ವಿಪಕ್ಷಗಳ ಹಕ್ಕು ಮೊಟಕುಗೊಳಿಸುವ ಮೂಲಕ ಪ್ರಶ್ನಿಸುವ ಹಕ್ಕನ್ನು ಕಸಿದಿದ್ದಾರೆಂದು ಆರೋಪಿಸಿದ ಅವರು ಗಂಭೀರ ವಿಷಯದ ಕುರಿತು ನ್ಯಾಯ ಕೇಳುವುದು ತಪ್ಪಾ ಎಂದು ಪ್ರಶ್ನಿಸಿದ ಅವರು ಕೂಡಲೇ ತಮ್ಮ ನಿರ್ಧಾರವನ್ನು ಬದಲಿಸಬೇಕು ಇಲ್ಲದಿದ್ದರೆ ಸರಕಾರ ಮತ್ತು ಸಭಾಪತಿಗಳ ವಿರುದ್ಧ ಉಗ್ರವಾದ ಹೋರಾಟ ಮಾಡಬೇಕಾಗುತ್ತದೆ ಎಂದು ದೇವೇಂದ್ರ ದೇಸಾಯಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಒಕ್ಕೂಟ ವ್ಯವಸ್ಥೆ ಅಪಾಯದಲ್ಲಿ: ಡಿಕೆ ಶಿವಕುಮಾರ್

ಮಲ್ಲಮ್ಮ ನುಡಿ ವಾರ್ತೆ

ಚೆನ್ನೈ:ಮಾ.22: ಉದ್ದೇಶಿತ ಕ್ಷೇತ್ರ ಪುನರ್ ವಿಂಗಡಣೆ ನಿರ್ಣಯದಿಂದ ಒಕ್ಕೂಟ ವ್ಯವಸ್ಥೆ ಅಪಾಯದಲ್ಲಿದೆ ಎಂದು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಶನಿವಾರ ಹೇಳಿದ್ದಾರೆ.ಇಂದು ಚೆನ್ನೈನಲ್ಲಿ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಕರೆದಿದ್ದ ಲೋಕಸಭಾ ಕ್ಷೇತ್ರಗಳ ವಿಂಗಡಣೆಯ ಕುರಿತ ಜಂಟಿ ಕ್ರಿಯಾ ಸಮಿತಿ ಸಭೆಯನ್ನುದ್ದೇಶಿಸಿ ಮಾತನಾಡಿದ ಡಿಕೆಶಿ, ಜನಸಂಖ್ಯೆ ಆಧಾರದ ಮೇಲೆ ಕ್ಷೇತ್ರ ಪುನರ್ ವಿಂಗಡಣೆ ಮಾಡಿದರೆ ಒಕ್ಕೂಟ ವ್ಯವಸ್ಥೆಗೆ ಧಕ್ಕೆಯಾಗಲಿದೆ ಎಂದರು. ಕ್ಷೇತ್ರ ಪುನರ್ ವಿಂಗಡಣೆಯು, ಜನಸಂಖ್ಯೆಯನ್ನು ನಿಯಂತ್ರಿಸಿದ, ಸಾಕ್ಷರತೆಯನ್ನು ಸುಧಾರಿಸಲು ಮತ್ತು ಮಹಿಳೆಯರ ಸಬಲೀಕರಣಕ್ಕೆ ಯತ್ನಿಸಿದ ದಕ್ಷಿಣ ಭಾರತದ ರಾಜ್ಯಗಳ ಮೇಲಿನ ರಾಜಕೀಯ ದಾಳಿ ಎಂದು ಡಿಕೆ ಶಿವಕುಮಾರ್ ಟೀಕಿಸಿದರು."ನಮ್ಮ ಪ್ರಜಾಪ್ರಭುತ್ವದ ಅಡಿಪಾಯವೇ ಫೆಡರಲಿಸಂ. ಅದು ಈಗ ಅಪಾಯದಲ್ಲಿದೆ. ನಮ್ಮ ಫೆಡರಲ್ ಪ್ರಜಾಪ್ರಭುತ್ವದ ಸ್ತಂಭಗಳನ್ನು ಒಂದೊಂದಾಗಿ ಕಿತ್ತುಹಾಕಲಾಗುತ್ತಿದೆ" ಎಂದು ಕೇಂದ್ರದ ವಿರುದ್ಧ ಡಿಸಿಎಂ ವಾಗ್ದಾಳಿ ನಡೆಸಿದರು.ಕ್ಷೇತ್ರ ಪುನರ್ ವಿಂಗಡಣೆ ಕೇವಲ ಲೋಕಸಭಾ ಕ್ಷೇತ್ರಗಳಿಗೆ ಸೀಮಿತವಲ್ಲ. ಇದು ಭಾರತದ ಒಕ್ಕೂಟ ವ್ಯವಸ್ಥೆಯ ಭವಿಷ್ಯದ ವಿಚಾರ. ಕೇಂದ್ರ ಸರ್ಕಾರ ಈ ಅವೈಜ್ಞಾನಿಕ ಸೂತ್ರದ ಮೇಲೆ ಕ್ಷೇತ್ರ ಮರು ವಿಂಗಣೆಗೆ ಮುಂದಾದರೆ ಒಕ್ಕೂಟ ವ್ಯವಸ್ಥೆಯ ಸಮತೋಲನವನ್ನೇ ಅಲುಗಾಡಿಸುತ್ತದೆ.

# ಗಬ್ಬೆದ್ದು ನಾರುತ್ತಿರುವ ನಗರ :

## ಗಮನಕೊಡದ ಅಧಿಕಾರಿಗಳು, ಜನಪ್ರತಿನಿಧಿಗಳು




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮಾ.22:ನಗರದ ಮಹಾತ್ಮಗಾಂಧಿ ವೃತ್ತದಲ್ಲಿ ನೆನ್ನೆ ರಾತ್ರಿ ಸುರಿದ ಭಾರಿ ಮಳೆಗೆ ರಸ್ತೆಯೆಲ್ಲ ಕೆರೆಯಂತಾಗಿತ್ತು, ನೀರು ಖಾಲಿಯಾಗಿ ಚರಂಡಿಯಲ್ಲಿನ ಹೊಲಸು ರಸ್ತೆ ಮೇಲೆ ಹರಿದಾಡಿದ್ದರೂ ಸಹ ನೋಡಿ ನೋಡದಂತೆ ಅಧಿಕಾರಿಗಳು ತಮಗೂ ಇದಕ್ಕೂ ಸಂಬಂಧವಿಲ್ಲ ಎಂಬಂತಿದ್ದಾರೆ.

ಅಧಿಕಾರಿಗಳ ನಿರ್ಲಕ್ಷ್ಯತನ : ಮಳೆ ಬಂದು 17 ಗಂಟೆ ಗತಿಸಿದರೂ ಸಹ ಸ್ವಚ್ಛತಾ ಕಾರ್ಯನಿರ್ವಹಿಸದೆ ನಮಗೆ ಸಂಬಂಧವೇ ಇಲ್ಲ ಅನ್ನುವ ರೀತಿಯಲ್ಲಿ ಅಧಿಕಾರಿಗಳು ಬೇಜವಾಬ್ದಾರಿತನ ತೋರಿಸುತ್ತಿದ್ದಾರೆ, ಎಂದು ಅಂಗಡಿ ಮಾಲೀಕರು ವಾಹನ ಸವಾರರು ಮತ್ತು ಸ್ಥಳೀಯರು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

# ಬೇಸಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಎಚ್ಚರ ವಹಿಸಿ:ಬಿ.ಫೌಜಿಯಾ ತರನ್ನುಮ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮಾ.22: ಜಿಲ್ಲೆಯಾದ್ಯಂತ ಬೇಸಿಗೆ ಸಮಯದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಎಲ್ಲಾ ಪೌರ ಸಂಸ್ಥೆಗಳು, ಪಂಚಾಯತಿಗಳು ಎಚ್ಚರ ವಹಿಸಬೇಕು ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಹೇಳಿದರು.

ಶುಕ್ರವಾರ ತಮ್ಮ ಕಚೇರಿಯಲ್ಲಿ ಜಿಲ್ಲೆಯ ಸಹಾಯಕ ಆಯುಕ್ತರು, ತಹಶೀಲ್ದಾರರು, ತಾಲೂಕ ಪಂಚಾಯತ್ ಇ.ಓ, ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಹಾಗೂ ಗ್ರಾಮೀಣ ಕುಡಿಯುವ ನೀರು ಹಾಗು ನೈರ್ಮಲ್ಯ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಸಮಸ್ಯಾತ್ಮಕ ಹಳ್ಳಿ ಮತ್ತು ಪ್ರದೇಶಗಳನ್ನು ಗುರುತಿಸಿ ಸಮರ್ಪಕವಾಗಿ ನೀರು ಪೂರೈಕೆಗೆ ಪರ್ಯಾಯ ವ್ಯವಸ್ಥೆಗೆ ಸಕಲ ಸಿದ್ಧತೆ ಮಾಡಿಕೊಳ್ಳುವಂತೆ ತಿಳಿಸಿದರು.

ಜಿಲ್ಲೆಯ ಅಫಜಲಪೂರ ತಾಲೂಕಿನ ಸೊನ್ನ ಬ್ಯಾರೇಜಿನಲ್ಲಿ ಒಳಹರಿವು ಇರದೇ ಇರುವುದರಿಂದ ಈಗಾಗಲೇ ಸಂಗ್ರಹವಿರುವ ನೀರನ್ನೇ ಜೂನ್–2025ರವರೆಗೆ ಕುಡಿಯುವ ಉದ್ದೇಶಕ್ಕಾಗಿ ಮಾತ್ರ ಕಾಯ್ದಿರಿಸಿಕೊಳ್ಳಬೇಕಾಗಿರುತ್ತದೆ. ಕಲಬುರಗಿ ನಗರಕ್ಕೆ ಕುಡಿಯುವ ನೀರಿನ ಕೊರತೆ ನೀಗಿಸಲು ಮೂರು ಹಂತಗಳಲ್ಲಿ ತಲಾ



0.70 ಟಿ.ಎಂ.ಸಿ ಯಂತೆ ಒಟ್ಟು 2.10 ಟಿ.ಎಂ.ಸಿ ನಿರು ನಾರಾಯಣಪುರ ಜಲಾಶಯದಿಂದ ಜಿಲ್ಲೆಯ ಸರಡಗಿ ಬ್ಯಾರೇಜಿಗೆ ಹರಿಸುವಂತೆ ಪ್ರಾದೇಶಿಕ ಆಯುಕ್ತರಿಗೆ ಪ್ರಸ್ತಾವನೆ ಸಲ್ಲಿಸಿದೆ ಎಂದು ಡಿ.ಸಿ ತಿಳಿಸಿದರು.

ಸೊನ್ನ ಬ್ಯಾರೇಜಿನ ಮೇಲ್ಭಾಗದಲ್ಲಿ ರೈತರು ಪಂಪ್ ಸೆಟ್ ಗಳ ಮೂಲಕ ನೀರೆತ್ತುತ್ತಿರುವುದು ಮತ್ತು ಬಿಸಿಲಿನ ತಾಪಮಾನ ಜಾಸ್ತಿ ಇರುವುದರಿಂದ ನೀರು ಆವಿ ಆಗುತ್ತಿರುವುದು ಸೇರಿಸಿದರೆ ಸುಮಾರು 0.003 ಟಿ.ಎಂ.ಸಿ. ನೀರು ಪ್ರತಿದಿನ ಕಡಿಮೆಯಾಗುತ್ತಿದೆ. ಒಂದು ವೇಳೆ ಸೊನ್ನ ಬ್ಯಾರೇಜಿನ ನೀರು ಕೆಳಗಡೆ ಹರಿಸಿದರೆ ಮುಂದಿನ ದಿನಗಳಲ್ಲಿ ಅಫಜಲಪೂರ ಪಟ್ಟಣ ಹಾಗೂ ಸೊನ್ನ ಬ್ಯಾರೇಜಿನ ಮೇಲ್ಭಾಗದ ಅವಲಂಬಿತ ಗ್ರಾಮಗಳಿಗೆ ಕುಡಿಯುವ ನೀರಿನ ಕೊರತೆ ಉಂಟಾಗುವ ಸಾಧ್ಯತೆ ಇರುವುದರಿಂದ ಮಹಾರಾಷ್ಟ್ರ ರಾಜ್ಯದ ಉಜನಿ ಅಥವಾ ನಾರಾಯಣಪೂರ ಜಲಾಶಯದಿಂದ ಸೊನ್ನ ಬ್ಯಾರೇಜಿಗೆ 2 ಟಿಎಮ್‌ಸಿ ನೀರು ಬಿಡುಗಡೆ ಮಾಡಿದರೆ ಭೀಮಾ ನದಿಯ ಕೆಳ ಭಾಗ ಗ್ರಾಮಗಳಿಗೆ ನೀರು ಹರಿಸಬಹುದಾಗಿದೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.ಇದೇ ಸಂದರ್ಭದಲ್ಲಿ ಯಡ್ರಾಮಿ ಪಟ್ಟಣ ಮತ್ತು ಸುತ್ತಮುತ್ತಲಿನ ಸೈದಾಪೂರ, ಸುಂಬಡ, ಹರನಾಳ (ಬಿ), ವಸ್ತಾರಿ, ಕರಕಿಹಳ್ಳಿ ಗ್ರಾಮಗಳ ಸಾರ್ವಜನಿಕರಿಗೆ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿಗಾಗಿ ಯಡ್ರಾಮಿ ಪಟ್ಟಣದ ರಾಮತೀರ್ಥ ಕೋಟೆ ನೀರಿನ ಸಂಗ್ರಹಣದಲ್ಲಿ ನೀರು ತುಂಬಿಸಲು ಕೆ.ಬಿ.ಜೆ.ಎನ್.ಎಲ್ ಕೆನಲ್ ಡಿ–10 ಡಿಸ್ಟ್ರಿಬ್ಯೂಟರ್ ಲೈನ್ ಗೇಟ್ ಮುಖಾಂತರ 0.006 ಟಿ.ಎಂ.ಸಿ ನೀರು ಬಿಡುಗಡೆಗೊಳಿಸಲು ಈಗಾಗಲೆ ಪ್ರಾದೇಶಿಕ ಆಯುಕ್ತರು ಆದೇಶಿಸಿದ್ದು, ನೀರು ಎಲ್ಲಿಯೂ ಪೋಲಾಗದಂತೆ ಕಂದಾಯ, ಆರ್.ಡಿ.ಪಿ.ಆರ್ ಮತ್ತು ಪೊಲೀಸ್ ಇಲಾಖೆ ನಿಗಾ ವಹಿಸಬೇಕೆಂದು ಅಧಿಕಾರಿಗಳಿಗೆ ಡಿ.ಸಿ. ತಾಕೀತು ಮಾಡಿದರು.

ಅಫಜಲಪೂರ ತಾಲೂಕಿನ ಘತ್ತರಗಾ ಮತ್ತು ದೇವಲ ಗಾಣಗಾಪೂರ ಬ್ರಿಡ್ಜ್ ಕಂ ಬ್ಯಾರೇಜ್ ನಲ್ಲಿರುವ ನೀರು ಎಪ್ರಿಲ್ ಮಾಹೆಯವರೆಗೂ ಬರಬಹುದು ಎಂದು ನೀರಾವರಿ ಇಲಾಖೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸೇರಿದಂತೆ ಇತರೆ ಇಲಾಖೆಯ ಹಿರಿಯ ಅಧಿಕಾರಿಗಳಿದ್ದರು.

# ಸರ್ಕಾರ ಜನರ ಭಾವನೆಗಳಿಗೆ ಬೆಲೆ ಕೊಡುತ್ತಿಲ್ಲಾ: ಭಗವಂತ ಖೂಬಾ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಮಾ.22:ಜನರ ಭಾವನೆಗಳನ್ನು ವಿಧಾನಸೌಧದಲ್ಲಿ ವ್ಯಕ್ತಪಡಿಸಿ, ಜನರಿಗೆ ನ್ಯಾಯ ಕೊಡಿಸಬೇಕಾಗಿದ್ದ ಶಾಸಕರನ್ನ 6 ತಿಂಗಳುಗಳ ಕಾಲ ಉಚ್ಚಾಟನೆ ಮಾಡಿರುವುದು ನೊಡಿದರೆ ರಾಜ್ಯ ಸರ್ಕಾರ ಯಾರಿಗೂ ಗಣನೆಗೆ ತೆಗೆದುಕೊಳ್ಳದೆ, ಯಾರ ಭಾವನೆಗಳಿಗೂ ಬೆಲೆ ನೀಡದೆ ತನ್ನ ಮನಸ್ಸಿಗೆ ಬಂದ ಹಾಗೆ ನಡೆದುಕೊಳ್ಳುತ್ತಿದೆ, ಜನರಿಂದ ಆಯ್ಕೆಯಾದ ಶಾಸಕರ ಅಮಾನತ್ತು ಪ್ರಜಾಪ್ರಭುತ್ವದ ಕಗ್ಗೊಲೆಗೆ ಸಮವಾಗಿದೆ ಎಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ವಿಷಾದ ವ್ಯಕ್ತಪಡಿಸಿದ್ದಾರೆ.

ರಾಜ್ಯದಲ್ಲಿ ಒಂದು ತರಹ ಅರಾಜಕತೆ ಸೃಷ್ಟಿಯಾದಂತೆ ಜನರಿಗೆ ಭಾಸವಾಗುತ್ತಿದೆ, ನಮ್ಮ ಶಾಸಕರುಗಳು ಧ್ವನಿ ಎತ್ತಿದ್ದು ಹನಿಟ್ರ್ಯಾಪ್ ಅಂತಹ ಮುಖ್ಯವಾದ ವಿಷಯದ ಕುರಿತು, ಇಂತಹ ಸದೂದ್ದೇಶ ಇರುವ ವಿಷಯಗಳ ಬಗ್ಗೆನೂ ತನಿಖೆಗೆ ಆಗ್ರಹಿಸದೆ, ಸರಿಯಾದ ವರ್ತನೆ ಇಲ್ಲವೆಂದು ನೇಪಹೆಳಿ ಶಾಸಕರ ಅಮಾನತ್ತು ಮಾಡಿರುವುದು ತೀವ್ರ ಖಂಡನೀಯವಾಗಿದೆ, ಇದರ ಜೊತೆಗೆ ರಾಜ್ಯದಲ್ಲಿ ಯಾವ ಹಂತದಲ್ಲೂ ಆಡಳಿತ ಸರಿಯಾಗಿ ಆಗುತ್ತಿಲ್ಲಾ, ಮಂತ್ರಿಗಳ ಮಾತು ಅಧಿಕಾರಿಗಳು ಕೇಳ್ತಾ ಇಲ್ಲಾ, ಅಧಿಕಾರಿಗಳ ಮಾತು ಸರ್ಕಾರ ಕೇಳ್ತಾ ಇಲ್ಲಾ, ಎಲ್ಲರು ತನ್ನ ಮನಸ್ಸಿಗೆ ಬಂದ ಹಾಗೆ ಕೆಲಸ ಮಾಡಿಕೊಂಡು ಹೊಗುತ್ತಿದ್ದಾರೆ, ಇದರಿಂದ ರಾಜ್ಯದ ಜನರು ಸಂಕಷ್ಟದಲ್ಲಿ ಬಿಳುತ್ತಿದ್ದಾರೆ. ಕಮಲನಗರದಲ್ಲಿ ಪ್ರಜಾಸೌಧ ನಿರ್ಮಾಣ ಮಾಡಲು ರೈತರಿಂದ ಜಮೀನು ಪಡೆದು, ಸ್ಥಳ



ಗುರುತಿಸಲಾಗಿ, ಆ ಜಮೀನಿನ ಪಹಾಣಿಯಲ್ಲಿಯು ಪ್ರಜಾಸೌಧ ಎಂದು ನಮೂದಾಗಿದೆ ಆದರೆ ಇಲ್ಲಿಯವರೆಗೆ ಪ್ರಜಾಸೌಧ ನಿರ್ಮಾಣ ಪ್ರಾರಂಭವಾಗಿರುವುದಿಲ್ಲಾ, ಸ್ಥಳಿಯರು ಅಧಿಕಾರಿಗಳಿಗೆ ಕೇಳಿದರೆ ಅವರಿಗೂ ಏನು ಗೊತ್ತಿಲ್ಲದಂತೆ ಮಾತಾಡುತ್ತಿದ್ದಾರೆ ಎಂದು ಕಮಲನಗರ ಗ್ರಾಮಸ್ಥರು ನನ್ನ ಗಮನಕ್ಕೆ ಈ ವಿಷಯ ತಂದಿದ್ದಾರೆ, ಈ ವಿಷಯದ ನಾನು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ, ಕಂದಾಯ ಸಚಿವರಾದ ಕೃಷ್ಣ ಭೈರೆಗೌಡರವರಿಗೆ ಪತ್ರ ಬರೆದು ಶೀಘ್ರದಲ್ಲಿ ಈ ಕಾಮಗಾರಿ ಪ್ರಾರಂಭಿಸಬೇಕೆಂದು ಮನವಿ ಮಾಡಿಕೊಂಡಿದ್ದೇನೆ, ಇದರಿಂದ ಕಮಲನಗರ ತಾಲೂಕಿನ ಜನತೆಗೆ ಅನುಕೂಲವಾಗಲಿದೆ ಎಂದು ಭಗವಂತ ಖೂಬಾ ತಿಳಿಸಿದ್ದಾರೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಮಕ್ಕಳಿಗೆ ಮತ್ತು ಗರ್ಭಿಣಿ ತಾಯಂದಿರಿಗೆ ನೀಡುತ್ತಿರುವ ಕಳಪೆ ಆಹಾರದ ಬಗ್ಗೆ ಮಾಧ್ಯಮದಲ್ಲಿ ವರದಿಯಾಗಿದೆ, ಆದರೆ ಇಲ್ಲಿಯವರೆಗೆ ಯಾವೂದೆ ಜನಪ್ರತಿನಿಧಿಗಳು ಇದರ ಬಗ್ಗೆ ಧ್ವನಿ ಎತ್ತದೆ, ಕಳ್ಳರನ್ನು ರಕ್ಷಿಸುವ ಕೆಲಸ ಮಾಡುತ್ತಿರುವುದನ್ನು ಖೂಬಾ ಖಂಡಿಸಿದ್ದಾರೆ. ಅಧಿಕಾರಿಗಳನ್ನು ಮತ್ತು ಆಹಾರ ಪೂರೈಕೆ ಮಾಡುತ್ತಿರುವವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಭಗವಂತ ಖೂಬಾ ಆಗ್ರಹಿಸಿದ್ದಾರೆ. ಈಗಾಗಲೆ ಜಿಲ್ಲೆಯಲ್ಲಿ ಅಪೌಷ್ಟಿಕತೆ ತಾಂಡವವಾಡುತ್ತಿದೆ, ಇಂತಹದರಲ್ಲಿ ಮತ್ತೆ ಕಳ್ಳಾಟಕ್ಕೆ ಸಹಕಾರ ನೀಡುವ ಕೆಲಸ ಮುಂದುವರೆದರೆ ಈ ಕುರಿತು ಮಾನ್ಯ ಪ್ರಧಾನಮಂತ್ರಿಗಳಿಗೆ ಪತ್ರ ಬರೆದು ಉನ್ನತ ಮಟ್ಟದ ತನಿಖೆ ಮಾಡಲು ಆಗ್ರಹಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ. ರಾಜ್ಯ ಸರ್ಕಾರ ದ್ವೇಷದ ರಾಜಕಾರಣ, ಹತ್ತಿಕ್ಕುವ ರಾಜಕಾರಣ ಬಿಟ್ಟು ಜನರಿಗೆ ನ್ಯಾಯ ಕೊಡುವ ನಿಟ್ಟಿನಲ್ಲಿ ನಡೆದುಕೊಳ್ಳಬೇಕು, ಸ್ಪೀಕರ್ ಕೂಡ ಎಲ್ಲರನ್ನು ಸಮಾನವಾಗಿ ಕಾಣುವ ಗುಣ ರೂಢಿಸಿಕೊಳ್ಳಬೇಕು, ಜನರು ಎಲ್ಲವನ್ನು ಗಮನಿಸುತ್ತಿದ್ದಾರೆ, ಜನರ ಭಾವನೆಗಳಿಗೆ ಬೆಲೆ ಕೊಡದೆ ಹೆಚ್ಚು ದಿನ ಆಡಳಿತ ನಡೆಸಲು ಸಾಧ್ಯವಿಲ್ಲ ಎಂದಿದ್ದಾರೆ.

# ಸಾಲ ಬಾಧೆ:ರೈತ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.22:ಸಾಲದ ಬಾಧೆ ಸಹಿಸಲಾಗದೆ ಮತ್ತೊಬ್ಬ ರೈತ ಆತ್ಮಹತ್ಯೆ ಮಾಡಿಕೊಂಡ ಘಟನೆ ಅಫಜಲಪುರ ತಾಲೂಕಿನ ಘತ್ತರಗಾ ಗ್ರಾಮದಲ್ಲಿ ನಡೆದಿದೆ. ಘಟನೆಯಿಂದ ಆಕ್ರೋಶಗೊಂಡ ರೈತರು ಅಫಜಲಪುರ ತಹಸೀಲ್ದಾರ್ ಕಚೇರಿ ಎದುರು ಮೃತ ರೈತನ ಕಳೇಬರವಿಟ್ಟು ಮಿಂಚಿನ ಪ್ರತಿಭಟನೆ ನಡೆಸಿದರು.ಘತ್ತರಗಾದ ಚಂದ್ರಕಾಂತ ಬೇಲೂರ (57) ಆತ್ಮಹತ್ಯೆಗೆ ಶರಣಾದ ರೈತ ಎಂದು ತಿಳಿದುಬಂದಿದ್ದು, ಈತ ಬ್ಯಾಂಕ್ ಮತ್ತು ಖಾಸಗಿಯಾಗಿ ರೂ. 40 ಲಕ್ಷ ಸಾಲ ಮಾಡಿಕೊಂಡಿದ್ದರು. ನಿತ್ಯ ಸಾಲಗಾರರ ಕಾಟದಿಂದ



ಬೇಸತ್ತಿದ್ದರು ಎನ್ನಲಾಗಿದೆ.ಈ ಮಧ್ಯೆ, ಆತ್ಮಹತ್ಯೆಯ ಮಾಹಿತಿ ಅರಿಯುತ್ತಿದ್ದಂತೆಯೇ ಮೃತ ರೈತನ ಕಳೇಬರವನ್ನು ಅಫಜಲಪುರ ತಹಸೀಲ್ದಾರ್ ಕಚೇರಿ ಎದುರಿಟ್ಟು ಕುಟುಂಬದ ಸದಸ್ಯರೊಂದಿಗೆ ರೈತರು ಪ್ರತಿಭಟನೆ ನಡೆಸಿದರು.

ಕಳೇಬರವನ್ನು ತಹಸೀಲ್ದಾರ್ ಕಚೇರಿಗೆ ತರುವುದಕ್ಕೂ ಮುನ್ನ ಕಲಬುರಗಿ–ವಿಜಯಪುರ ರಾಜ್ಯ ಹೆದ್ದಾರಿ ಮೇಲಿಟ್ಟು ತೀವ್ರ ಆಕ್ರೋಶ ವ್ಯಕ್ತಪಡಿಸಿದ ರೈತರು, ಸರ್ಕಾರದ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ತಹಸೀಲ್ದಾರ್ ಕಚೇರಿ ಎದುರು ನಡೆದ ಪ್ರತಿಭಟನೆಯ ನೇತೃತ್ವ ವಹಿಸಿದ್ದ ಬಿಜೆಪಿ ಮುಖಂಡ ಅವ್ವಣ್ಣ ಮ್ಯಾಕೇರಿ, ಜಿಲ್ಲೆಯಲ್ಲಿ ರೈತರ ಆತ್ಮಹತ್ಯೆಯ ಸರಣಿ ಮುಂದುವರೆದಿದೆ. ಇಷ್ಟಾದರೂ ರೈತರನ್ನು ರಕ್ಷಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಸಕಾರಾತ್ಮಕ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆಕ್ರೋಶ ಹೊರಹಾಕಿದರು.

ಅಫಜಲಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಹಾಗೂ ಜಿಲ್ಲಾ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ

ಮಲ್ಲಮ್ಮ ನುಡಿ ವಾರ್ತೆ

ಬೀದರ : ಮಾ.22: ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಜಿಲ್ಲಾ ಪಂಚಾಯತ ಬೀದರ ವತಿಯಿಂದ ಮಾರ್ಚ.23ರಂದು ಬೆಳಿಗ್ಗೆ 10.30ಕ್ಕೆ ಸರಕಾರಿ ನೌಕರರ ಸಮುದಾಯ ಭವನ ಪ್ರತಾಪ ನಗರ ನೌಬಾದ ಬೀದರದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ ಆಯೋಜಿಸಲಾಗಿದೆ.ಕಾರ್ಯಕ್ರಮದ ಉದ್ಘಾಟನೆಯನ್ನು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮಾಡಲಿದ್ದಾರೆ.ಕಾರ್ಯಕ್ರಮದ ಘನ ಉಪಸ್ಥಿತಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಐಟಿ ಮತ್ತು ಬಿಟಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಪ್ರಿಯಾಂಕ್ ಖರ್ಗೆ ಹಾಗೂ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರಾದ ಶರಣಪ್ರಕಾಶ ಪಾಟೀಲ ಅವರುರುಗಳು ವಹಿಸಲಿದ್ದಾರೆ.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸಂಸದರಾದ ಸಾಗರ ಈಶ್ವರ ಖಂಡ್ರೆ, ಔರಾದ (ಬಾ) ಶಾಸಕರಾದ ಪ್ರಭು ಬಿ.ಚವ್ಹಾಣ, ಬಸವಕಲ್ಯಾಣ ಶಾಸಕರಾದ ಶರಣು ಸಲಗರ, ಬೀದರ ದಕ್ಷಿಣ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕರಾದ ಡಾ.ಸಿದ್ಧಲಿಂಗಪ್ಪ ಎನ್.ಪಾಟೀಲ್ ಹಾಗೂ ವಿಧಾನ ಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ ಜಿ.ನಮೋಶಿ, ಭೀಮರಾವ ಬಿ.ಪಾಟೀಲ, ಡಾ.ಎಂ.ಜಿ.ಮೂಳೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಮಾಲಾ ಬಿ.ನಾರಾಯಣರಾವ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ, ಬೀದರ ನಗರ ಸಭೆ ಅಧ್ಯಕ್ಷರಾದ ಮಹ್ಮದ ಗೌಸ್, ಬೀದರ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಅಮೃತರಾವ ಚಿಮಕೋಡೆ ಅವರುಗಳು ಭಾಗವಹಿಸಲಿದ್ದಾರೆ.

# ಹಿಂದಿ ಕವಿ ಶುಕ್ಲಾಗೆ ಜ್ಞಾನಪೀಠ ಪ್ರಶಸ್ತಿ

ನವದೆಹಲಿ:ಮಾ.22:ಪ್ರಸಿದ್ಧ ಹಿಂದಿ ಕವಿ ಮತ್ತು ಬರಹಗಾರ ವಿನೋದ್ ಕುಮಾರ್ ಶುಕ್ಲಾ ಅವರು ಈ ವರ್ಷದ ಅತಿದೊಡ್ಡ ಸಾಹಿತ್ಯ ಕ್ಷೇತ್ರದ ಅತ್ಯುನ್ನತ ಜ್ಞಾನಪೀಠ ಪ್ರಶಸ್ತಿಯನ್ನು ಸ್ವೀಕರಿಸಲಿದ್ದಾರೆ. ಈ ಕುರಿತು ಇಂದು ನವದೆಹಲಿಯಲ್ಲಿ ಘೋಷಣೆ ಮಾಡಲಾಯಿತು. ವಿನೋದ್ ಕುಮಾರ್ ಶುಕ್ಲಾ ರಾಯ್‌ಪುರದಲ್ಲಿ ನೆಲೆಸಿದ್ದಾರೆ.

1937ರ ಜನವರಿ 1ರಂದು ರಾಜನಂದಗಾಂವ್‌ನಲ್ಲಿ ಜನಿಸಿದ್ದರು. ಅವರು ಕಳೆದ 50 ವರ್ಷಗಳಿಂದ ಸಾಹಿತ್ಯ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಅವರ ಮೊದಲ



ಕವನ ಸಂಕಲನ "ಅಭಿಕ್ಷ ಜೈ ಹಿಂದ್" 1971 ರಲ್ಲಿ ಪ್ರಕಟವಾಯಿತು. ಅಂದಿನಿಂದ ಅವರ ಬರಹಗಳು ಸಾಹಿತ್ಯ ಜಗತ್ತಿನಲ್ಲಿ ತಮ್ಮದೇ ಆದ ಸ್ಥಾನವನ್ನು ಪಡೆದುಕೊಂಡಿವೆ. ಅವರ ಕಾದಂಬರಿಗಳಾದ ನೌಕರ್ ಕಿ ಕಮೀಜ್, ಖಿಲೇಗಾ ತೋ ದೇಖೆಂಗೆ ಮತ್ತು ದೇರ್ ವಾಸ್ ಎ ವಿಂಡೋ ಇನ್ ದಿ ವಾಲ್ ಗಳನ್ನು ಅತ್ಯುತ್ತಮ ಹಿಂದಿ ಕಾದಂಬರಿಗಳೆಂದು ಪರಿಗಣಿಸಲಾಗಿದೆ. ಅಲ್ಲದೆ. ಅವರ ಕಥಾ ಸಂಕಲನಗಳಾದ ರೂಮ್ ಆನ್ ಎ ಟ್ರೀ ಮತ್ತು ಕಾಲೇಜ್ ಕೂಡ ಹೆಚ್ಚು ಚರ್ಚಿಸಲ್ಪಟ್ಟಿವೆ.ವಿನೋದ್ ಕುಮಾರ್ ಶುಕ್ಲಾ ಅವರು ಮಕ್ಕಳ ಪುಸ್ತಕಗಳನ್ನು ಸಹ ಬರೆದಿದ್ದಾರೆ. ಅವುಗಳಲ್ಲಿ ಗ್ರೀನ್ ಲೀಫ್ ಕಲರ್ಡ್ ಪತ್ರಂಗಿ ಮತ್ತು ಎ ಬಾಯ್ ನೇಮ್ಡ್ ಕಹಿನ್ ಖೋ ಗಯಾ ಮುಂತಾದ ಪುಸ್ತಕಗಳು ಸೇರಿವೆ.

ಇವು ಮಕ್ಕಳಿಗೆ ತುಂಬಾ ಇಷ್ಟವಾಗಿವೆ. ಅವರ ಪುಸ್ತಕಗಳನ್ನು ಅನೇಕ ಭಾಷೆಗಳಿಗೆ ಅನುವಾದಿಸಲಾಗಿದೆ ಮತ್ತು ಅವರ ಸಾಹಿತ್ಯವನ್ನು ಪ್ರಪಂಚದಾದ್ಯಂತ ಓದಲಾಗುತ್ತದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.